4. ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಸಿಬ್ಬಂದಿ ಮತ್ತು ಸಾಮಾನ್ಯ ವೆಚ್ಚ ಸಲುವಾಗಿ 2009–10 ನೇ ಸಾಲಿಗೆ ಮೂರನೇ ತ್ರೈಮಾಸಿಕ ಅವಧಿಗೆ ಸಹಾಯಾನುದಾನ ರೂ.48,00,000/– ನ್ನು ಕರ್ನಾಟಕ ವಿದ್ಯುತ್ ನಿಯಂತ್ರಣಾ ಆಯೋಗಕ್ಕೆ ಬಿಡುಗಡೆ ಮಾಡುವ ಬಗ್ಗೆ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಇಎನ್ 39 ಪಿಎಸ್ಆರ್ 2009, ಬೆಂಗಳೂರು, ದಿನಾಂಕ: 29ನೇ ಡಿಸೆಂಬರ್ 2009.

2009–10 ನೇ ಹಣಕಾಸು ವರ್ಷದ ಮೂರನೇ ತ್ರೈಮಾಸಿಕ ಅವಧಿಗೆ 2801–80–101–1–07 (Grant-in-aid) (Non Plan) ರಲ್ಲಿ ಸಹಾಯಾನುದಾನ ಲೆಕ್ಕ ಶೀರ್ಷಿಕೆಯಡಿ ಸಿಬ್ಬಂದಿ ಮತ್ತು ಸಾಮಾನ್ಯ ವೆಚ್ಚ ಸಲುವಾಗಿ ರು.48,00,000/– (ನಲವತ್ತೆಂಟು ಲಕ್ಷ ರೂ. ಗಳು. ಮಾತ್ರ) ನ್ನು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗಕ್ಕೆ ಬಿಡುಗಡೆ ಮಾಡಿದೆ.

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆಯ ಇವರ ಮೇಲು ರುಜುವನ್ನು "Payees Receipt" ರಲ್ಲಿ ಪಡೆದು ಹಣವನ್ನು ಪಡೆಯತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ : ಎಫ್‌ಡಿ 21 ಟಿಎಫ್‌ಪಿ 2006 ದಿನಾಂಕ : 02–09–2006 ಮತ್ತು ಎಫ್‌ಡಿ 1 ಟಿಎಫ್‌ಪಿ 2008 ದಿನಾಂಕ : 16–05–2008 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಎಸ್.ಜೆ. ಸಂಪತ್ ಕುಮಾರ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್. 23 ಇಂಧನ ಇಲಾಖೆ

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ : ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಗೆ ಹೆಚ್ಚುವರಿಯಾಗಿ 2 ವಿಶೇಷ ಭೂಸ್ವಾಧೀನಾಧಿಕಾರಿ ಹುದ್ದೆಗಳನ್ನು (ಮೈಸೂರು ವಲಯ ಹಾಗೂ ಗುಲ್ಬರ್ಗಾ ವಲಯ) ಮತ್ತು ಗುಲ್ಬರ್ಗಾ ವಲಯಕ್ಕೆ ಸಿಬ್ಬಂದಿ ವರ್ಗದ ಹುದ್ದೆಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ : ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು ಇವರ ಪತ್ರ ಸಂಖ್ಯೆ: ಕೆಐಎಡಿಬಿ/ ಕೇಂ.ಕ/ ಭೂಸ್ವಾ/1963/8427/ 08-09, ದಿನಾಂಕ : 24-10-2008, 06-10-2009.

ಪ್ರಸ್ತಾವನೆ :

ಮೇಲೆ ಓದಲಾದ (1) ರಲ್ಲಿರುವ ದಿನಾಂಕ 24-10-2008 ಹಾಗೂ 06-10-2009ರ ಪತ್ರಗಳಲ್ಲಿ 2009-10 ನೇ ಸಾಲಿನಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶಗಳನ್ನು ಸ್ಥಾಪಿಸಲು ಮತ್ತು ರಾಜ್ಯ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ/ ರಾಜ್ಯ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಗಳಲ್ಲಿ ಅನುಮೋದನೆ ನೀಡುವ ಏಕಘಟಕ ಸಂಕೀರ್ಣಗಳಿಗೆ/ ವಿಶೇಷ ವಿತ್ತ ವಲಯ (SEZ) ಗಳಿಗೆ ರಾಜ್ಯದಲ್ಲಿ ಸುವರ್ಣ ಕಾರಿಡಾರ್ ಯೋಜನೆ ಅಡಿಯಲ್ಲಿ ಸ್ಥಾಪಿಸುವ ಕಾರಿಡಾರ್‌ಗಳಿಗೆ ಹಾಗೂ ಚೆನ್ನೈ-ಬೆಂಗಳೂರು-ಮುಂಬೈ ಇಂಡಸ್ಟ್ರಿಯಲ್ ಕಾರಿಡಾರ್ ಮತ್ತು ಲ್ಯಾಂಡ್ ಬ್ಯಾಂಕ್ ಯೋಜನೆಯಡಿಯಲ್ಲಿನ ಇನ್ನಿತರೆ ಯೋಜನೆಗಳಿಗಾಗಿ ಸುಮಾರು 50000 ಎಕರೆ ಜಮೀನನ್ನು ಸ್ವಾಧೀನಪಡಿಸಿ ಅಭಿವೃದ್ಧಿಪಡಿಸಬೇಕಾಗಿದೆ. 2010ನೇ ಸಾಲಿನಲ್ಲಿ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶವನ್ನು ನಡೆಸಲು ಸರ್ಕಾರವು ಉದ್ದೇಶಿಸಿರುತ್ತದೆ. ಈ ಕುರಿತು ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಈ ಭೂಸ್ವಾಧೀನ ಪ್ರಕ್ರಿಯೆಗೆ ಭೂಸ್ವಾಧೀನ ಅಧಿಕಾರಿಗಳ ಅವಶ್ಯಕತೆ ಹೆಚ್ಚಾಗಿರುತ್ತದೆ. ಹೆಚ್ಚುವರಿ ವಿಶೇಷ ಭೂಸ್ವಾಧೀನಾಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಸೃಜಿಸುವ ಅಗತ್ಯತೆ ಇರುತ್ತದೆ. ಹಾಲಿ ಇರುವ ವಿಶೇಷ ಭೂಸ್ವಾಧೀನಾಧಿಕಾರಿ ಮತ್ತು ಸಿಬ್ಬಂದಿಯಿಂದ ನಿರೀಕ್ಷಿತ ಪ್ರಗತಿಯನ್ನು ಸಾಧಿಸಲು ಸಾಧ್ಯವಾಗುತ್ತಿಲ್ಲ. ಅಲ್ಲದೆ ಸ್ಥಳ ತನಿಖೆ ಕೈಗೊಂಡು ಪ್ರಸ್ತಾವನೆಗಳನ್ನು ತ್ವರಿತಗತಿಯಲ್ಲಿ ತಯಾರಿಸಬೇಕಾಗಿರುತ್ತದೆ. ಹಾಲಿ ಇರುವ ವಿಶೇಷ ಭೂಸ್ವಾಧೀನಾಧಿಕಾರಿಗಳಿಗೆ ಕಾರ್ಯದ ಒತ್ತಡ ಹೆಚ್ಚಾಗಿದ್ದು ಕೂಡಲೇ ವಿಶೇಷ ಭೂಸ್ವಾಧೀನಾಧಿಕಾರಿಗಳ ಹುದ್ದೆಗಳನ್ನು ಸೃಜಿಸುವುದಲ್ಲದೆ ಸಿಬ್ಬಂದಿಯನ್ನು ಸೃಜಿಸುವುದು ತುಂಬಾ ಅವಶ್ಯವಾಗಿರುತ್ತದೆ. ಮೈಸೂರು ವಲಯ ಕಚೇರಿಯಲ್ಲಿ ಅವಶ್ಯಕವಿರುವ ಇತರೆ ಸಿಬ್ಬಂದಿ ವರ್ಗದವರು ಈಗಾಗಲೇ ನಿಯೋಜನೆ ಹಾಗೂ ಹೊರಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವುದರಿಂದ ಸದರಿ ಕಚೇರಿಯ ಸಿಬ್ಬಂದಿಯನ್ನು ಸೃಜಿಸುವ ಅವಶ್ಯಕತೆ ಇರುವುದಿಲ್ಲ. ಗುಲ್ಬರ್ಗಾ ವಲಯದಲ್ಲಿ ಸಿಬ್ಬಂದಿ ವರ್ಗದ ಹುದ್ದೆಗಳನ್ನು ಸೃಜಿಸುವ ಅವಶ್ಯಕತೆ ಇರುತ್ತದೆ ಎಂದು ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ ಇವರು ತಿಳಿಸಿರುತ್ತಾರೆ.

ಮಂಡಳಿಯ ವ್ಯಾಪ್ತಿಯಲ್ಲಿ ಹಾಲಿ ಉತ್ತರ ಕರ್ನಾಟಕ ಭಾಗದಲ್ಲಿ ಧಾರವಾಡ ಜಿಲ್ಲಾ ಕೇಂದ್ರದಲ್ಲಿ ವಿಶೇಷ ಭೂಸ್ವಾಧೀನಾಧಿಕಾರಿಯವರ ಕಚೇರಿಯಿದ್ದು, ಈ ಕಚೇರಿಯ ವ್ಯಾಪ್ತಿಗೆ ಬೆಳಗಾವಿ ಮತ್ತು ಗುಲ್ಬರ್ಗ ಕಂದಾಯ ವಿಭಾಗಗಳಿಗೆ ಸೇರಿದ 12 ಜಿಲ್ಲೆಗಳಿದ್ದು, ಈ ಕಚೇರಿಯ ಕಾರ್ಯವ್ಯಾಪ್ತಿಯು ಬಹಳ ವಿಶಾಲವಾಗಿರುತ್ತದೆ ಮತ್ತು ಈ 12 ಜಿಲ್ಲೆಗಳಿಗೆ ಸಂಬಂಧಿಸಿದ ಭೂಸ್ವಾಧೀನ ಪ್ರಕ್ರಿಯೆಯನ್ನು ಕೇವಲ ಒಂದು ಕಚೇರಿಯಿಂದ ನಿರ್ವಹಿಸುವುದು ಕಷ್ಟ ಸಾಧ್ಯವಾಗಿರುತ್ತದೆ. ಈ ಜಿಲ್ಲೆಗಳಲ್ಲಿ ಲ್ಯಾಂಡ್ ಬ್ಯಾಂಕ್ ಯೋಜನೆಯಂತೆ ಸುಮಾರು 30,000.00 ಎಕರೆ ಜಮೀನನ್ನು ಭೂಸ್ವಾಧೀನಪಡಿಸಲು ತ್ವರಿತವಾಗಿ ಕ್ರಮ ಜರುಗಿಸಲಾಗುತ್ತಿದೆ. ಅದರಂತೆ ಗುಲ್ಬರ್ಗಾ ವಿಭಾಗದ ಎಲ್ಲಾ ಜಿಲ್ಲೆಗಳಲ್ಲಿನ ಭೂಸ್ವಾಧೀನ ಕಾರ್ಯಕ್ಕೋಸ್ಕರ ಗುಲ್ಬರ್ಗದಲ್ಲಿ ಒಂದು ವಿಶೇಷ ಭೂಸ್ವಾಧೀನಾಧಿಕಾರಿಯವರ ವಲಯ ಕಚೇರಿಯನ್ನು ಸ್ಥಾಪಿಸುವುದು ಅವಶ್ಯವಾಗಿರುತ್ತದೆ. ಅದೇ ರೀತಿ ಮೈಸೂರು ವಿಭಾಗದಲ್ಲಿನ ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ ಮತ್ತು ಕೊಡಗು ಜಿಲ್ಲೆಗಳು ಸೇರಿದಂತೆ ಒಂದು ಮೈಸೂರು ಜಿಲ್ಲಾ ಕೇಂದ್ರದಲ್ಲಿ ವಿಶೇಷ ಭೂಸ್ವಾಧೀನಾಧಿಕಾರಿಯವರ ವಲಯ ಕಚೇರಿಯನ್ನು ಸ್ಥಾಪಿಸುವುದು ಅವಶ್ಯವಿರುತ್ತದೆ.

ಆದ್ದರಿಂದ ಮೇಲ್ಕಂಡಂತೆ ಪ್ರಸ್ತುತ ಮಂಡಳಿಯಲ್ಲಿ ಮೈಸೂರು ಮತ್ತು ಗುಲ್ಬರ್ಗ ವಲಯಕ್ಕಾಗಿ ಎರಡು ವಿಶೇಷ ಭೂಸ್ವಾಧೀನಾಧಿಕಾರಿಯವರ ಹುದ್ದೆ ಸೃಜಿಸಬೇಕಾಗಿದೆ ಹಾಗೂ ವಲಯ ಕಚೇರಿಗಳಿಗೆ ಅಗತ್ಯ ಸಿಬ್ಬಂದಿಯನ್ನು ಕೂಡ ನಿಯೋಜನೆ ಮೇರೆಗೆ ನೇಮಕ ಮಾಡಿಕೊಳ್ಳಬೇಕಾಗಿದೆ. ಸದರಿ ಪ್ರಸ್ತಾವನೆಯನ್ನು ಸರ್ಕಾರವು ಪುರಸ್ಕರಿಸಿ ಎರಡು ವಲಯ ಕಚೇರಿ ಹಾಗೂ ವಿಶೇಷ ಭೂಸ್ವಾಧೀನಾಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ನೇಮಕ ಮಾಡುವ ಕುರಿತು ಅನುಮೋದನೆ ನೀಡಲು ಸರ್ಕಾರವನ್ನು ಕೋರಿರುತ್ತಾರೆ. ಹಾಗೂ ಪ್ರಸ್ತಾಪಿಸಿರುವ ಹುದ್ದೆಗಳನ್ನು ಸೃಜಿಸಿದಲ್ಲಿ ಮಂಡಳಿಯೇ ಈ ಹುದ್ದೆಗಳಿಗೆ ತಗಲುವ ವೆಚ್ಚವನ್ನು ಭರಿಸಲು ಶಕ್ತವಾಗಿರುತ್ತದೆ ಎಂದು ತಿಳಿಸಲಾಗಿದೆ. ಸದರಿ ಪ್ರಸ್ತಾವನೆಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ ಮೈಸೂರು ಹಾಗೂ ಗುಲ್ಬರ್ಗಾ ವಲಯಗಳಿಗೆ ತಲಾ ಒಂದು ವಿಶೇಷ ಭೂಸ್ವಾಧೀನಾಧಿಕಾರಿಯ ಹುದ್ದೆಯನ್ನು ಹಾಗೂ ಗುಲ್ಬರ್ಗಾ ವಲಯಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ಹುದ್ದೆಗಳನ್ನು ಸೃಜಿಸಬೇಕಾಗಿರುವುದರಿಂದ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ಸಿಐ 286 ಎಸ್‌ಪಿಕ್ಯೂ 2008, ಬೆಂಗಳೂರು, ದಿನಾಂಕ: 21ನೇ ಡಿಸೆಂಬರ್ 2009.

I ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಲ್ಲಿನ ಹೆಚ್ಚಿನ ಕಾರ್ಯ ಒತ್ತಡವನ್ನು ನಿಭಾಯಿಸಲು ಮಂಡಳಿಯಲ್ಲಿ ಈ ಕೆಳಕಂಡಂತೆ ಮೈಸೂರು

ಹಾಗೂ ಗುಲ್ಬರ್ಗಾ ವಲಯಕ್ಕೆ ತಲಾ ಒಂದು ವಿಶೇಷ ಭೂಸ್ವಾಧೀನಾಧಿಕಾರಿಯ ಹುದ್ದೆಯನ್ನು ಹಾಗೂ ಗುಲ್ಬರ್ಗಾ ವಲಯಕ್ಕೆ ಸಂಬಂಧಿಸಿದಂತೆ ಸಿಬ್ಬಂದಿ ಹುದ್ದೆಗಳನ್ನು ಸೃಜಿಸಿ ಆದೇಶಿಸಲಾಗಿದೆ.

ಕ್ರಮ ಸಂಖ್ಯೆ	ಹುದ್ದೆಯ ಹೆಸರು	ಸೃಜಿಸಲಾಗಿರುವ ಹುದ್ದೆ	ವಲಯ
1	ವಿಶೇಷ ಭೂಸ್ವಾಧೀನಾಧಿಕಾರಿ	2	ಗುಲ್ಬರ್ಗಾ ಮತ್ತು ಮೈಸೂರು
2	ಶಿರಸ್ತೇದಾರರು	1	ಗುಲ್ಬರ್ಗಾ
3	ಪ್ರಥಮ ದರ್ಜೆ ಸಹಾಯಕ / ಕಂದಾಯ ನಿರೀಕ್ಷಕರು	4	ಗುಲ್ಬರ್ಗಾ
4	ಪ್ರಥಮ ದರ್ಜೆ ಸರ್ವೆಯರ್	2	ಗುಲ್ಬರ್ಗಾ
5	ಶೀಘ್ರಲಿಪಿಗಾರರು	1	ಗುಲ್ಬರ್ಗಾ
6	ಕಂಪ್ಯೂಟರ್ ಆಪರೇಟರ್ / ಟೈಪಿಸ್ಟ್	1	ಗುಲ್ಬರ್ಗಾ
7	ಅಟೆಂಡರ್	1	ಗುಲ್ಬರ್ಗಾ
	ಒಟ್ಟು	12 ಹುದ್ದೆಗಳು	

II ಮೇಲ್ಕಾಣಿಸಿದ ಎಲ್ಲಾ ಹುದ್ದೆಗಳ ವೆಚ್ಚವನ್ನು ಕೆಐಎಡಿಬಿಯ ಸಂಪನ್ಮೂಲಗಳಿಂದಲೇ ಭರಿಸತಕ್ಕದ್ದು.

III ವಿಶೇಷ ಭೂಸ್ವಾಧೀನಾಧಿಕಾರಿಗಳ ಹುದ್ದೆಗಳನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಕೆ.ಎ.ಎಸ್., ಕಿರಿಯ ಶ್ರೇಣಿಯ ಅಧಿಕಾರಿಗಳನ್ನು ನಿಯೋಜನೆ ಮೇರೆಗೆ ಪಡೆಯಲು ಹಾಗೂ ಶಿರಸ್ತೇದಾರ, ಪ್ರಥಮ ದರ್ಜೆ ಸಹಾಯಕ / ಕಂದಾಯ ನಿರೀಕ್ಷಕರು, ಪ್ರಥಮ ದರ್ಜೆ ಸರ್ವೆಯರ್ ಇವರುಗಳ ಸೇವೆಯನ್ನು ಕಂದಾಯ ಇಲಾಖೆಯಿಂದ ನಿಯೋಜನೆ ಮೇಲೆ ಪಡೆಯಲು ಹಾಗೂ ಶೀಘ್ರಲಿಪಿಗಾರರು, ಕಂಪ್ಯೂಟರ್ ಆಪರೇಟರ್ / ಬೆರಳಚ್ಚುಗಾರರು / ಅಟೆಂಡರ್ ಇವರುಗಳ ಸೇವೆಯನ್ನು ಹೊರಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಮಂಡಳಿಯಲ್ಲಿ ಕ್ರಮ ಕೈಗೊಳ್ಳತಕ್ಕದ್ದು.

IV ಮೇಲ್ಕಾಣಿಸಿದಂತೆ ಸೃಜಿಸಲಾಗಿರುವ ಹುದ್ದೆಗಳನ್ನು ಮಂಡಳಿಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ವೃಂದ ಬಲದಲ್ಲಿ ಸೇರಿಸಿಕೊಳ್ಳಲು ಕ್ರಮ ವಹಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ : FD 1866 Exp-I :09, ದಿನಾಂಕ 14-12-2009 ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

(ಕೆ.ಎಂ. ವೀರಯ್ಯ)

ಸರ್ಕಾರದ ಅಧೀನ ಕಾರ್ಯದರ್ಶಿ, (ಕೈ.ಅ)

ಪಿ.ಆರ್. 24 ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ತಿದ್ದುಪಡಿ ಆದೇಶ

ಸಂಖ್ಯೆ: ಕಸಂವಾಪ್ರ 113 ಸ್ವಾಮರ 2009, ಬೆಂಗಳೂರು, ದಿನಾಂಕ 19ನೇ ಡಿಸೆಂಬರ್ 2009

ಸರ್ಕಾರದ ಆದೇಶ ಸಂಖ್ಯೆ : ಕಸಂವಾಪ್ರ 113 ಸ್ವಾಮರ 2009ರ ದಿನಾಂಕ 9-10-2009 ನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ.ಕೆ.ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 25 ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಗೌರಿಬಿದನೂರು ತಾಲ್ಲೂಕು, ವಿದುರಾಶ್ವತ್ಥದಲ್ಲಿ ಸ್ವಾತಂತ್ರ್ಯ ಯೋಧರ ಸ್ಮಾರಕ ನಿರ್ಮಾಣದ ಬಗ್ಗೆ.

ಉಲ್ಲೇಖ : ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪತ್ರ ಸಂಖ್ಯೆ ಎಂಪಿಎಲ್ಎಡಿಸಿಆರ್.20/09-10, ದಿನಾಂಕ 16-10-2009.

ಪ್ರಸ್ತಾವನೆ :

2009–10ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಗೌರಿಬಿದನೂರು ತಾಲ್ಲೂಕು ವಿದುರಾಶ್ವತ್ಥದಲ್ಲಿ ಸ್ವಾತಂತ್ರ್ಯ ಯೋಧರ ಸ್ಮಾರಕ ನಿರ್ಮಾಣ ಮಾಡಲಾಗುವುದೆಂದು ಘೋಷಣೆ ಮಾಡಿರುತ್ತಾರೆ.

ಮೇಲೆ ಓದಲಾದ ದಿನಾಂಕ 16–10–2009 ರ ಜಿಲ್ಲಾಧಿಕಾರಿಗಳು ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪತ್ರದಲ್ಲಿ ಗೌರಿಬಿದನೂರು ತಾಲ್ಲೂಕು ವಿದುರಾಶ್ವತ್ಥದಲ್ಲಿ ಸ್ವಾತಂತ್ರ್ಯ ಯೋಧರ ಸ್ಮಾರಕ ನಿರ್ಮಾಣ ಮಾಡಲು ರೂ.98.00 ಲಕ್ಷಗಳ ಅಂದಾಜು ಪಟ್ಟಿ ಹಾಗೂ ನೀಲಿ ನಕ್ಷೆಯನ್ನು ತಯಾರಿಸಿ, ಈ ಹಣವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ. ಇದನ್ನು ಕಾರ್ಯಾನುಷ್ಠಾನಗೊಳಿಸುವ ಬಗ್ಗೆ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 49, ಸ್ವಾಪ್ರನಿ 2009, ಬೆಂಗಳೂರು, ದಿನಾಂಕ: 29ನೇ ಡಿಸೆಂಬರ್ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಗೌರಿಬಿದನೂರು ತಾಲ್ಲೂಕು ವಿದುರಾಶ್ವತ್ಥದಲ್ಲಿ ಸ್ವಾತಂತ್ರ್ಯ ಯೋಧರ ಸ್ಮಾರಕ ನಿರ್ಮಾಣ ಮಾಡಲು ಈ ಕೆಳಕಂಡ ಷರತ್ತುಗಳನ್ನು ವಿಧಿಸಿ, ರೂ. 98.00 ಲಕ್ಷ (ರೂಪಾಯಿ ತೊಂಬತ್ತೆಂಟು ಲಕ್ಷಗಳು ಮಾತ್ರ) ಗಳನ್ನು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಚದಲಪುರ ಇವರಿಗೆ ಬಿಡುಗಡೆ ಮಾಡಿದೆ ಹಾಗೂ ಈ ಅನುದಾನದಲ್ಲಿ ಕಾಮಗಾರಿ ಕೈಗೊಳ್ಳಲು ಆಡಳಿತಾತ್ಮಕ ಮಂಜೂರಾತಿ ನೀಡಿದೆ.

ಷರತ್ತುಗಳು :

1. ಕಾಮಗಾರಿಯನ್ನು ಟೆಂಡರ್ ಕರೆದು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಕಾಯ್ದೆ 1999 ಹಾಗೂ ಅದರ ನಿಯಮಗಳು 2000 ರಂತೆ ಕ್ರಮ ಕಾಮಗಾರಿ ಕೈಗೊಂಡ ನಂತರ ಪ್ರಗತಿ ಆಧರಿಸಿ, ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡುವುದು.
2. ಈ ಅನುದಾನವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಬಳಸತಕ್ಕದ್ದು.
3. ಕಾಮಗಾರಿಯನ್ನು ಪೂರ್ಣಗೊಳಿಸಲು ಸಮಯ ನಿಗಧಿಪಡಿಸಿಕೊಂಡು ಆ ಸಮಯದೊಳಗೆ ಪೂರ್ಣಗೊಳಿಸುವುದು.
4. ಕಾಮಗಾರಿಯನ್ನು ಜಿಲ್ಲಾಧಿಕಾರಿಗಳು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಮೇಲುಸ್ತುವಾರಿಯಲ್ಲಿ ಕೈಗೊಳ್ಳುವುದು.
5. ಕಾಮಗಾರಿಯ ಅಂದಾಜು ಪಟ್ಟಿಯನ್ನು ರೂ.98.00 ಲಕ್ಷಗಳಿಗೆ ನಿಗದಿಪಡಿಸಿಕೊಳ್ಳುವುದು ಹಾಗೂ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸುವುದು.
6. ಇದು ಒಂದು ಬಾರಿಯ ಅನುದಾನವಾಗಿರುವುದರಿಂದ ಮುಂದಿನ ನಿರ್ವಹಣಾ ವೆಚ್ಚವನ್ನು ಜಿಲ್ಲಾಡಳಿತದಿಂದ ಭರಿಸತಕ್ಕದ್ದು.

ಈ ಅನುದಾನವನ್ನು 2009–10ನೇ ಸಾಲಿನ ಲೆಕ್ಕ ಶೀರ್ಷಿಕೆ 2205–00–800–0–10–059 (ಸ್ವಾತಂತ್ರ್ಯ ಹೋರಾಟಗಾರರ ಸ್ಮಾರಕ ಅಭಿವೃದ್ಧಿ) ಇದರಡಿ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಆಇ 1143 ವೆಚ್ಚ–7 2009, ದಿನಾಂಕ 8–12–2009 ಹಾಗೂ ಯೋಜನಾ ಇಲಾಖೆಯ ಸಹಮತಿಯನ್ನು ಟಿಪ್ಪಣಿ ಸಂಖ್ಯೆ: ಯೋಇ/115/ಜಶ/2009, ದಿನಾಂಕ 24–11–2009 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಂ.ಕೆ.ಧರ್ಮರಾಜಪ್ಪ
ಸರ್ಕಾರದ ಅಧೀನ ಕಾರ್ಯದರ್ಶಿ
ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ
(ಆಡಳಿತ ಕನ್ನಡ)

ಪಿ.ಆರ್. 26

ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಸಚಿವಾಲಯ

ವಿಷಯ : ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, (ಆಡಳಿತ ಕನ್ನಡ) ಶಾಖೆಯ ಮೋದಿ ಜೆರಾಕ್ಸ್ ಯಂತ್ರದ ಅರ್ಧ ವಾರ್ಷಿಕ ನಿರ್ವಹಣಾ ಗುತ್ತಿಗೆ ನೀಡುವ ಬಗ್ಗೆ.

ಓದಲಾಗಿದೆ : 1. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 6 ಡಿಎಸ್‌ವೈ 2009, ದಿನಾಂಕ 19–09–2009.
2. ದಿನಾಂಕ 23–5–2009 ರ ಪತ್ರ ಸಂಖ್ಯೆ ಕಸಂವಾಪ್ರ 113 ಸ್ವೀಮರ 2009.
3. ದಿನಾಂಕ 20–10–2009ರ ಕಾಂಪು ಗ್ರಾಫಿಕ್ಸ್ ಸಿಸ್ಟಮ್ಸ್‌ರವರ ಬಿಲ್ ಸಂಖ್ಯೆ 4153.

ಪ್ರಸ್ತಾವನೆ :

ಮೇಲೆ ಓದಲಾದ (2)ರ ಸರ್ಕಾರದ ಪತ್ರದಲ್ಲಿ ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಡಳಿತ ಕನ್ನಡ ಶಾಖೆಯಲ್ಲಿರುವ ಮೋದಿ ಕಂಪನಿಯ ಜೆರಾಕ್ಸ್ ಯಂತ್ರದ ವಾರ್ಷಿಕ ಕಾರ್ಯನಿರ್ವಹಣಾ ಗುತ್ತಿಗೆಯನ್ನು ನೀಡುವ ಸಲುವಾಗಿ ದರ ಪಟ್ಟಿಯನ್ನು 03 ಕಂಪನಿಗಳಿಂದ ಕೋರಲಾಗಿತ್ತು.

ಕಾಪಿಯರ್ ಯಂತ್ರದ ವಾರ್ಷಿಕ ನಿರ್ವಹಣಾ ಗುತ್ತಿಗೆಗಾಗಿ ಈ ಕೆಳಕಂಡ ಕಂಪನಿಗಳು ದರಪಟ್ಟಿಯನ್ನು ನೀಡಿದ್ದವು. ಅದರ ವಿವರಗಳು ಈ ಕೆಳಗಿನಂತಿವೆ.

ಕ್ರ.ಸಂ.	ಕಂಪನಿಯ ಹೆಸರು	ವಿವರ	ಒಟ್ಟು ರೂ.ಗಳಲ್ಲಿ (ಸರ್ವೀಸ್ ಟ್ಯಾಕ್ಸ್ 10.3% ಸೇರಿ)
1	ಕಾಂಪು ಗ್ರಾಫಿಕ್ಸ್ ಸಿಸ್ಟಮ್ಸ್	ಎ.ಎಂ.ಸಿ	10,478–00
2	ತೀರ್ಥಂಕರ್ ಎಂಟರ್‌ಪ್ರೈಸಸ್	ಎ.ಎಂ.ಸಿ	11,030–00
3	ಭಾರತಿ ಎಂಟರ್‌ಪ್ರೈಸಸ್	ಎ.ಎಂ.ಸಿ	11,581–50

ಈ ಮೇಲ್ಕಂಡ ಕಂಪನಿಗಳಿಂದ ಪಡೆದ ದರಗಳನ್ನು ಅವಲೋಕಿಸಿ ಅತಿ ಕಡಿಮೆ ದರ ನೀಡಿರುವ ಬೆಂಗಳೂರಿನ ಕಾಂಪು ಗ್ರಾಫಿಕ್ಸ್ ಸಿಸ್ಟಮ್ಸ್, ನಂ.36/3, ಆಂಜನೇಯ ಸ್ವಾಮಿ ದೇವಸ್ಥಾನ ರಸ್ತೆ, ಮಾರಪ್ಪ ಗಾರ್ಡನ್ ಬೆನ್‌ಸನ್ ಟೌನ್ ಪೋಸ್ಟ್, ಬೆಂಗಳೂರು–46, ರವರಿಗೆ ರೂ.10,478/– (ಹತ್ತು ಸಾವಿರದ ನಾಲ್ಕು ನೂರ ಎಪ್ಪತ್ತೆಂಟು ರೂ.ಗಳು ಮಾತ್ರ)ಗಳಿಗೆ ವಾರ್ಷಿಕ ಗುತ್ತಿಗೆ ನೀಡಲು ತೀರ್ಮಾನಿಸಿ ಸದರಿ ಕಂಪನಿಗೆ ಅರ್ಧ ವಾರ್ಷಿಕವಾಗಿ ಬಿಲ್ಲನ್ನು ಪಾವತಿಸಲಿಚ್ಛಿಸಿ ಅರ್ಧ ವಾರ್ಷಿಕವಾಗಿ ಪಾವತಿಸಬೇಕಾದ ಮೊತ್ತ ರೂ. 5,139/– (ಐದು ಸಾವಿರದ ನೂರ ಮೂವತ್ತೊಂಬತ್ತು ರೂಪಾಯಿಗಳು ಮಾತ್ರ) ಪಾವತಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ಕಸಂವಾಪ್ರ 113, ಸ್ವೀಮರ 2009, ಬೆಂಗಳೂರು, ದಿನಾಂಕ: 19ನೇ ಡಿಸೆಂಬರ್ 2009.

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ ಆಡಳಿತ ಕನ್ನಡ ಶಾಖೆಯಲ್ಲಿನ ಮೋದಿ ಕಂಪನಿಯ ಜೆರಾಕ್ಸ್ ಯಂತ್ರದ ವಾರ್ಷಿಕ ನಿರ್ವಹಣಾ ಗುತ್ತಿಗೆಯನ್ನು ನೀಡುವ ಸಲುವಾಗಿ 03 ಕಂಪನಿಗಳಿಂದ ದರ ಪಟ್ಟಿಯನ್ನು ಕರೆದಿದ್ದು ಅತಿ ಕಡಿಮೆ ದರ 9500–00 ರೂ.ಗಳನ್ನು ಸೂಚಿಸಿರುವ ಬೆಂಗಳೂರಿನ ಕಾಂಪು ಗ್ರಾಫಿಕ್ಸ್ ಸಿಸ್ಟಮ್ಸ್ ಕಂಪನಿಯ ದರ ರೂ. 9500–00 ಮತ್ತು ಶೇಕಡ 10.3 ಸರ್ವೀಸ್ ಟ್ಯಾಕ್ಸ್ ಸೇರಿ ಒಟ್ಟು ರೂ. 10,478/– (ಹತ್ತು ಸಾವಿರದ ನಾಲ್ಕು ನೂರ ಎಪ್ಪತ್ತೆಂಟು ರೂ.ಗಳು ಮಾತ್ರ) ವಾರ್ಷಿಕ ಗುತ್ತಿಗೆಯನ್ನು ನೀಡಲು ಉದ್ದೇಶಿಸಿ ಆ ಮೊತ್ತದಲ್ಲಿ ಅರ್ಧ ವಾರ್ಷಿಕವಾಗಿ ಬಿಲ್ಲನ್ನು ಪಾವತಿಸುವ ಸಲುವಾಗಿ ರೂ. 5,139/– (ಐದು ಸಾವಿರದ ನೂರ ಮೂವತ್ತೊಂಬತ್ತು ರೂಪಾಯಿಗಳು ಮಾತ್ರ) ಗಳನ್ನು ಪಾವತಿಸಲು ಆದೇಶ ನೀಡಿದೆ.

ಈ ವೆಚ್ಚವನ್ನು ಸರ್ಕಾರ ಆದೇಶ ಸಂಖ್ಯೆ ಸಿಆಸುಇ 6 ಡಿಎಸ್‌ವೈ 2009, ದಿನಾಂಕ 19–09–2009ರ ಆದೇಶದನ್ವಯ ಲೆಕ್ಕ ಶೀರ್ಷಿಕೆ 2052–00–090–0–01–051 (ಸಾಮಾನ್ಯ ವೆಚ್ಚಗಳು) (ಯೋಜನೇತರ) ಅಡಿಯಲ್ಲಿ ಭರಿಸುವುದು. ಕಾಂಪು ಗ್ರಾಫಿಕ್ಸ್ ಸಿಸ್ಟಮ್ಸ್ ಕಂಪನಿಗೆ ರೂ. 5,139/– (ಐದು ಸಾವಿರದ ನೂರ ಮೂವತ್ತೊಂಬತ್ತು ರೂಪಾಯಿಗಳು ಮಾತ್ರ) ಗಳ ಮೊತ್ತವನ್ನು ಸಿಆಸುಇ ಲೆಕ್ಕಪತ್ರ ಶಾಖೆಯು ಡಿ.ಸಿ. ಬಿಲ್ ಮೂಲಕ ಬಿಡುಗಡೆ ಮಾಡುವುದು.

ಕಾಂಪು ಗ್ರಾಫಿಕ್ಸ್ ಸಿಸ್ಟಮ್ಸ್ ಕಂಪನಿಯು ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆಯ, (ಆಡಳಿತ ಕನ್ನಡ) ಶಾಖೆಯಲ್ಲಿರುವ ಜೆರಾಕ್ಸ್ ಯಂತ್ರದ ವಾರ್ಷಿಕ ಗುತ್ತಿಗೆಯನ್ನು ನೀಡಿರುವುದರಿಂದ ಜೆರಾಕ್ಸ್ ಯಂತ್ರವನ್ನು ಸರಿಪಡಿಸಿ ಸಿ.ಆ.ಸು. ಇಲಾಖೆಯಿಂದ ನೀಡುವ ಮೊತ್ತಕ್ಕೆ ಸ್ವೀಕೃತಿ ನೀಡುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಎಂ.ಕೆ.ಧರ್ಮರಾಜಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿ.ಆರ್. 27 ಕನ್ನಡ ಮತ್ತು ಸಂಸ್ಕೃತಿ, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ

ಒಳಾಡಳಿತ ಸಚಿವಾಲಯ

ವಿಷಯ : ಶ್ರೀ ಪ್ರವೀಣ್‌ಬಾಬು, ಪ್ರೊ.ಪಿಎಸ್‌ಐ ರವರ ಖಾಯಂಪೂರ್ವ ಅವಧಿಯನ್ನು ವಿಸ್ತರಿಸುವ ಕುರಿತು.

ಓದಲಾಗಿದೆ: 1. ಡಿಜಿ ಮತ್ತು ಐಜಿಪಿ ರವರ ಪತ್ರ ಸಂಖ್ಯೆ: 46/ಸಿಬ್ಬಂದಿ–1/2007–08 ದಿನಾಂಕ 03–04–2008

2. ಸರ್ಕಾರದ ಆದೇಶ ಸಂಖ್ಯೆ: ಒಇ 1 ಪೊಸಇ 2008 ದಿನಾಂಕ 02–06–2009.

3. ಡಿಜಿ ಮತ್ತು ಐಜಿಪಿ ರವರ ಪತ್ತ ಸಂಖ್ಯೆ: 46/ಸಿಬ್ಬಂದಿ–1/2006–07 ದಿನಾಂಕ 30–06–2009 ಮತ್ತು 08–09–2009.

ಪ್ರಸ್ತಾವನೆ :

ಮೇಲೆ ಓದಲಾದ (1)ರ ಪತ್ರದಲ್ಲಿ ಡಿಜಿ ಮತ್ತು ಐಜಿಪಿ ರವರು ಶ್ರೀ ಪ್ರವೀಣ್‌ಬಾಬು, ಪ್ರೊ.ಪಿ.ಎಸ್.ಐ. ರವರ ವಿರುದ್ಧ ಚಾಲ್ತಿ ಶಿಕ್ಷೆಗಳು ಇರುವುದರಿಂದ ದಿನಾಂಕ 05–09–2007 ರಿಂದ 05–12–2008 ರವರೆಗೆ ಖಾಯಂ ಪೂರ್ವ ಅವಧಿಯನ್ನು ವಿಸ್ತರಿಸುವಂತೆ ಕೋರಿದ್ದರಿಂದ ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು, 1977ರ ನಿಯಮ 4 (1)(i)ರ ಮೇರೆಗೆ ವಿಸ್ತರಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಡಿಜಿ ಮತ್ತು ಐಜಿಪಿ ರವರು ಶ್ರೀ ಪವೀಣ್‌ಬಾಬು, ಪ್ರೊ.ಪಿ.ಎಸ್.ಐ. ರವರ ವಿರುದ್ಧ ಚಾಲ್ತಿ ದಂಡನೆ ಇರುವುದರಿಂದ ಹಾಗೂ ಇವರು ಕೆ.ಸಿ.ಎಸ್. (ಪರಿವೀಕ್ಷಣೆ) ನಿಯಮಗಳು, 1977ರ ನಿಯಮ 4

ಮತ್ತು 5(1) ರನ್ವಯ ಪಿ.ಎಸ್.ಐ. ಹುದ್ದೆಯ ಕಾರ್ಯಭಾರ ನಿರ್ವಹಿಸಲು ಸಮರ್ಥರಾಗಿರುವುದರಿಂದ ಇವರ ಖಾಯಂಪೂರ್ವ ಅವಧಿಯನ್ನು ದಿನಾಂಕ 06–12–2008 ರಿಂದ 05–09–2009 ರವರೆಗೆ ವಿಸ್ತರಿಸಲು ಕೋರಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ಒಇ 159 ಪೊಸಇ 2009, ಬೆಂಗಳೂರು, ದಿನಾಂಕ: 1ನೇ ಜನವರಿ 2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಪರಿಶೀಲಿಸಿ ಸರ್ಕಾರವು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು, 1977ರ ನಿಯಮ 4(1)(i) ರನ್ವಯ ಶ್ರೀ ಪವೀಣ್‌ಬಾಬು, ಪ್ರೊ.ಪಿ.ಎಸ್.ಐ. ರವರ ಖಾಯಂ ಪೂರ್ವ ಅವಧಿಯನ್ನು ದಿನಾಂಕ 06–12–2008 ರಿಂದ 05–09–2009 ರವರೆಗೆ ವಿಸ್ತರಿಸಿದೆ.

ವಿಸ್ತರಿಸಿದ ಪರಿವೀಕ್ಷಣಾ ಅವಧಿಗೆ ಕ.ನಾ.ಸೇ (ಪರಿವೀಕ್ಷಣೆ) ನಿಯಮಗಳು 1977ರ ನಿಯಮ 10ರ ಪ್ರಕಾರ ವಾರ್ಷಿಕ ವೇತನ ಬಡ್ತಿಗಳನ್ನು ನೀಡುವಂತಿಲ್ಲ. ಕಾಲ್ಪನಿಕವಾಗಿ ವಾರ್ಷಿಕ ವೇತನ ಬಡ್ತಿಗಳನ್ನು ಬಿಡುಗಡೆ ಮಾಡಿ ವೇತನವನ್ನು ನಿಗದಿಪಡಿಸುವುದು. ಹೀಗೆ ನಿಗದಿಪಡಿಸಿದ ವೇತನದ ಬಾಕಿಯನ್ನು ನೀಡಲು ಅವಕಾಶವಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.28

ಟಿ.ಎನ್. ರವಿಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ
(ಪೊಲೀಸ್ ಸೇವೆಗಳು)

ಕಂದಾಯ ಸಚಿವಾಲಯ

ವಿಷಯ : ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅಪೀಲು ಸಂಖ್ಯೆ : 2587/2009 ಶ್ರೀ ಹೆಚ್.ಎಸ್. ಶೇಖರಪ್ಪ ವಿರುದ್ಧ ತಹಶೀಲ್ದಾರ್, ಚಿಕ್ಕಮಗಳೂರು ಮತ್ತು ಇತರರು ಪ್ರಕರಣದ ಬಗ್ಗೆ ನ್ಯಾಯಾಲಯವು ದಿನಾಂಕ 24–08–2009ರಂದು ನೀಡಿರುವ ಮಧ್ಯಂತರ ಆದೇಶದ ಅನುಷ್ಠಾನ ಕುರಿತು.

ಓದಲಾಗಿದೆ:
1. ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ ಇವರ ಅ.ಸ.ಪತ್ರಸಂಖ್ಯೆ: ಭೂಉನಿ ಸಿಬ್ಬಂದಿ:ಶಿಸ್ತು 41/2009–10 ದಿನಾಂಕ 28–08–2009
2. ಶ್ರೀ ಆರ್. ರಂಗಸ್ವಾಮಯ್ಯ, ತಹಶೀಲ್ದಾರ್, ನಾಗಮಂಗಲ ತಾಲ್ಲೂಕು ಇವರ ಮನವಿ ದಿನಾಂಕ 31–08–2009.

ಪ್ರಸ್ತಾವನೆ :

ಉಲ್ಲೇಖ (1)ರಲ್ಲಿ ಜಿಲ್ಲಾಧಿಕಾರಿಗಳು, ಚಿಕ್ಕಮಗಳೂರು ಜಿಲ್ಲೆ ಇವರು ತಮ್ಮ ಅರೆ ಸರ್ಕಾರಿ ಪತ್ರದಲ್ಲಿ ಈ ಕೆಳಕಂಡಂತೆ ತಿಳಿಸಿರುತ್ತಾರೆ.

ಚಿಕ್ಕಮಗಳೂರು ತಾಲ್ಲೂಕು ಹಿರೇಗೌಜ ಗ್ರಾಮದ ಸರ್ವೆ ನಂ. 148/3ಎ1ರ 3–00 ಎಕರೆ ಶ್ರೀ ಸದಾಶಿವ ಬಿನ್ ಪುಟ್ಟಪ್ಪ ಎಂಬುವರ ಖಾತೆಯ ಖುಷ್ಕಿ ಹಿಡುವಳಿ ಜಮೀನಿನ ಪೈಕಿ 0.18 ಗುಂಟೆ ಜಮೀನನ್ನು ಬಾಜುದಾರರಾದ ಶ್ರೀ ಹೆಚ್.ಎಸ್. ಶೇಖರಪ್ಪ ಎಂಬುವರು ಒತ್ತುವರಿ ಮಾಡಿರುವುದನ್ನು ಬಿಡಿಸಿ ಕೊಡಬೇಕೆಂದು ಠಾಣಾಧಿಕಾರಿ, ಸಖರಾಯಪಟ್ಟಣ ಪೊಲೀಸ್ ಠಾಣೆ ಇವರಿಗೆ ತಹಶೀಲ್ದಾರ್, ಚಿಕ್ಕಮಗಳೂರು ಇವರು ಪತ್ರದ ನಂ.ಟಿಕ್ಯೂಹೆಚ್‌ಬಿ 174/2007–08 ದಿನಾಂಕ 29–04–2008ರಂತೆ ಆದೇಶ ಮಾಡಿರುವುದರ ವಿರುದ್ಧ ರಿಟ್ ಅರ್ಜಿ ನಂ 13903/2008ರಂತೆ ಶ್ರೀ ಹೆಚ್.ಎಸ್. ಶೇಖರಪ್ಪ ಎಂಬುವರು ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಮುಂದೆ ರಿಟ್ ಅರ್ಜಿ ಸಲ್ಲಿಸಿದ್ದರು. ಪ್ರಕರಣವು ನ್ಯಾಯಾಲಯದ ದಿನಾಂಕ 11–2–2009ರ ಆದೇಶದ ಪ್ರಕಾರ ಇತ್ಯರ್ಥವಾಗಿರುತ್ತದೆ. ಈ ಆದೇಶದ ವಿರುದ್ಧ ಶ್ರೀ ಹೆಚ್.ಎಸ್. ಶೇಖರಪ್ಪ ಎಂಬುವರು ರಿಟ್ ಅಪೀಲು ನಂ. 2587/2009ರಂತೆ ಕರ್ನಾಟಕ ಉಚ್ಚ ನ್ಯಾಯಾಲಯದ ವಿಭಾಗೀಯ ಪೀಠದ ಮುಂದೆ ರಿಟ್ ಅಪೀಲು ಸಲ್ಲಿಸಿದ್ದಾರೆ. ಗೌರವಾನ್ವಿತ ಉಚ್ಚ ನ್ಯಾಯಾಲಯವು ದಿನಾಂಕ 24–08–2009ರಂದು ಮಧ್ಯಂತರ ಆದೇಶ ನೀಡಿ ಸಂಬಂಧಪಟ್ಟ ಕಂದಾಯಾಧಿಕಾರಿಗಳು ಮತ್ತು ಪೊಲೀಸ್ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಿದ ಬಗ್ಗೆ ಅಥವಾ ಕ್ರಮ ಜರುಗಿಸಲು ಪ್ರಸ್ತಾಪಿಸಿದ ಬಗ್ಗೆ ಸಂಬಂಧಪಟ್ಟ ಜಿಲ್ಲಾಧಿಕಾರಿ ಮತ್ತು ಪೊಲೀಸ್ ಅಧೀಕ್ಷಕರಿಂದ ಮಾಹಿತಿ ಪಡೆದುಕೊಳ್ಳುವಂತೆ ಸರ್ಕಾರಿ ವಕೀಲರಿಗೆ ನಿರ್ದೇಶನ ನೀಡಿರುವುದಾಗಿ ಉಚ್ಚ ನ್ಯಾಯಾಲಯದ ಸರ್ಕಾರಿ ವಕೀಲರು ಫ್ಯಾಕ್ಸ್ ಸಂದೇಶ ದಿನಾಂಕ 25–08–2008ರ ಮೂಲಕ ನ್ಯಾಯಾಲಯದ ಉದೃತ ಭಾಗದೊಂದಿಗೆ ತಿಳಿಸಿದ್ದಾರೆ.

ಪ್ರಕರಣದ ಬಗ್ಗೆ ತಹಶೀಲ್ದಾರ್, ಚಿಕ್ಕಮಗಳೂರು ಇವರ ಕಚೇರಿಯ ಕಡತ ಹಾಗೂ ದಾಖಲೆಗಳನ್ನು ಪಡೆದು ಪರಿಶೀಲಿಸಲಾಗಿ, ಚಿಕ್ಕಮಗಳೂರು ತಾಲ್ಲೂಕು ಹಿರೇಗೌಜ ಗ್ರಾಮದ ಸರ್ವೆ ನಂ. 148/3ಎ1ರಲ್ಲಿ ಖರಾಬು ಸೇರಿ 3.00 ಎಕರೆ ಸ್ವಂತ ಖಾತೆಯ ಜಮೀನನ್ನು ಸರ್ವೆ ಮಾಡಿ ಹದ್ದುಬಸ್ತು ಗುರುತಿಸಿ ಕೊಡಬೇಕೆಂದು ಶ್ರೀ ಹೆಚ್.ಪಿ. ಸದಾಶಿವ ಎಂಬುವರು ದಿನಾಂಕ 8–8–2007ರಂದು ಅರ್ಜಿ ಸಲ್ಲಿಸಿದ್ದಾರೆ. ಭೂಮಾಪಕರು ಮೇಲ್ಕಂಡ ಹಿಡುವಳಿ ಜಮೀನನ್ನು ಬಾಜುದಾರರಿಗೆ ನೋಟೀಸು ನೀಡಿ ಸರ್ವೆಯಿಂದ ಹದ್ದುಬಸ್ತು ಗುರುತಿಸಿ ದಿನಾಂಕ 15–4–2008ರಂದು ಕಚೇರಿಗೆ ವರದಿ ಮಾಡಿದ್ದಾರೆ. ಹದ್ದುಬಸ್ತು ನಕ್ಷೆ ಪ್ರಕಾರ ಹಿರೇಗೌಜ ಗ್ರಾಮದ ಸರ್ವೆ ನಂ. 148/3ಎ1ರ ಹಿಡುವಳಿ ಜಮೀನಿನ ಪೈಕಿ 0.18 ಗುಂಟೆಯನ್ನು ಬಾಜು ಹಿಡುವಳಿದಾರರಾದ ಶ್ರೀ ಶೇಖರಪ್ಪ ಬಿನ್ ಹೆಚ್.ಎಸ್. ಸಿದ್ದೇಗೌಡ ಎಂಬುವರು ಒತ್ತುವರಿ ಮಾಡಿರುವುದಾಗಿ ಗುರುತಿಸಲಾಗಿದೆ. ನಂತರ ಶ್ರೀ ಸದಾಶಿವ ಬಿನ್ ಪುಟ್ಟಪ್ಪ ಇವರ ಹಿರೇಗೌಜ ಗ್ರಾಮದ ಸರ್ವೆ ನಂ.148/3ಎ1ರಲ್ಲಿ 3.00 ಎಕರೆ ಖುಷ್ಕಿ ಜಮೀನನ್ನು ಹದ್ದುಬಸ್ತು ಅಳತೆ ಮಾಡಿ ನಕಾಶೆಯಂತೆ ಕಲ್ಲುಬಾಂದು ಗುರುತಿಸಿರುವುದಾಗಿಯೂ ಸದರಿ ಜಮೀನಿನಲ್ಲಿ

0.18 ಗುಂಟೆಯನ್ನು ಬಾಜುದಾರರಾದ ಶ್ರೀ ಹೆಚ್.ಎಸ್. ಶೇಖರಪ್ಪ ಬಿನ್ ಹೆಚ್.ಎ. ಸಿದ್ದೇಗೌಡ ಎಂಬುವರು ಒತ್ತುವರಿ ಮಾಡಿರುವುದನ್ನು ಮೋಜಣಿದಾರರು ಗುರುತಿಸಿರುವುದಾಗಿಯೂ ಸದರಿ ಜಾಗವನ್ನು ಅರ್ಜಿದಾರರಿಗೆ ಬಿಡಿಸಿಕೊಡಲು ಈ ಮೂಲಕ ಆದೇಶಿಸಿದೆ ಎಂದು ಠಾಣಾಧಿಕಾರಿಗಳು, ಸಖರಾಯಪಟ್ಟಣ ಪೊಲೀಸ್ ಠಾಣೆ, ಸಖರಾಯಪಟ್ಟಣ ಇವರಿಗೆ ಸಂಖ್ಯೆ: ಟಿಕ್ಯೂ ಹೆಚ್ ಬಿ 174/2007–08 ದಿನಾಂಕ 29–4–2008ರಂತೆ ಅಂದಿನ ತಹಶೀಲ್ದಾರರಾಗಿದ್ದ ಶ್ರೀ ಆರ್. ರಂಗಸ್ವಾಮಯ್ಯ ಇವರು ಪತ್ರ ಬರೆದಿದ್ದಾರೆ. ಸದರಿ ಪತ್ರವನ್ನು ಸ್ವತ: ತಹಶೀಲ್ದಾರರೇ ತಯಾರಿಸಿ ಸಹಿ ಮಾಡಿ ನೀಡಿದ್ದು ಕಛೇರಿಯ ವಿಷಯ ನಿರ್ವಾಹಕರು ಹಾಗೂ ಶಾಖಾ ಮುಖ್ಯಸ್ಥರ ಮೂಲಕ ವ್ಯವಹರಿಸದಿರುವುದು ಕಂಡು ಬಂದಿದೆ.

ಮೇಲೆ ಪ್ರಸ್ತಾಪಿಸಿ ವಿವಾದಿತ ಜಮೀನು ಶ್ರೀ ಹೆಚ್.ಪಿ. ಸದಾಶಿವ ಎಂಬುವರ ಖಾತೆಯ ಖಾಸಗಿ ಹಿಡುವಳಿಯಾಗಿರುವುದು ದಾಖಲೆ ಪರಿಶೀಲನೆಯಿಂದ ಸ್ಪಷ್ಟಪಡುತ್ತದೆ. ಖಾಸಗಿ ಜಮೀನಿನ ಒತ್ತುವರಿಯನ್ನು ತೆರವು ಮಾಡಿಸುವಂತೆ ಆದೇಶ ನೀಡಲು ತಹಶೀಲ್ದಾರರು ಯಾವುದೇ ಕಾಯಿದೆಯಡಿ ಅಧಿಕಾರ ಹೊಂದಿರುವುದು ಕಂಡುಬರುವುದಿಲ್ಲ. ಚಿಕ್ಕಮಗಳೂರು ತಾಲ್ಲೂಕಿನ ಅಂದಿನ ತಹಶೀಲ್ದಾರರಾಗಿದ್ದ ಶ್ರೀ ಆರ್. ರಂಗಸ್ವಾಮಯ್ಯ ಇವರು ಅಧಿಕಾರ ದುರುಪಯೋಗಪಡಿಸಿಕೊಂಡು ಕಾನೂನುಬಾಹಿರವಾಗಿ ಖಾಸಗಿ ಹಿಡುವಳಿ ಜಮೀನಿನ ಒತ್ತುವರಿಯನ್ನು ತೆರವು ಮಾಡಿಸಿ ಖಾತೆದಾರರಿಗೆ ಬಿಡಿಸಿಕೊಡುವಂತೆ ಪೊಲೀಸ್ ಅಧಿಕಾರಿಗೆ ಆದೇಶ ಮಾಡಿ ಕರ್ತವ್ಯಲೋಪವೆಸಗಿ ಕರ್ನಾಟಕ ನಾಗರೀಕ ಸೇವಾ (ನಡವಳಿ) ನಿಯಮಗಳು 1966ರ 3(2)(ii)ನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದು ಕಂಡುಬಂದಿದೆ. ಶ್ರೀ ಆರ್. ರಂಗಸ್ವಾಮಯ್ಯ ಇವರು ಪ್ರಸ್ತುತ ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ ಇಲ್ಲಿ ತಹಶೀಲ್ದಾರರಾಗಿ ಕರ್ತವ್ಯ ನಿರ್ವಹಿಸುತ್ತಿದ್ದು ಇವರ ವಿರುದ್ಧ ಶಿಸ್ತು ಕ್ರಮ ಜರುಗಿಸುವಂತೆ ಕೋರಿ ದಾಖಲೆಗಳನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಶ್ರೀ ಆರ್. ರಂಗಸ್ವಾಮಯ್ಯ, ತಹಶೀಲ್ದಾರ್, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ (ಚುನಾವಣೆ ತಹಶೀಲ್ದಾರ್, ಜಿಲ್ಲಾಧಿಕಾರಿಗಳ ಕಚೇರಿ, ದಾವಣಗೆರೆ ಇಲ್ಲಿಗೆ ವರ್ಗಾವಣೆ ಆದೇಶದಲ್ಲಿರುವ) ಇವರು ಈ ಸಂಬಂಧ ಸರ್ಕಾರಕ್ಕೆ ಮನವಿ ಸಲ್ಲಿಸಿ ಶ್ರೀ ಸದಾಶಿವ ಬಿನ್ ಪುಟ್ಟಪ್ಪ ಎಂಬುವವರು ಕೂಲಿಕಾರರಾಗಿದ್ದು ಪ್ರತಿನಿತ್ಯ ಹೆಂಡತಿ ಮಕ್ಕಳೊಂದಿಗೆ ಕಛೇರಿಗೆ ಬಂದು ಒತ್ತುವರಿ ಜಮೀನನ್ನು ಬಿಡಿಸಿಕೊಡುವಂತೆ ಒತ್ತಾಯ ಮಾಡುತ್ತಿದ್ದರು. ಮಾನವೀಯತೆಯ ದೃಷ್ಟಿಯಿಂದ ರಕ್ಷಣೆ ಕೊಡುವ ಸಲುವಾಗಿ ಪೊಲೀಸ್ ಆರಕ್ಷಕ ನಿರೀಕ್ಷಕರು ಸಖರಾಯಪಟ್ಟಣ ಇವರಿಗೆ ಜಾಗವನ್ನು ಅರ್ಜಿದಾರರಿಗೆ ಬಿಡಿಸಿಕೊಡಲು ಪತ್ರ ಬರೆಯಲಾಗಿದೆ. ವಿನಃ ಬೇರೆ ಯಾವ ಉದ್ದೇಶದಿಂದಾಗಲೀ ಅಧಿಕಾರ ದುರುಪಯೋಗ ಮಾಡಿಕೊಂಡಿಲ್ಲವೆಂದು ತಿಳಿಸಿ ಅವರ ತಪ್ಪನ್ನು ಮನ್ನಿಸಿ ಈ ಆರೋಪದಿಂದ ಮುಕ್ತನನ್ನಾಗಿ ಮಾಡಿಕೊಡಬೇಕೆಂದು ಕೋರುತ್ತೇನೆಂದು ತಿಳಿಸಿದ್ದಾರೆ. ಉಚ್ಛ ನ್ಯಾಯಾಲಯದ ಮಧ್ಯಂತರ ಆದೇಶ, ಜಿಲ್ಲಾಧಿಕಾರಿಗಳು ಚಿಕ್ಕಮಗಳೂರು ಜಿಲ್ಲೆ ಇವರ ವರದಿ ಹಾಗೂ ಶ್ರೀ ಆರ್. ರಂಗಸ್ವಾಮಯ್ಯ ಇವರ ಮನವಿಯನ್ನು ಪರಿಶೀಲಿಸಲಾಗಿದೆ. ಶ್ರೀ ಆರ್. ರಂಗಸ್ವಾಮಯ್ಯ ಇವರು ಅಧಿಕಾರ ದುರುಪಯೋಗಪಡಿಸಿಕೊಂಡು ಕಾನೂನು ಬಾಹಿರವಾಗಿ ಖಾಸಗಿ ಹಿಡುವಳಿ ಜಮೀನಿನ ಒತ್ತುವರಿಯನ್ನು ತೆರವು ಮಾಡಿಸಿ ಖಾತೆದಾರರಿಗೆ ಬಿಡಿಸಿಕೊಡುವಂತೆ ಪೊಲೀಸ್ ಅಧಿಕಾರಿಗೆ ಆದೇಶ ಮಾಡಿ ಕರ್ತವ್ಯಲೋಪವೆಸಗಿ ಕರ್ನಾಟಕ ನಾಗರೀಕ ಸೇವಾ (ನಡವಳಿ) ನಿಯಮಗಳು 1966ರ 3(2)(ii)ನ್ನು ಸ್ಪಷ್ಟವಾಗಿ ಉಲ್ಲಂಘಿಸಿರುವುದು ಕಂಡುಬಂದಿದ್ದರಿಂದ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಉದ್ದೇಶಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ: ಕಂಇ 556 ಎಎಸ್‌ಡಿ 2009, ಬೆಂಗಳೂರು, ದಿನಾಂಕ: 21ನೇ ಡಿಸೆಂಬರ್ 2009.

ಪ್ರಸ್ತಾವನೆಯಲ್ಲಿ ವಿವರಿಸಿದ ಹಿನ್ನೆಲೆಯಲ್ಲಿ ಶ್ರೀ ಆರ್. ರಂಗಸ್ವಾಮಯ್ಯ, ತಹಶೀಲ್ದಾರ್, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ (ಚುನಾವಣೆ ತಹಶೀಲ್ದಾರ್, ಜಿಲ್ಲಾಧಿಕಾರಿಗಳ ಕಚೇರಿ, ದಾವಣಗೆರೆ ಇಲ್ಲಿಗೆ ವರ್ಗಾವಣೆ ಆದೇಶದಲ್ಲಿರುವ) ಇವರನ್ನು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿಗಳು 1957ರ ನಿಯಮ 10(1)(ಡಿ) ಮತ್ತು 10(3)ರನ್ವಯ ಇಲಾಖಾ ವಿಚಾರಣೆ ಬಾಕಿಯಿರಿಸಿ ಈ ಕೂಡಲೇ ಜಾರಿಗೆ ಬರುವಂತೆ ಅಮಾನತ್ತಿನಲ್ಲಿ ಇರಿಸಿ ಆದೇಶಿಸಿದೆ.

ಸದರಿ ಅಧಿಕಾರಿಯು ಕರ್ನಾಟಕ ನಾಗರೀಕ ಸೇವಾ ನಿಯಮಗಳು, ನಿಯಮ 98ರನ್ವಯ ಜೀವನಾಧಾರ ಭತ್ಯೆ ಪಡೆಯಲು ಅರ್ಹರಿರುತ್ತಾರೆ ಹಾಗೂ ಜಿಲ್ಲಾಧಿಕಾರಿಗಳ ಅನುಮತಿ ಪಡೆಯದೇ ಕೇಂದ್ರಸ್ಥಾನ ಬಿಡತಕ್ಕದ್ದಲ್ಲ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.29

ಎಸ್.ಬಿ. ಸಸಾಲಟ್ಟಿ

ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಸೇವೆಗಳು–3)

ಕಂದಾಯ ಸಚಿವಾಲಯ

ತಿದ್ದುಪಡಿ

ಆದೇಶ ಸಂಖ್ಯೆ: ಕಂಇ 293 ಎಲ್‌ಆರ್‌ಎ 2009 ಬೆಂಗಳೂರು, ದಿನಾಂಕ: 22ನೇ ಡಿಸೆಂಬರ್ 2009.

ಸರ್ಕಾರದ ಅಧಿಸೂಚನೆ ಸಂಖ್ಯೆ ಕಂಇ 53 ಎಲ್‌ಆರ್‌ಎಂ 2007 ಬೆಂಗಳೂರು ದಿನಾಂಕ 21–05–2009ರ ಆದೇಶದಲ್ಲಿ ರೈಲ್ವೆ ಮೆನ್ಸ್ ಹೌಸ್ ಬಿಲ್ಡಿಂಗ್ ಕೋ–ಆಪರೇಟಿವ್ ಸೊಸೈಟಿ ಎಂದು ನಮೂದಾಗಿರುವ ಸ್ಥಳಗಳಲ್ಲಿ **"ರೈಲ್ವೆ ಮೆನ್ಸ್ ಹೌಸ್ ಬಿಲ್ಡಿಂಗ್ ಕೋ–ಆಪರೇಟಿವ್ ಸೊಸೈಟಿ ಲಿಮಿಟೆಡ್.,"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್.30

ಟಿ.ಎನ್. ನಾರಾಯಣ ಗೌಡ

ಸರ್ಕಾರದ ಅಧೀನ ಕಾರ್ಯದರ್ಶಿ,

ಕಂದಾಯ ಇಲಾಖೆ (ಭೂ ಸುಧಾರಣೆ)

ಒಳಾಡಳಿತ ಸಚಿವಾಲಯ

ವಿಷಯ : 12ನೇ ಆರ್ಥಿಕ ಹಣಕಾಸು ಆಯೋಗದ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ: 1. ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 07 ಪಿಎಫ್‌ಎಸ್ 09(ಭಾ) ದಿನಾಂಕ: 27.05.2009

2. ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಡಿ 08 ಪಿಎಫ್‌ಎಸ್ 09 ದಿನಾಂಕ: 15.10.2009

3. ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರ ಪತ್ರ ಸಂಖ್ಯೆ, TTM/XII FC/ 2009 ದಿನಾಂಕ: 08.12.2009

ಪ್ರಸ್ತಾವನೆ :

ಮೇಲೆ ಓದಲಾದ (1)ರ ಆದೇಶದಲ್ಲಿ ಪೊಲೀಸ್ ಆಡಳಿತವನ್ನು ಬಲಪಡಿಸುವುದರ ಜೊತೆಗೆ ಇತರೆ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಮೋದನೆಗೊಂಡಂತೆ 12ನೇ ಹಣಕಾಸು ಯೋಜನೆಯಡಿಯಲ್ಲಿ ರೂ.25.00 ಕೋಟಿ ಗಳನ್ನು ಬಿಡುಗಡೆ ಮಾಡಲಾಗಿದೆ. ಮೇಲೆ (2)ರಲ್ಲಿ ಓದಲಾದ ಆದೇಶದಲ್ಲಿ ಪೊಲೀಸ್ ಆಡಳಿತವನ್ನು ಬಲಪಡಿಸುವುದರ ಜೊತೆಗೆ ಇತರೆ ಕಾರ್ಯಕ್ರಮಗಳಿಗೆ ಬಳಸಿಕೊಳ್ಳಲು ಅನುಮೋದನೆಗೊಂಡಂತೆ 12ನೇ ಹಣಕಾಸು ಯೋಜನೆಯಡಿಯಲ್ಲಿ ರೂ.10.00 ಕೋಟಿ ಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (3)ರ ಪತ್ರದಲ್ಲಿ ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರು ಪ್ರಸ್ತಾವನೆಯನ್ನು ಸಲ್ಲಿಸಿ, ಮಾರ್ಪಾಡಿತ ಕ್ರಿಯಾ ಯೋಜನೆಗೆ ಅಂದರೆ for the procurement of PCR vans for GPS based Vehicle Monitoring System and Dial 100 System for Hubli-Dharwar and Mysore City Police Commissionerates, Bullet Proof vehicles for State Intelligence (Off the Air Mobile Monitoring and Tracing System) ಬಳಸುವ ಸಲುವಾಗಿ ಬಾಕಿ ಉಳಿದಿರುವ ರೂ.13.54 ಕೋಟಿ ಗಳನ್ನು 12ನೇ ಹಣಕಾಸು ಯೋಜನೆಯಡಿ ಬಿಡುಗಡೆ ಮಾಡಲು ಕೋರಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ : ಹೆಚ್‌ಡಿ 11 ಪಿಎಫ್‌ಎಸ್ 2009, ಬೆಂಗಳೂರು ದಿನಾಂಕ 7 ನೇ ಜನವರಿ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾರ್ಪಾಡಿತ ಕ್ರಿಯಾ ಯೋಜನೆಗೆ ಅಂದರೆ for the procurement of PCR vans for GPS based Vehicle Monitoring System and Dial 100 System for Hubli-Dharwar and Mysore City Police Commissionerates, Bullet Proof Vehicles for State Intelligence (Off the Air Mobile Monitoring and Tracing System) ಬಳಸುವ ಸಲುವಾಗಿ 12ನೇ ಹಣಕಾಸು ಯೋಜನೆಯಡಿ ರೂ.8.54 ಕೋಟಿಗಳನ್ನು (ಎಂಟು ಕೋಟಿ ಐವತ್ನಾಲ್ಕು ಲಕ್ಷ ರೂಪಾಯಿಗಳು ಮಾತ್ರ) ಬಿಡುಗಡೆ ಮಾಡಲು ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 827 ವೆಚ್ಚ–11/09 ದಿನಾಂಕ 18/12/2009ರ ಸಹಮತಿಯ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.63/10

(ಬಿ.ಎಂ. ಲಕ್ಷ್ಮೀನಾರಾಯಣ)

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ(ಪೊಲೀಸ್ ವೆಚ್ಚ)

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವಾಲಯ

ವಿಷಯ : ಜೈವಿಕ ಇಂಧನ ಕಾರ್ಯಪಡೆಯ ಗುರಿ,ಉದ್ದೇಶ, ಕಾರ್ಯಸೂಚಿಗಳ ಕುರಿತು

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಅಪಜೀ 191 ಎಫ್‌ಎಪಿ 2008, ದಿನಾಂಕ: 12.09.2008.

ಪ್ರಸ್ತಾವನೆ :

ಮೇಲೆ ಓದಲಾದ ಆದೇಶದಲ್ಲಿ ಶ್ರೀ ವೈ.ಬಿ. ರಾಮಕೃಷ್ಣ, ಸಮಗ್ರ ವಿಕಾಸ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಜೈವಿಕ ಇಂಧನ ಕಾರ್ಯಪಡೆಯನ್ನು ರಚಿಸಲಾಗಿದೆ.

ಶ್ರೀಮತಿ ವಿದ್ಯಾ ಮುರುಕುಂಬಿ, ಕಾರ್ಯಕಾರಿ ಅಧ್ಯಕ್ಷರು, ಶ್ರೀ ರೇಣುಕಾ ಸಕ್ಕರೆ ಸಂಸ್ಥೆ ಬಿಜಾಪುರ ಇವರನ್ನು ಜೈವಿಕ ಇಂಧನ ಕಾರ್ಯಪಡೆಗೆ ವಿಶೇಷ ಆಹ್ವಾನಿತರೆಂದು ನೇಮಿಸಲು ಸರ್ಕಾರವು ನಿರ್ಧರಿಸಿರುವ ಕಾರಣ ಈ ಆದೇಶ.

ಸರ್ಕಾರಿ ಆದೇಶ ಸಂಖ್ಯೆ : ಅಪಜೀ 251 ಎಫ್ಎಪಿ 2009, ಬೆಂಗಳೂರು, ದಿನಾಂಕ 23ನೇ ಡಿಸೆಂಬರ್ 2009

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಜೈವಿಕ ಇಂಧನ ಕಾರ್ಯಪಡೆಗೆ ಶ್ರೀಮತಿ ವಿದ್ಯಾ ಮುರುಕುಂಬಿ, ಕಾರ್ಯಕಾರಿ ಅಧ್ಯಕ್ಷರು, ಶ್ರೀ ರೇಣುಕಾ ಸಕ್ಕರೆ ಸಂಸ್ಥೆ ಬಿಜಾಪುರ ಇವರನ್ನು ವಿಶೇಷ ಆಹ್ವಾನಿತರೆಂದು ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.64/10

(ಪಿ.ಆರ್. ಕಲಾವತಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ನೇತ್ರ ಜ್ಯೋತಿ ಸೇವಾ ಟ್ರಸ್ಟ್–ಶರತ್ ಕಣ್ಣಿನ ಆಸ್ಪತ್ರೆ, ಕಡೂರು – ಪ್ಯಾರಾ ಮೆಡಿಕಲ್ ಕೋರ್ಸ್‌ಗಳ ಮಂಜೂರಾತಿ ಬಗ್ಗೆ

ಓದಲಾಗಿದೆ: ಪತ್ರ ಸಂಖ್ಯೆ: ಪಿಎಂಬಿ/23/08–09 ದಿನಾಂಕ:09–01–2009

ಪ್ರಸ್ತಾವನೆ :

ಕರ್ನಾಟಕ ಪ್ಯಾರಾ ಮೆಡಿಕಲ್ ಬೋರ್ಡ್‌ನ ಸದಸ್ಯ ಕಾರ್ಯದರ್ಶಿಯವರು ಮೇಲೆ ಓದಲಾದ ತಮ್ಮ ಪತ್ರದಲ್ಲಿ ನೇತ್ರ ಜ್ಯೋತಿ ಸೇವಾ ಟ್ರಸ್ಟ್–ಶರತ್ ಕಣ್ಣಿನ ಆಸ್ಪತ್ರೆ, ಕಡೂರು – ಇವರಿಗೆ ಡಿಪ್ಲೊಮ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸ್‌ನ ಮಂಜೂರಾತಿಗಾಗಿ ಅರ್ಜಿಯನ್ನು ಪ್ಯಾರಾ ಮೆಡಿಕಲ್ ಮಂಡಳಿಗೆ ಸಲ್ಲಿಸಿದ್ದಾರೆಂದು, ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಕೋರ್ಸುಗಳನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿವೀಕ್ಷಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತೆಂದು, ತಜ್ಞರ ತಂಡವು ಸಂಸ್ಥೆಗೆ ದಿನಾಂಕ 24–09–2008ರಂದು ಭೇಟಿ ನೀಡಿ ಪರಿವೀಕ್ಷಿಸಿ, ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತೆಂದು, ತಜ್ಞರ ತಂಡದ ಪರಿವೀಕ್ಷಣ ವರದಿಯನ್ನು ದಿನಾಂಕ 24–12–2008ರಂದು ನಡೆದ ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ ಕೋರ್ಸ್‌ಗಳನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿದೆಯೆಂದು ವರದಿ ಮಾಡುತ್ತಾ ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ನೇತ್ರ ಜ್ಯೋತಿ ಸೇವಾ ಟ್ರಸ್ಟ್ – ಶರತ್ ಕಣ್ಣಿನ ಆಸ್ಪತ್ರೆ, ಕಡೂರು – ಇವರಿಗೆ ಡಿಪ್ಲೊಮ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸನ್ನು 20 ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ 2009–10ನೇ ಸಾಲಿನಿಂದ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 10 ಎಂಎಂಇ 2009, ಬೆಂಗಳೂರು, ದಿನಾಂಕ 02 ನೇ ಜನವರಿ 2010

ನೇತ್ರ ಜ್ಯೋತಿ ಸೇವಾ ಟ್ರಸ್ಟ್–ಶರತ್ ಕಣ್ಣಿನ ಆಸ್ಪತ್ರೆ, ಕಡೂರು – ಇವರಿಗೆ ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶ ಮಿತಿಯೊಂದಿಗೆ ಡಿಪ್ಲೊಮ ಇನ್ ಆಪ್ತಾಲ್ಮಿಕ್ ಟೆಕ್ನಿಕ್ ಕೋರ್ಸನ್ನು 2009–10ನೇ ಸಾಲಿನಿಂದ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಮಂಜೂರಾತಿ ನೀಡಿದೆ.

ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ.30,000/– (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ. 10,000/– (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಸಂಸ್ಥೆಯವರು ಕೋರ್ಸನ್ನು ಪ್ರಾರಂಭಿಸುವ ಮೊದಲು ಬೋರ್ಡ್ ನಿಗಧಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗೆ ತೆಗೆದುಕೊಂಡು ಜನವರಿ ಅಥವಾ ಫೆಬ್ರವರಿ ತಿಂಗಳ ಮದ್ಯಾಂತರದೊಳಗೆ ವಿದ್ಯಾರ್ಥಿಗಳ ಪಟ್ಟಿಯನ್ನು ಮೂಲ ಅಂಕಪಟ್ಟಿ ಮತ್ತು ದೃಢೀಕರಣಗಳನ್ನು ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ.500.00ರಂತೆ ನೋಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಠ ವಿದ್ಯಾರ್ಹತೆಯು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು. ಕೋರ್ಸ್‌ನ ಅವಧಿ ಮೂರು ವರ್ಷಗಳಾಗಿರತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶ ಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ ಅದರಿಂದ ಉಂಟಾಗುವ ಅನಾನುಕೂಲ ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸಂಸ್ಥೆಯವರಿಗೆ ನಿಗಧಿಪಡಿಸಿದ ಸೀಟುಗಳಲ್ಲಿ ಶೇ. 20 ರಷ್ಟನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(9) ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿದ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10) ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿದ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆ ಮಾಡತಕ್ಕದ್ದು.

(12) ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಸಂಸ್ಥೆಗೆ ನೀಡಲಾಗುವುದಿಲ್ಲ.

(13) ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14) ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು, ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡಿನಿಂದ ಪಡೆಯತಕ್ಕದ್ದು.

(15) ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ. 10,000/– (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16) ದಿನಾಂಕ : 30–03–1999 ಸಂಖ್ಯೆ ಆಕುಕ 144 ಎಂಎಂಇ 98ರ ಸರ್ಕಾರಿ ಆದೇಶದಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ಆಕುಕ 328 ಎಂಎಸ್‌ಎಫ್ 07, ದಿನಾಂಕ : 27–07–2007ರಲ್ಲಿ ತಿಳಿಸಿರುವ ಆದೇಶವನ್ನು ಪಾಲಿಸತಕ್ಕದ್ದು.

(17) ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ನಿಗದಿತ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದು ಪಡಿಸಬಹುದೆಂದು ಸಂಸ್ಥೆಯು ರೂ. 100 ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

(18) ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ/ಲೀಸ್ ಆದ ಪಕ್ಷದಲ್ಲಿ ಬಾಡಿಗೆ/ಲೀಸ್ ಕರಾರು ಪತ್ರವು ರೂ. 100 ಛಾಪಾ ಕಾಗದದಲ್ಲಿರಬೇಕು ಮತ್ತು ಬಾಡಿಗೆ/ಲೀಸ್ ಅವಧಿಯು ಕನಿಷ್ಠ 10 ವರ್ಷಗಳಿಗಿರಬೇಕು.

(19) ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 5 ವರ್ಷದೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ / ಕೋರ್ಸನ್ನು ನಡೆಸಲು ತನ್ನದೇ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ. 100 ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

(20) ಸಂಸ್ಥೆಯು ಪ್ರತಿವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ನೀಡತಕ್ಕದ್ದು.

(21) ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

(22) ಪ್ಯಾರಾ ಮೆಡಿಕಲ್ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಬ್ಯಾಂಕ್ ಗ್ಯಾರಂಟಿ ಅಫಿಲಿಯೇಷನ್ ಫೀ ಮತ್ತು ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಸಂಸ್ಥೆಗಳು ದಿನಾಂಕ : 31–01–2010ರೊಳಗಾಗಿ ಪ್ಯಾರಾ ಮೆಡಿಕಲ್

ಬೋರ್ಡಿಗೆ ನೀಡಿದಲ್ಲಿ 2009–10ನೇ ಸಾಲಿಗೆ ಮಂಜೂರಾತಿಯು ಅನ್ವಯಿಸತಕ್ಕದ್ದು ಅಥವಾ ದಿನಾಂಕ 01–02–2010ರ ನಂತರ ನೀಡಿದಲ್ಲಿ 2010–11ನೇ ಸಾಲಿಗೆ ಮಂಜೂರಾತಿಯು ಜಾರಿಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.77/10

(ವಿ. ಶ್ರೀರಾಮರೆಡ್ಡಿ)

ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,

(ವೈದ್ಯಕೀಯ ಶಿಕ್ಷಣ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ಡಾ: ಸುಷ್ಮ ಟಿ.ಎನ್. ವೈದ್ಯಾಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ ಶಿರಾಳಕೊಪ್ಪ, ಶಿವಮೊಗ್ಗ ಜಿಲ್ಲೆ ಇವರ ರಾಜೀನಾಮೆಯನ್ನು ಅಂಗೀಕರಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಆಕುಶ ಸೇವೆಗಳು, ಬೆಂಗಳೂರು, ಇವರ ಪತ್ರ ಸಂಖ್ಯೆ:ಜೆಆರ್ಒ(1) 143/ **2009**–10, ದಿನಾಂಕ: 27–10–2009.

ಪ್ರಸ್ತಾವನೆ :

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ಮೇಲೆ ಓದಲಾದ ಪತ್ರದಲ್ಲಿ ಡಾ: ಸುಷ್ಮ ಟಿ.ಎನ್. ಇವರು ದಿನಾಂಕ 30–08–2002ರಲ್ಲಿ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯಾಗಿ ಸೇವೆಗೆ ಸೇರಿದ್ದು, ವೈಯಕ್ತಿಕ ಹಾಗೂ ಕೌಟುಂಬಿಕ ಕಾರಣಗಳ ಹಿನ್ನೆಲೆಯಲ್ಲಿ, ದಿನಾಂಕ 06–03–2009 ರಿಂದ ಒಪ್ಪಿಕೊಳ್ಳುವಂತೆ ಕೋರಿ ರಾಜೀನಾಮೆಯನ್ನು ಸಲ್ಲಿಸಿರುತ್ತಾರೆ. ಇವರ ವಿರುದ್ಧ ಇಲಾಖಾ ವಿಚಾರಣೆ ಇರುವುದಿಲ್ಲ ಹಾಗೂ ಬಾಂಡ್ ಅವಧಿಯಲ್ಲಿ ಇರುವುದಿಲ್ಲವಾದ್ದರಿಂದ ದಿನಾಂಕ 06–03–2009ರಿಂದ ಜಾರಿಗೆ ಬರುವಂತೆ ವೈದ್ಯರ ರಾಜೀನಾಮೆಯನ್ನು ಅಂಗೀಕರಿಸಲು ಕೋರಿರುತ್ತಾರೆ.

ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಆಕುಕ 539 ಹೆಚ್ಎಸ್ಹೆಚ್ 2009, ಬೆಂಗಳೂರು, ದಿನಾಂಕ 01ನೇ ಜನವರಿ 2010

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 252(ಎ) ರನ್ವಯ ಡಾ: ಸುಷ್ಮ ಟಿ.ಎನ್., ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ಸಮುದಾಯ ಆರೋಗ್ಯ ಕೇಂದ್ರ, ಶಿರಾಳಕೊಪ್ಪ, ಶಿವಮೊಗ್ಗ ಜಿಲ್ಲೆ ಇವರು ನೀಡಿರುವ ರಾಜೀನಾಮೆಯನ್ನು ದಿನಾಂಕ 06–03–2009 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಅಂಗೀಕರಿಸಿದೆ.

ಪಿ.ಆರ್.78

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

(ಐ. ಹೇಮನಾಥ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಸೇವೆಗಳು–1)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ : ನ್ಯೂ ಸಿಟಿ ಕಾಲೇಜ್ ಆಫ್ ನರ್ಸಿಂಗ್, ಉಡುಪಿ ಇದಕ್ಕೆ 2009–10ನೇ ಸಾಲಿನಿಂದ ಬಿ.ಎಸ್ಸಿ., ನರ್ಸಿಂಗ್ ಕೋರ್ಸಿಗೆ ಸಂಯೋಜನೆ ನೀಡುವ ಬಗ್ಗೆ.

ಓದಲಾಗಿದೆ: ಪತ್ರ ಸಂಖ್ಯೆ: ಎಸಿಎ/ಎನ್ಎಸ್–330/2008–09, ದಿನಾಂಕ 7–3–2009.

ಪ್ರಸ್ತಾವನೆ :

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಮೇಲೆ ಓದಲಾದ ತಮ್ಮ ಪತ್ರದಲ್ಲಿ ನ್ಯೂ ಸಿಟಿ ಕಾಲೇಜ್ ಆಫ್ ನರ್ಸಿಂಗ್, ಉಡುಪಿ, ಇದು 2008–09ನೇ ಸಾಲಿನಿಂದ ಬಿಎಸ್ಸಿ., ನರ್ಸಿಂಗ್ ಕೋರ್ಸನ್ನು 40 ಸೀಟುಗಳ ವಾರ್ಷಿಕ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಗಾಗಿ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(2) ರಡಿ ಸಲ್ಲಿಸಿದ್ದ ಅರ್ಜಿಯನ್ನು ಸ್ಥಳೀಯ ತಪಾಸಣಾ ಸಮಿತಿಯ ವರದಿ, ಅಕಾಡೆಮಿಕ್ ಕೌನ್ಸಿಲ್ ಮತ್ತು ಸಿಂಡಿಕೇಟ್ ನಿರ್ಣಯವನ್ನು ಸಲ್ಲಿಸುತ್ತಾ ಸಂಯೋಜನೆ ನೀಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತದೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ನ್ಯೂ ಸಿಟಿ ಕಾಲೇಜ್ ಆಫ್ ನರ್ಸಿಂಗ್, ಉಡುಪಿ ಇದು 2009–10ನೇ ಸಾಲಿನಿಂದ ಬಿಎಸ್ಸಿ., ನರ್ಸಿಂಗ್ ಕೋರ್ಸನ್ನು 40 ಸೀಟುಗಳ ವಾರ್ಷಿಕ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಸಂಯೋಜನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 66 ಎಂಪಿಎಸ್ 2009, ಬೆಂಗಳೂರು, ದಿನಾಂಕ 07ನೇ ಜನವರಿ 2010

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮ, 1994ರ ಕಲಂ 45(5)ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ನ್ಯೂ ಸಿಟಿ ಕಾಲೇಜ್ ಆಫ್ ನರ್ಸಿಂಗ್, ಉಡುಪಿ ಇದು 2009-10ನೇ ಸಾಲಿನಿಂದ ಬಿ.ಎಸ್ಸಿ., ನರ್ಸಿಂಗ್ ಕೋರ್ಸನ್ನು 40 (ನಲವತ್ತು) ಸೀಟುಗಳ ವಾರ್ಷಿಕ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಸಂಯೋಜನೆ ನೀಡಲು ಸರ್ಕಾರವು ಶಿಫಾರಸ್ಸು ಮಾಡಿದೆ.

ಷರತ್ತು ಮತ್ತು ನಿಬಂಧನೆಗಳು

1. ನ್ಯೂ ಸಿಟಿ ಕಾಲೇಜ್ ಆಫ್ ನರ್ಸಿಂಗ್, ಉಡುಪಿ ಇದು ಶೇ 25ರಷ್ಟು ಸೀಟುಗಳನ್ನು ಸರ್ಕಾರಕ್ಕೆ ಹಂಚಿಕೆಗಾಗಿ ಬಿಟ್ಟುಕೊಡತಕ್ಕದ್ದು.
2. ಮೇಲ್ಕಂಡ ನರ್ಸಿಂಗ್ ಕೋರ್ಸುಗಳ ಸಂಯೋಜನೆಗೆ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಮಂಜೂರಾತಿಯನ್ನು ಪಡೆಯತಕ್ಕದ್ದು.
3. 1947ರ ಭಾರತೀಯ ನರ್ಸಿಂಗ್ ಕೌನ್ಸಿಲ್ ಅಧಿನಿಯಮ 13ನೇ ಪ್ರಕರಣದಲ್ಲಿ ಭಾರತೀಯ ಶುಶ್ರೂಷಾ ಪರಿಷತ್ತಿನ ಅನುಮೋದನೆಯನ್ನು ಪಡೆಯತಕ್ಕದ್ದು ಮತ್ತು ಭಾರತೀಯ ನರ್ಸಿಂಗ್ ಪರಿಷತ್ತು ನಿಗಧಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ಭಾರತೀಯ ಶುಶ್ರೂಷಾ ಪರಿಷತ್ತು ನಿಗಧಿಪಡಿಸಿರುವ ಮೂಲಭೂತ ಸೌಲಭ್ಯಗಳನ್ನು ಹೊಂದತಕ್ಕದ್ದು.
4. ಭಾರತೀಯ ಶುಶ್ರೂಷಾ ಪರಿಷತ್ತಿನ ಅನುಮೋದನೆಯನ್ನು 1947ರ ಭಾರತೀಯ ನರ್ಸಿಂಗ್ ಕೌನ್ಸಿಲ್ ಅಧಿನಿಯಮದ 13ನೇ ಪ್ರಕರಣದಡಿ ಪಡೆದ ನಂತರವೇ ನಿಗಧಿಪಡಿಸಿರುವ ವಿದ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು. ಯಾವುದೇ ಕಾರಣಕ್ಕೆ ಹೆಚ್ಚುವರಿ ವಿದ್ಯಾರ್ಥಿ ಪ್ರವೇಶ ಪಡೆಯತಕ್ಕದ್ದಲ್ಲ. ಇದನ್ನು ಉಲ್ಲಂಘಿಸಿದಲ್ಲಿ 1991ರ ಕರ್ನಾಟಕ ಮಾನ್ಯತೆ ರಹಿತ ಮತ್ತು ಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿದ್ಯಾರ್ಥಿಗಳ ಪ್ರವೇಶ ನಿಷೇಧ, ಅಧಿನಿಯಮದಡಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು.
5. ಭಾರತೀಯ ಶುಶ್ರೂಷಾ ಪರಿಷತ್ತು, ಕರ್ನಾಟಕ ರಾಜ್ಯ ಶುಶ್ರೂಷಾ ಪರಿಷತ್ತು ಮತ್ತು ರಾಜ್ಯ ಸರ್ಕಾರ ಕಾಲಕಾಲಕ್ಕೆ ನೀಡುವ ಸೂಚನೆ ಹಾಗು ಆದೇಶಗಳನ್ನು ಪಾಲಿಸತಕ್ಕದ್ದು.
6. ಭಾರತೀಯ ಶುಶ್ರೂಷಾ ಪರಿಷತ್ತಿನ ಮಾರ್ಗಸೂಚಿ ಪ್ರಕಾರ ಸ್ವಂತ ಆಸ್ಪತ್ರೆಯನ್ನು 5 ವರ್ಷಗಳ ಕಾಲಮಿತಿಯಲ್ಲಿ ಹೊಂದತಕ್ಕದ್ದು. ತಪ್ಪಿದಲ್ಲಿ ಕಾಲೇಜಿನ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.
7. ವಿದ್ಯಾರ್ಥಿಗಳ ಪ್ರವೇಶವನ್ನು 2003ರ ಕರ್ನಾಟಕ ನರ್ಸಿಂಗ್, ಫಾರ್ಮಸಿ ಮತ್ತು ಫಿಜಿಯೋಥೆರಪಿ ಕೋರ್ಸುಗಳ ಪ್ರವೇಶಕ್ಕೆ ಅಭ್ಯರ್ಥಿಗಳ ಆಯ್ಕೆ ನಿಯಮಾವಳಿ ಹಾಗೂ ಸರ್ಕಾರವು ಕಾಲ ಕಾಲಕ್ಕೆ ಎಂ.ಎಸ್ಸಿ., ನರ್ಸಿಂಗ್, ಎಂ.ಪಿ.ಟಿ. ಮತ್ತು ಎಂ. ಫಾರ್ಮಾ ಕೋರ್ಸುಗಳ ಪ್ರವೇಶಕ್ಕೆ ಸರ್ಕಾರಿ ಕೋಟಾದ ಮತ್ತು ಮ್ಯಾನೇಜ್‌ಮೆಂಟ್ ಕೋಟಾದ ನಿರ್ದಿಷ್ಠ ಅನುಪಾತದಲ್ಲಿ ಪ್ರತಿಬಂಧಿಸುವ ಪ್ರಕಾರವೇ ಮಾಡತಕ್ಕದ್ದು.
8. ಮೇಲ್ಕಂಡ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಕಾಲೇಜಾಗಿರುವ ಷರತ್ತಿಗೆ ಒಳಪಟ್ಟಿರುತ್ತದೆ.
9. ಮೇಲ್ಕಂಡ ಯಾವುದೇ ಷರತ್ತನ್ನು ಕಾಲೇಜು ಉಲ್ಲಂಘಿಸಿದಲ್ಲಿ 1994ರ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧಿನಿಯಮದ 48ನೇ ಪ್ರಕರಣದಲ್ಲಿ ಸಂಯೋಜನೆಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.79/10

(ವಿ.ಶ್ರೀರಾಮರೆಡ್ಡಿ)

ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ವೈದ್ಯಕೀಯ ಶಿಕ್ಷಣ)

ವಸತಿ ಸಚಿವಾಲಯ

ವಿಷಯ : ಕ್ಯಾಷುಟೆಕ್ ಬಿಲ್ಡಿಂಗ್ ಸೆಂಟರ್ ಮತ್ತು ಕರ್ನಾಟಕ ರಾಜ್ಯ ಹ್ಯಾಬಿಟಟ್ ಕೇಂದ್ರಗಳನ್ನು ನಿರ್ಮಿತಿ ಕೇಂದ್ರಗಳೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ: (1) ಕರ್ನಾಟಕ ರಾಜ್ಯ ನಿರ್ಮಾಣ ಕೇಂದ್ರದ ಪತ್ರ ಸಂಖ್ಯೆ: ಕಾರ್ನಿಕ್ : 106/ಆಡಳಿತ/10/2007/1262, ದಿನಾಂಕ 19-08-2009.

(2) ಸರ್ಕಾರದ ಪತ್ರ ಸಂಖ್ಯೆ: ವಇ 152 ಹೆಚ್‌ಎಹೆಚ್ 2008, ದಿನಾಂಕ: 22-11-2008.

ಪ್ರಸ್ತಾವನೆ :

ಕರ್ನಾಟಕ ಸರ್ಕಾರದ ಉದ್ದಿಮೆಯಾದ ಕರ್ನಾಟಕ ವಿದ್ಯುತ್ ನಿಗಮ ಹಾಗೂ ಇಂಡೋ ನಾರ್ವೇಜಿಯನ್ ಎನ್‌ವೈರನ್‌ಮೆಂಟ್ ಪ್ರೋಗ್ರಾಂ ನೆರವಿನೊಂದಿಗೆ ನೋಂದಾಯಿಸಲ್ಪಟ್ಟಿರುವ ಕ್ಯಾಷುಟೆಕ್ ಬಿಲ್ಡಿಂಗ್ ಸೆಂಟರ್, ಹಾಗೂ

ಕರ್ನಾಟಕ ರಾಜ್ಯ ನಿರ್ಮಿತಿ ಕೇಂದ್ರಗಳ ಧ್ಯೇಯೋದ್ದೇಶಗಳೊಂದಿಗೆ ಕೇಂದ್ರದ ವಿವಿಧ ಇಲಾಖೆಗಳ ಸಿವಿಲ್ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿರುವ ನೋಂದಾಯಿತ ಕರ್ನಾಟಕ ರಾಜ್ಯ ಹ್ಯಾಬಿಟಟ್ ಕೇಂದ್ರವನ್ನು ನಿರ್ಮಿತಿ ಕೇಂದ್ರಗಳೆಂದು ಪರಿಗಣಿಸುವಂತೆ ಕರ್ನಾಟಕ ರಾಜ್ಯ ನಿರ್ಮಾಣ ಕೇಂದ್ರವು ಸರ್ಕಾರವನ್ನು ಕೋರಿದೆ. ಈ ಸಂಸ್ಥೆಗಳು ನಿರ್ಮಾಣ ಕಾರ್ಯಗಳಲ್ಲಿ ತರಬೇತಿ ಕಾರ್ಯಾಗಾರಗಳನ್ನು ಏರ್ಪಡಿಸುವುದು, ಪರಿಸರ ಪ್ರೇಮಿ ತಂತ್ರಜ್ಞಾನಗಳನ್ನು ಉಪಯೋಗಿಸಿಕೊಳ್ಳುವುದು ಹಾಗೂ ವಸತಿ ನಿರ್ಮಾಣ ಮತ್ತು ಸಂಬಂಧಪಟ್ಟ ಕ್ಷೇತ್ರಗಳಲ್ಲಿ ಹಾರುಬೂದಿ ಬಳಸಿ ಕಾಂಕ್ರೀಟ್ ಬ್ಲಾಕ್ ತಯಾರಿಸುವ ಮುಂತಾದ ಅಭಿವೃದ್ಧಿ ಕಾರ್ಯಗಳೊಂದಿಗೆ ಕ್ರಯ ಪರಿಣಾಮಕಾರಿ ತಂತ್ರಜ್ಞಾನಗಳನ್ನು ಅನುಷ್ಠಾನಗೊಳಿಸುತ್ತಿರುವುದರಿಂದ ಹಾಗೂ ಈ ಕೇಂದ್ರಗಳು ಸರ್ಕಾರದ ಕಾಮಗಾರಿಗಳನ್ನು ನಿರ್ವಹಿಸುತ್ತಿರುವುದರಿಂದ ಅವುಗಳನ್ನು ನಿರ್ಮಿತಿ ಕೇಂದ್ರಗಳು ಎಂದು ಪರಿಗಣಿಸಲು ಪ್ರಸ್ತಾಪಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ : ವಇ 156 ಹೆಚ್ಎಎಂ 2009, ಬೆಂಗಳೂರು, ದಿನಾಂಕ 29ನೇ ಡಿಸೆಂಬರ್ 2009

ಕರ್ನಾಟಕ ವಿದ್ಯುತ್ ನಿಗಮ ಹಾಗೂ ಇಂಡೋ ನಾರ್ವೇಜಿಯನ್ ಎನ್‌ವೈರ್‌ನಮೆಂಟ್ ಪ್ರೋಗ್ರಾಂ ನೆರವಿನೊಂದಿಗೆ ನೋಂದಾಯಿಸಲ್ಪಟ್ಟಿರುವ ಕ್ಯಾಷುಟೆಕ್ ಬಿಲ್ಡಿಂಗ್ ಸೆಂಟರ್ ಹಾಗೂ ಕರ್ನಾಟಕ ರಾಜ್ಯ ನಿರ್ಮಿತಿ ಕೇಂದ್ರಗಳ ಧ್ಯೇಯೋದ್ದೇಶಗಳೊಂದಿಗೆ ನಿರ್ವಹಿಸುತ್ತಿರುವ ಕರ್ನಾಟಕ ಹ್ಯಾಬಿಟಟ್ ಕೇಂದ್ರಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನಿರ್ಮಿತಿ ಕೇಂದ್ರಗಳೆಂದು ಪರಿಗಣಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

2. ನಿರ್ಮಿತಿ ಕೇಂದ್ರವೆಂದು ಪರಿಗಣಿಸಲ್ಪಟ್ಟ ಕ್ಯಾಷುಟೆಕ್ ಬಿಲ್ಡಿಂಗ್ ಸೆಂಟರ್, ಮತ್ತು ಕರ್ನಾಟಕ ಹ್ಯಾಬಿಟಟ್ ಕೇಂದ್ರಗಳು ಸರ್ಕಾರದಿಂದ ಯಾವುದೇ ಅನುದಾನ ಕೋರತಕ್ಕದ್ದಲ್ಲ.

3. ಈ ಆದೇಶವನ್ನು ಟಿಪ್ಪಣಿ ಸಂಖ್ಯೆ ಎಸ್‌ಸಿಎಂ–1070–09, ದಿನಾಂಕ 24–09–09ರ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.80/10 **(ಕೆ.ಆರ್. ವಲ್ಲೂರ)**

ಪೀಠಾಧಿಕಾರಿ–2, ವಸತಿ ಇಲಾಖೆ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ: **ಸರ್ಕಾರಿ ಸ್ವಾಯತ್ತ ಸಂಸ್ಥೆಗಳಾದ ವೈದ್ಯಕೀಯ ವಿಜ್ಞಾನ ಸಂಸ್ಥೆಗಳಿಗೆ ಹೊಂದಿಕೊಂಡಿರುವ ಬೋಧನಾ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಯ ಅಧಿಕಾರಿಗಳನ್ನು ಆಯಾ ಸಂಸ್ಥೆಗಳ ಸೇವೆಯಲ್ಲಿ ವಿಲೀನಗೊಳಿಸುವ ಬಗ್ಗೆ.**

ಪ್ರಸ್ತಾವನೆ:

ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೀದರ್ ಮತ್ತು ಶಿವಮೊಗ್ಗ ವೈದ್ಯಕೀಯ ವಿಜ್ಞಾನ ಸಂಸ್ಥೆಗಳು ಕರ್ನಾಟಕ ಸಂಘಗಳ ನೋಂದಣಿ ಕಾಯ್ದೆ, 1960ರಡಿ ನೋಂದಾಯಿತ ಸ್ವಾಯತ್ತ ಸಂಸ್ಥೆಗಳಾಗಿರುತ್ತವೆ. ಆಯಾ ಜಿಲ್ಲಾ ಕೇಂದ್ರಗಳಲ್ಲಿದ್ದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಆಸ್ಪತ್ರೆಗಳನ್ನು ಅವು ಹೊಂದಿದ್ದ, ಮೂಲಭೂತ ಸೌಕರ್ಯ, ಕಟ್ಟಡ ಉಪಕರಣ, ಸಿಬ್ಬಂದಿ ಮತ್ತು ಆಯವ್ಯಯದೊಂದಿಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಶಿಸ್ತು ನಿಯಂತ್ರಣಕ್ಕೆ ತರಲಾಯಿತು. ಈ ಜಿಲ್ಲಾ ಆಸ್ಪತ್ರೆಗಳನ್ನು ಆಯಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕರು/ಡೀನ್/ಪ್ರಾಂಶುಪಾಲರ ಶೈಕ್ಷಣಿಕ, ಆಡಳಿತಾತ್ಮಕ ಮತ್ತು ಶಿಸ್ತು ನಿಯಂತ್ರಣದ ಬೋಧನಾ ಆಸ್ಪತ್ರೆಗಳೆಂದು ಕರೆಯಲಾಯಿತು. ಅವುಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಯ ವೈದ್ಯರುಗಳು ಅವರು ಹೊಂದಿದ್ದ ಸ್ನಾತಕ/ಸ್ನಾತಕೋತ್ತರ ಪದವಿಗಳಿಗೆ ಅನುಸಾರವಾಗಿ ಆಯಾಯ ವಿಭಾಗಗಳಲ್ಲಿ ಬೋಧಕ ಸಿಬ್ಬಂದಿಯಾಗಿ ಭಾರತೀಯ ವೈದ್ಯಕೀಯ ಪರಿಷತ್ತಿಗೆ ವಾರ್ಷಿಕ ತಪಾಸಣೆಗಾಗಿ ತೋರಿಸಲಾಯಿತು. ಪ್ರಯುಕ್ತ ಇವರು ಬೋಧಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ವಿಷಯವನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಬೋಧಕ ಸಿಬ್ಬಂದಿಯ ಕೊರತೆಯನ್ನು ನೀಗಲು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಂತ್ರಣಗಳ ಪ್ರಕಾರ ಬೋಧನಾ ಆಸ್ಪತ್ರೆಗಳಲ್ಲಿ ಬೋಧಕ ಸಿಬ್ಬಂದಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಯ ತಜ್ಞ ವೈದ್ಯರುಗಳನ್ನು ಆಯಾ ಸಂಸ್ಥೆಗಳ ಸೇವೆಯಲ್ಲಿ ವಿಲೀನಗೊಳಿಸಲು ಸರ್ಕಾರವು ತೀರ್ಮಾನಿಸಿ, ಈ ಆದೇಶವನ್ನು ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಆಕುಕ 395 ಎಂಎಂಇ 2007, ಬೆಂಗಳೂರು ದಿನಾಂಕ 06–01–2010.

ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗಳಿಗೆ ಹೊಂದಿಕೊಂಡಿರುವ ಬೋಧನಾ ಆಸ್ಪತ್ರೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅನುಬಂಧ–I ಮತ್ತು ಅನುಬಂಧ–IIರಲ್ಲಿ ನಮೂದಿಸಿರುವ ವೈದ್ಯರುಗಳ ಸೇವೆಯನ್ನು ಈ ಕೂಡಲೇ ಜಾರಿಗೆ ಬರುವಂತೆ ಅವರ ಎದುರಿಗೆ ನಮೂದಿಸಿರುವ ಸ್ವಾಯತ್ತ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಸೇವೆಯಲ್ಲಿ ಈ ಕೆಳಗಿನ ಷರತ್ತುಗಳಿಗೊಳಪಟ್ಟು ವಿಲೀನಗೊಳಿಸಲಾಗಿದೆ.

ಷರತ್ತುಗಳು :

(1) ತಜ್ಞ ವೈದ್ಯರುಗಳು ಭಾರತೀಯ ವೈದ್ಯಕೀಯ ಪರಿಷತ್ತಿನ ಬೋಧಕ ಸಿಬ್ಬಂದಿಗೆ ವಿದ್ಯಾರ್ಹತೆ ನಿಯಂತ್ರಣಗಳ ಪ್ರಕಾರ ಸ್ನಾತಕೋತ್ತರ ಪದವಿಯನ್ನು ಹೊಂದಿ ಅರ್ಹರಾಗಿರತಕ್ಕದ್ದು.

(2) ತಜ್ಞ ವೈದ್ಯರುಗಳು ಪರಿವೀಕ್ಷಣಾ ಅವಧಿ/ಸ್ಥಾನಾಪನ್ನ ಅವಧಿಯನ್ನು ತೃಪ್ತಿಕರವಾಗಿ ಪೂರೈಸಿರತಕ್ಕದ್ದು.

(3) ಇವರ ವಿರುದ್ಧ ಇಲಾಖಾ ವಿಚಾರಣೆ/ಕ್ರಿಮಿನಲ್ ಮೊಕದ್ದಮೆ ಬಾಕಿ ಇರತಕ್ಕದ್ದಲ್ಲ.

(4) ತಜ್ಞ ವೈದ್ಯರುಗಳು ಸ್ವಾಯತ್ತ ಸಂಸ್ಥೆಗಳ ಸೇವೆಯಲ್ಲಿ ವಿಲೀನಗೊಂಡ ನಂತರ ಮುಂದೆ ಅವರು ರಾಜ್ಯ ಸಿವಿಲ್ ಸೇವೆಗಳಲ್ಲಿನ ಹುದ್ದೆಗಳಿಗೆ ವಾಪಸ್ ಬರಲು ಆಸ್ಪದ ಇರತಕ್ಕದ್ದಲ್ಲ.

(5) ಸರ್ಕಾರಿ ಇಲಾಖೆಯಿಂದ ಸ್ವಾಯತ್ತ ಸಂಸ್ಥೆಗೆ ವಿಲೀನಗೊಳ್ಳಲು ಸಂಬಂಧಿಸಿದ ನೌಕರರುಗಳು ಒಪ್ಪಿಗೆಯನ್ನು ಬರವಣಿಗೆ ಮೂಲಕ ಸಲ್ಲಿಸಿರತಕ್ಕದ್ದು.

(6) ಸದರಿ ನೌಕರರು ಸರ್ಕಾರದಲ್ಲಿ ಸಲ್ಲಿಸಿದ ಸೇವೆಗೆ ಸಂಬಂಧಿಸಿದಂತೆ ಪ್ರೋರೇಟಾ (Prorata) ಪಿಂಚಣಿ ಬಗ್ಗೆ ಆದೇಶವನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಈ ಆದೇಶವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು) ಯ ಅನಧಿಕೃತ ಟಿಪ್ಪಣಿ ಸಂಖ್ಯೆ : ಸಿಆಸುಇ 524 ಸೇನಿಎ 2008, ದಿನಾಂಕ 22-12-2008ರ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ವಿ. ಶ್ರೀರಾಮರೆಡ್ಡಿ)

ಸರ್ಕಾರದ ಅಧೀನ ಕಾರ್ಯದರ್ಶಿ

ಪಿಆರ್ 73 ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ)

ಸರ್ಕಾರದ ಆದೇಶ ಸಂಖ್ಯೆ : ಆಕುಕ 395 ಎಂಎಂಸಿ 2007, ದಿನಾಂಕ 06-01-2010ಕ್ಕೆ ಅನುಬಂಧ-I

ಕ್ರ. ಸಂ.	ವೈದ್ಯರ ಹೆಸರು	ಪದನಾಮ	ವಿದ್ಯಾರ್ಹತೆ	ಜನ್ಮ ದಿನಾಂಕ	ಸೇವೆಗೆ ಸೇರಿದ ದಿನಾಂಕ	ಸಹಾಯಕ ಪ್ರಾಧ್ಯಾಪಕರಾಗಿ ವೃಂದ ಬದಲಾವಣೆ ಮಾಡಿ ಖಾಲಿ ಇರುವ ಹುದ್ದೆಗೆ ನೇಮಿಸಿರುವ ಸ್ಥಳ
1.	ಡಾ: ವಿ.ಎಸ್. ಶಂಕರೇಗೌಡ	ಹಿರಿಯ ತಜ್ಞರು	ಎಂಬಿಬಿಎಸ್, ಎಂಎಸ್. ಜನರಲ್ ಸರ್ಜರಿ	04.08.1953	27.10.1980	ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು
2.	ಡಾ: ಪಿ.ವಿ. ವೆಂಕಟರಾಜಮ್ಮ	ಹಿರಿಯ ತಜ್ಞರು	ಎಂಬಿಬಿಎಸ್. ಎಂಎಸ್. (ಇಎನ್‌ಟಿ)	13.10.1957	25.11.1991	ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು
3.	ಡಾ: ಎಸ್. ಅಮುದ	ಹಿರಿಯ ತಜ್ಞರು	ಎಂಬಿಬಿಎಸ್. ಎಂಡಿ (ಒಬಿಜಿ)	31.12.1959	20.12.1985	ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು
4.	ಡಾ: ಎಂ. ಕೃಷ್ಣವೇಣಿ	ಹಿರಿಯ ತಜ್ಞರು	ಎಂಬಿಬಿಎಸ್ ಎಂ.ಡಿ. (ಒಬಿಜಿ)	23.01.1958	01.03.1985	ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ಬೆಂಗಳೂರು
5.	ಡಾ:ವಿಶ್ವನಾಥ್ ಬಿ.ಎನ್.	ಹಿರಿಯ ತಜ್ಞರು	ಎಂಬಿಬಿಎಸ್ ಎಂಎಸ್ (ಆರ್ಥೋ)	06.07.1964	15.07.1991	ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.
6.	ಡಾ: ರಾಮಚಂದ್ರ ಎಂ.ಎಲ್.	ಹಿರಿಯ ತಜ್ಞರು	ಎಂಬಿಬಿಎಸ್ ಎಂ.ಎಸ್. (ಜನರಲ್ ಸರ್ಜರಿ)	11.06.1964	04.09.1991	ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು.

ವಿ. ಶ್ರೀರಾಮರೆಡ್ಡಿ,

ಸರ್ಕಾರದ ಅಧೀನ ಕಾರ್ಯದರ್ಶಿ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ)

ಸರ್ಕಾರದ ಆದೇಶ ಸಂಖ್ಯೆ : ಆಕುಕ 395 ಎಂಎಂಸಿ 2007, ದಿನಾಂಕ 06–01–2010ಕ್ಕೆ ಅನುಬಂಧ–II

ಕ್ರ. ಸಂ	ವೈದ್ಯರ ಹೆಸರು	ಪದನಾಮ	ವಿದ್ಯಾರ್ಹತೆ	ಜನ್ಮ ದಿನಾಂಕ	ಸೇವೆಗೆ ಸೇರಿದ ದಿನಾಂಕ	ವಿಲೀನಗೊಳಿಸಿದ ಸಂಸ್ಥೆಯ ಹೆಸರು
1.	ಡಾ: ಕೆ. ಕಸ್ತೂರಿ	ಹಿರಿಯ ತಜ್ಞರು	ಎಂಡಿ. ಸೈಕಿಯಾಟ್ರಿ	12.11.1957	31.07.2006	ಬೆಂಗಳೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.
2.	ಡಾ: ಬಸವರಾಜ್ ಭಾಲ್ಕಿ	ಹಿರಿಯ ತಜ್ಞರು	ಎಂ.ಡಿ. ಜಿಎಂ.	01.01.1960	02.11.2007	ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಬೀದರ್

ಅಕುಕ 395 ಎಂಎಂಸಿ 2007

ವಿ. ಶ್ರೀರಾಮರೆಡ್ಡಿ,
ಸರ್ಕಾರದ ಅಧೀನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ
ಸೇರ್ಪಡೆ

ಸಂಖ್ಯೆ : ಆಕುಕ 395 ಎಂಎಂಸಿ 2007, ಬೆಂಗಳೂರು, ದಿನಾಂಕ 6ನೇ ಜನವರಿ 2010

ಸರ್ಕಾರಿ ಆದೇಶ ಸಂಖ್ಯೆ : ಆಕುಕ 395 ಎಂಎಂಸಿ 2007, ದಿನಾಂಕ 28.02.2009ರ ಅನುಬಂಧ–I ರಲ್ಲಿ ಕ್ರಮ ಸಂಖ್ಯೆ : 28ರ ನಂತರ, ಅನುಬಂಧ–II ರಲ್ಲಿ ಕ್ರಮ ಸಂಖ್ಯೆ 20ರ ನಂತರ ಮತ್ತು ಅನುಬಂಧ–VI ರ ಕ್ರಮ ಸಂಖ್ಯೆ : 23ರ ನಂತರ ಈ ಕೆಳಗಿನ ಹೆಸರುಗಳನ್ನು ಸೇರಿಸಿಕೊಂಡು ಓದಿಕೊಳ್ಳತಕ್ಕದ್ದು.

Sl No.	Name	Designation	Qualification	DOB	Date of Entry into Service
Annexure-1 Bangalore Medical College and Research Institute.					
29.	Dr. K.G. Gopala krishna	Senior Specialist	D. Ortho DNB (Ortho)	10.07.1965	31.07.1991
Annexure-II-Mysore Medical College and Research Institute					
21.	Dr. P.C. Sunil Kumar	Senior Specialist	D. Ortho DNB (Ortho)	03.03.1971	06.09.2002
Annexure-VI-Shimoga Institute of Medical Sciences					
24.	Dr. Swathi Bhat	Senior Specialist	DGO DNB (OBG)	03.02.1974	13.09.2002

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ
(ವಿ. ಶ್ರೀರಾಮರೆಡ್ಡಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ)

ಪಿಆರ್ 74

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ: ಡಾ: ವೈ.ಡಿ. ಶಿಲ್ಪ, ವೈದ್ಯಾಧಿಕಾರಿ ಸಾರ್ವಜನಿಕ ಆಸ್ಪತ್ರೆ, ಹೆಚ್.ಡಿ. ಕೋಟೆ, ಮೈಸೂರು ಜಿಲ್ಲೆ ಇವರ ರಾಜೀನಾಮೆಯನ್ನು ಅಂಗೀಕರಿಸುವ ಬಗ್ಗೆ.

ಓದಲಾಗಿದೆ: ಆಯುಕ್ತರು, ಆಕುಕ ಸೇವೆಗಳು, ಬೆಂಗಳೂರು, ಇವರ ಪತ್ರ ಸಂಖ್ಯೆ : ಜೆಆರ್ಒ(2) 71/2009–10 ದಿನಾಂಕ: –/07/2009.

ಪ್ರಸ್ತಾವನೆ :

ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಬೆಂಗಳೂರು, ಇವರು ಮೇಲೆ ಓದಲಾದ ಪತ್ರದಲ್ಲಿ ಡಾ.. ವೈ.ಡಿ. ಶಿಲ್ಪ, ಇವರು ದಿನಾಂಕ 04–02–2009 ರಂದು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಯಾಗಿ ಸೇವೆಗೆ ಸೇರಿದ್ದು, ದಿನಾಂಕ : 06–02–2009 ರಿಂದ ಕರ್ತವ್ಯಕ್ಕೆ ಅನಧಿಕೃತ ಗೈರುಹಾಜರಿಯಾಗಿರುತ್ತಾರೆ. ತದನಂತರ ದಿನಾಂಕ : 01–07–2009 ರಂದು ರಾಜೀನಾಮೆ ಸಲ್ಲಿಸಿದ್ದು ಇವರ ವಿರುದ್ಧ ಇಲಾಖಾ ವಿಚಾರಣೆ/ಮೊಕದ್ದಮೆ ಹಾಗೂ ಸರ್ಕಾರಕ್ಕೆ

ಯಾವುದೇ ಬೇಬಾಕಿ ಇರುವುದಿಲ್ಲವಾದ್ದರಿಂದ ದಿನಾಂಕ : 06–02–2009 ರಿಂದ ಜಾರಿಗೆ ಬರುವಂತೆ ವೈದ್ಯರ ರಾಜೀನಾಮೆಯನ್ನು ಅಂಗೀಕರಿಸಲು ಕೋರಿರುತ್ತಾರೆ.

ಆಯುಕ್ತರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಆಕುಕ 404 ಹೆಚ್ಎಸ್ಹೆಚ್ 2009 ಬೆಂಗಳೂರು ದಿನಾಂಕ 04–01–2010.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 252(ಎ) ರನ್ವಯ ಡಾ: ವೈ.ಡಿ. ಶಿಲ್ಪ, ವೈದ್ಯಾಧಿಕಾರಿ, ಸಾರ್ವಜನಿಕ ಆಸ್ಪತ್ರೆ, ಹೆಚ್.ಡಿ. ಕೋಟೆ, ಮೈಸೂರು ಜಿಲ್ಲೆ ಇವರು ನೀಡಿರುವ ರಾಜೀನಾಮೆಯನ್ನು ದಿನಾಂಕ : 06–02–2009 ರಿಂದ ಪೂರ್ವಾನ್ವಯವಾಗಿ ಜಾರಿಗೆ ಬರುವಂತೆ ಅಂಗೀಕರಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಐ. ಹೇಮನಾಥ್)

ಸರ್ಕಾರದ ಅಧೀನ ಕಾರ್ಯದರ್ಶಿ

ಪಿಆರ್ 75 ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ಸೇವೆಗಳು–I)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ

ವಿಷಯ: ಭರತೇಶ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, ಹುಕ್ಕೇರಿ, ಬೆಳಗಾಂ–ಪ್ಯಾರಾ ಮೆಡಿಕಲ್ ಕೋರ್ಸ್‌ಗಳ ಮಂಜೂರಾತಿ ಬಗ್ಗೆ.

ಓದಲಾಗಿದೆ: ಪತ್ರ ಸಂಖ್ಯೆ : ಪಿಎಂಬಿ/45/07–08 ದಿನಾಂಕ 04–02–2009.

ಪ್ರಸ್ತಾವನೆ :

ಕರ್ನಾಟಕ ಪ್ಯಾರಾ ಮೆಡಿಕಲ್ ಬೋರ್ಡ್‌ನ ಸದಸ್ಯ ಕಾರ್ಯದರ್ಶಿಯವರು ಮೇಲೆ ಓದಲಾದ ತಮ್ಮ ಪತ್ರದಲ್ಲಿ ಭರತೇಶ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, ಹುಕ್ಕೇರಿ, ಬೆಳಗಾಂ ಇವರಿಗೆ ಡಿಪ್ಲೋಮ ಇನ್ ಲ್ಯಾಬ್ ಟೆಕ್ನಾಲಜಿ ಮತ್ತು ಡಿಪ್ಲೋಮ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್‌ಗಳ ಮಂಜೂರಾತಿಗಾಗಿ ಅರ್ಜಿಯನ್ನು ಪ್ಯಾರಾ ಮೆಡಿಕಲ್ ಮಂಡಳಿಗೆ ಸಲ್ಲಿಸಿದ್ದಾರೆಂದು, ಮಂಡಳಿಯು ವಿಷಯ ತಜ್ಞರ ತಂಡವನ್ನು ರಚಿಸಿ ಕೋರ್ಸುಗಳನ್ನು ಸಂಸ್ಥೆಯು ನಡೆಸಲು ಹೊಂದಿರುವ ಮೂಲಭೂತ ಸೌಕರ್ಯಗಳನ್ನು ಪರಿವೀಕ್ಷಿಸಿ ಅದರ ವರದಿಯನ್ನು ಸಲ್ಲಿಸಲು ಸೂಚಿಸಿತ್ತೆಂದು, ತಜ್ಞರ ತಂಡವು ಸಂಸ್ಥೆಗೆ ದಿನಾಂಕ 02.02.2008 ಮತ್ತು 15.05.2008ರಂದು ಭೇಟಿ ನೀಡಿ ಪರಿವೀಕ್ಷಿಸಿ, ವರದಿಯನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಮಂಡಳಿಗೆ ಸಲ್ಲಿಸಿತ್ತೆಂದು, ತಜ್ಞರ ತಂಡದ ಪರಿವೀಕ್ಷಣ ವರದಿಯನ್ನು ದಿನಾಂಕ 24.12.2008ರಂದು ನಡೆದ ಮಂಡಳಿಯ ಸಭೆಯಲ್ಲಿ ವಿಶ್ಲೇಷಿಸಿ ಕೋರ್ಸ್‌ಗಳನ್ನು ಮಂಜೂರು ಮಾಡಲು ಶಿಫಾರಸ್ಸು ಮಾಡಿದೆಯೆಂದು ವರದಿ ಮಾಡುತ್ತಾ ಮಂಜೂರಾತಿ ನೀಡುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಪ್ರಕರಣವನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಭರತೇಶ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, ಹುಕ್ಕೇರಿ, ಬೆಳಗಾಂ – ಇವರಿಗೆ ಡಿಪ್ಲೋಮ ಇನ್ ಲ್ಯಾಬ್ ಟೆಕ್ನಾಲಜಿ ಮತ್ತು ಡಿಪ್ಲೋಮ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್‌ಗಳನ್ನು ತಲಾ 20 ಸೀಟುಗಳ ವಾರ್ಷಿಕ ಪ್ರವೇಶಮಿತಿಯೊಂದಿಗೆ 2009–10ನೇ ಸಾಲಿನಿಂದ ಪ್ರಾರಂಭಿಸಲು ಮಂಜೂರಾತಿ ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶವನ್ನು ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಆಕುಕ 21 ಎಂಎಂಇ 2009, ಬೆಂಗಳೂರು ದಿನಾಂಕ 01.01.2010.

ಭರತೇಶ್ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾ ಮೆಡಿಕಲ್ ಸೈನ್ಸಸ್, ಹುಕ್ಕೇರಿ, ಬೆಳಗಾಂ ಇವರಿಗೆ ತಲಾ 20 (ಇಪ್ಪತ್ತು) ಸೀಟುಗಳ ವಾರ್ಷಿಕ ಪ್ರವೇಶ ಮಿತಿಯೊಂದಿಗೆ ಡಿಪ್ಲೊಮ ಇನ್ ಲ್ಯಾಬ್ ಟೆಕ್ನಾಲಜಿ ಮತ್ತು ಡಿಪ್ಲೊಮ ಇನ್ ಹೆಲ್ತ್ ಇನ್ಸ್‌ಪೆಕ್ಟರ್ ಕೋರ್ಸ್‌ಗಳನ್ನು 2009–10ನೇ ಸಾಲಿನಿಂದ ಪ್ರಾರಂಭಿಸಲು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟು ಮಂಜೂರಾತಿ ನೀಡಿದೆ.

ಷರತ್ತುಗಳು

(1) ಯಾವುದೇ ಪ್ಯಾರಾ ಮೆಡಿಕಲ್ ಕೋರ್ಸುಗಳನ್ನು ಪ್ರಾರಂಭ ಮಾಡುವ ಮೊದಲು ಸಂಸ್ಥೆಯು ಸಂಯೋಜನಾ ಶುಲ್ಕದ ರೂಪದಲ್ಲಿ ಪ್ರತಿ ಕೋರ್ಸಿಗೆ ರೂ. 30,000/– (ಮೂವತ್ತು ಸಾವಿರ ರೂಪಾಯಿಗಳು ಮಾತ್ರ) ಹಾಗೂ ಪ್ರತಿ ವರ್ಷ ಸಂಯೋಜನಾ ನವೀಕರಣ ಶುಲ್ಕವಾಗಿ ರೂ. 10,000/– (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಂದಾಯ ಮಾಡತಕ್ಕದ್ದು.

(2) ಸಂಸ್ಥೆಯವರು ಕೋರ್ಸನ್ನು ಪ್ರಾರಂಭಿಸುವ ಮೊದಲು ಬೋರ್ಡ್ ನಿಗದಿಪಡಿಸುವ ಬ್ಯಾಂಕ್ ಗ್ಯಾರಂಟಿಯನ್ನು ಒದಗಿಸತಕ್ಕದ್ದು.

(3) ಸದರಿ ಕೋರ್ಸುಗಳಿಗೆ ವಿದ್ಯಾರ್ಥಿ ಪ್ರವೇಶವನ್ನು ವರ್ಷಕ್ಕೆ ಒಂದು ಬಾರಿ ನವೆಂಬರ್ ತಿಂಗಳೊಳಗೆ ತೆಗೆದುಕೊಂಡು ಜನವರಿ ಅಥವಾ ಫೆಬ್ರವರಿ ತಿಂಗಳ ಮಧ್ಯಾಂತರದೊಳಗೆ ವಿದ್ಯಾರ್ಥಿಗಳ ಪಟ್ಟಿಯನ್ನು ಮೂಲ ಅಂಕಪಟ್ಟಿ ಮತ್ತು ದೃಢೀಕರಣಗಳನ್ನು ಬೋರ್ಡಿಗೆ ಸಲ್ಲಿಸತಕ್ಕದ್ದು.

(4) ಸದರಿ ಕೋರ್ಸುಗಳಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಗೆ ರೂ. 500.00 ರಂತೆ ನೋಂದಣಿ ಶುಲ್ಕದೊಂದಿಗೆ ವಿದ್ಯಾರ್ಥಿಗಳ ಆಯ್ಕೆ ಪಟ್ಟಿಯನ್ನು ಅವರ ವಿದ್ಯಾರ್ಹತೆಯ ಪ್ರಮಾಣ ಪತ್ರದೊಂದಿಗೆ ಮಂಜೂರಾತಿಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಸಲ್ಲಿಸತಕ್ಕದ್ದು.

(5) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯಲು ಕನಿಷ್ಠ ವಿದ್ಯಾರ್ಹತೆಯು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು. ಕೋರ್ಸ್‌ನ ಅವಧಿ ಮೂರು ವರ್ಷಗಳಾಗಿರತಕ್ಕದ್ದು.

(6) ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆದ ಪ್ರತಿ ವಿದ್ಯಾರ್ಥಿಯಿಂದ ಸರ್ಕಾರ ನಿಗದಿಪಡಿಸಿದ ಶುಲ್ಕವನ್ನು ಮಾತ್ರ ಪಡೆಯತಕ್ಕದ್ದು.

(7) ಸರ್ಕಾರ ಮಂಜೂರಾತಿ ನೀಡಿದ ಪ್ರವೇಶ ಮಿತಿಗಿಂತ ಹೆಚ್ಚಿನ ವಿದ್ಯಾರ್ಥಿಗಳಿಗೆ ಪ್ರವೇಶ ನೀಡತಕ್ಕದ್ದಲ್ಲ. ಒಂದು ವೇಳೆ ನಿಗದಿಪಡಿಸಿದ ಪ್ರವೇಶ ಮಿತಿಗಿಂತ ಹೆಚ್ಚಿನ ಪ್ರವೇಶ ಮಾಡಿಕೊಂಡಲ್ಲಿ ಅದರಿಂದ ಉಂಟಾಗುವ ಅನಾನುಕೂಲ ಸಮಸ್ಯೆಗಳಿಗೆ ಸಂಸ್ಥೆಯೇ ಜವಾಬ್ದಾರಿಯಾಗಿರುತ್ತದೆ.

(8) ಸಂಸ್ಥೆಯವರಿಗೆ ನಿಗದಿಪಡಿಸಿದ ಸೀಟುಗಳಲ್ಲಿ ಶೇ.20 ರಷ್ಟನ್ನು ಸರ್ಕಾರದಿಂದ ಆಯ್ಕೆ ಮಾಡಿದ ಅಭ್ಯರ್ಥಿಗಳಿಗೆ ಪ್ರವೇಶ ನೀಡಲು ಸಂಸ್ಥೆಯು ಬದ್ಧವಾಗಿರತಕ್ಕದ್ದು.

(9) ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ನಿಯಮಾವಳಿಯಂತೆ, ಪ್ಯಾರಾ ಮೆಡಿಕಲ್ ಕೋರ್ಸಿಗೆ ಪ್ರವೇಶ ಪಡೆಯುವ ಪ್ರತಿ ವಿಧ್ಯಾರ್ಥಿಯ ವಯೋಮಿತಿ, ಪಠ್ಯಕ್ರಮ, ಕೋರ್ಸಿನ ಅವಧಿ ಹಾಗೂ ಪರೀಕ್ಷಾ ಕ್ರಮ ಮತ್ತು ಪ್ಯಾರಾ ಮೆಡಿಕಲ್ ಬೋರ್ಡ್ ನಿಗದಿಪಡಿಸಿದ ಇತರೆ ನಿಯಮಗಳನ್ನು ಸಂಸ್ಥೆಯು ಚಾಚೂ ತಪ್ಪದೇ ಕಡ್ಡಾಯವಾಗಿ ಪಾಲಿಸತಕ್ಕದ್ದು.

(10)ಸಂಸ್ಥೆಯು ಸುಸಜ್ಜಿತ ತರಗತಿ ಕೊಠಡಿ, ಪ್ರಯೋಗ ಶಾಲೆ, ವಾಚನಾಲಯ, ವಿದ್ಯಾರ್ಥಿನಿಲಯ ಹಾಗೂ ಇತರೆ ಸೌಲಭ್ಯವನ್ನು ವಿಧ್ಯಾರ್ಥಿಗಳಿಗೆ ಒದಗಿಸತಕ್ಕದ್ದು.

(11) ಸದರಿ ಸಂಸ್ಥೆಯು ಹೊಂದಿರುವ ಮೂಲಭೂತ ಸೌಕರ್ಯಗಳ ಬಗ್ಗೆ ವಿದ್ಯಾರ್ಥಿಗಳು ಮೊದಲ ವರ್ಷದ ಪರೀಕ್ಷೆಯನ್ನು ತೆಗೆದುಕೊಳ್ಳುವ ಪೂರ್ವದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ಇಚ್ಛಿಸಿದಲ್ಲಿ ಎರಡನೇ ಬಾರಿಗೆ ಸಂಸ್ಥೆಯನ್ನು ತಪಾಸಣೆ ಮಾಡತಕ್ಕದ್ದು.

(12)ಸರ್ಕಾರದಿಂದ ಯಾವುದೇ ಆರ್ಥಿಕ ಸೌಲಭ್ಯ ಅಥವಾ ಅನುದಾನವನ್ನು ಸಂಸ್ಥೆಗೆ ನೀಡಲಾಗುವುದಿಲ್ಲ.

(13)ಸಂಸ್ಥೆಯನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಲ್ಲಿ ನೋಂದಣಿ ಮಾಡಿಸತಕ್ಕದ್ದು ಹಾಗೂ ಪ್ಯಾರಾ ಮೆಡಿಕಲ್ ಬೋರ್ಡ್‌ನಿಗದಿಪಡಿಸುವ ಮಾದರಿಯನ್ನು ಅನುಸರಿಸತಕ್ಕದ್ದು.

(14)ಪ್ಯಾರಾ ಮೆಡಿಕಲ್ ಕೋರ್ಸಿನ ಅಂತ್ಯದಲ್ಲಿ ಪ್ಯಾರಾ ಮೆಡಿಕಲ್ ಬೋರ್ಡ್ ನಡೆಸುವ ಪರೀಕ್ಷೆಯನ್ನು ವಿದ್ಯಾರ್ಥಿಗಳು ತೆಗೆದುಕೊಂಡು, ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪ್ರಮಾಣಪತ್ರವನ್ನು ಪ್ಯಾರಾ ಮೆಡಿಕಲ್ ಬೋರ್ಡ್‌ನಿಂದ ಪಡೆಯತಕ್ಕದ್ದು.

(15)ಪ್ರತಿ ತಪಾಸಣೆಗೆ ಮತ್ತು ಒಂದು ಕೋರ್ಸಿಗೆ ಸಂಸ್ಥೆಯು ರೂ.10,000/– (ಹತ್ತು ಸಾವಿರ ರೂಪಾಯಿಗಳು ಮಾತ್ರ) ಅನ್ನು ತಪಾಸಣಾ ಶುಲ್ಕವಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ಪಾವತಿ ಮಾಡತಕ್ಕದ್ದು.

(16)ದಿನಾಂಕ 30–03–1999 ಸಂಖ್ಯೆ; ಆಕುಕ 144 ಎಂಎಂಇ 98ರ ಸರ್ಕಾರಿ ಆದೇಶದಲ್ಲಿ ನಿರ್ದಿಷ್ಟಪಡಿಸಿರುವ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು ಹಾಗೂ ಆಕುಕ 328 ಎಂಎಸ್‌ಎಫ್ 07,ದಿನಾಂಕ 27–07–2007 ರಲ್ಲಿ ತಿಳಿಸಿರುವ ಆದೇಶವನ್ನು ಪಾಲಿಸತಕ್ಕದ್ದು.

(17)ಪ್ರಸ್ತುತ ವಿಧಿಸುತ್ತಿರುವ ಮೇಲ್ಕಂಡ ನಿಗದಿತ ಷರತ್ತುಗಳನ್ನು ಉಲ್ಲಂಘಿಸಿದ ಸಂದರ್ಭದಲ್ಲಿ ಅಂತಹ ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್‌ನ ಮಾನ್ಯತೆಯನ್ನು ರದ್ದುಪಡಿಸಬಹುದೆಂದು ಸಂಸ್ಥೆಯು ರೂ.100 ಛಾಪಾ ಕಾಗದದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

(18)ಪ್ರಸ್ತಾವಿತ ಶಾಲೆಯ ಕಟ್ಟಡವು ಬಾಡಿಗೆ/ಲೀಸ್ ಆದ ಪಕ್ಷದಲ್ಲಿ ಬಾಡಿಗೆ/ಲೀಸ್ ಕರಾರು ಪತ್ರವು ರೂ.100 ಛಾಪಾ ಕಾಗದದಲ್ಲಿರಬೇಕು ಮತ್ತು ಬಾಡಿಗೆ/ಲೀಸ್ ಅವಧಿಯು ಕನಿಷ್ಠ 10 ವರ್ಷಗಳಿರಬೇಕು.

(19)ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸ್ ಮಂಜೂರಾತಿ ಆದ ದಿನಾಂಕದಿಂದ 5 ವರ್ಷದೊಳಗಾಗಿ ಮಂಜೂರಾತಿ ಪಡೆದ ಸಂಸ್ಥೆಯು ಪ್ಯಾರಾ ಮೆಡಿಕಲ್ ಶಾಲೆ/ಕೋರ್ಸನ್ನು ನಡೆಸಲು ತನ್ನದೇ ಆದ ಸ್ವಂತ ಕಟ್ಟಡವನ್ನು ಹೊಂದುವುದಾಗಿ ರೂ.100 ಛಾಪಾ ಕಾಗದಲ್ಲಿ ಮುಚ್ಚಳಿಕೆಯನ್ನು ನೀಡತಕ್ಕದ್ದು.

(20) ಸಂಸ್ಥೆಯು ಪ್ರತಿ ವರ್ಷ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡುವ ಮೊದಲು ಸಂಸ್ಥೆಯು ಪ್ರಾಂಶುಪಾಲರನ್ನು ಒಳಗೊಂಡಂತೆ ಎಲ್ಲಾ ಸಿಬ್ಬಂದಿಗಳ (ಬೋಧಕ ಮತ್ತು ಬೋಧಕೇತರ) ಸಂಪೂರ್ಣ ಮಾಹಿತಿಯನ್ನು ನೀಡತಕ್ಕದ್ದು.

(21)ಮೇಲ್ಕಂಡ ಯಾವುದೇ ಷರತ್ತುಗಳನ್ನು ಸಂಸ್ಥೆಯು ಉಲ್ಲಂಘಿಸಿದಲ್ಲಿ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

(22) ಪ್ಯಾರಾ ಮೆಡಿಕಲ್ ಹೊಸ ಕೋರ್ಸ್‌ಗಳನ್ನು ಪ್ರಾರಂಭಿಸಲು ಬ್ಯಾಂಕ್ ಗ್ಯಾರಂಟಿ ಅಫಿಲಿಯೇಶನ್ ಫೀ ಮತ್ತು ವಿದ್ಯಾರ್ಥಿಗಳ ಮೂಲ ದಾಖಲೆಗಳನ್ನು ಸಂಸ್ಥೆಗಳು ದಿನಾಂಕ 31.01.2010ರೊಳಗಾಗಿ ಪ್ಯಾರಾ ಮೆಡಿಕಲ್ ಬೋರ್ಡಿಗೆ ನೀಡಿದಲ್ಲಿ 2009-10 ನೇ ಸಾಲಿಗೆ ಮಂಜೂರಾತಿಯು ಅನ್ವಯಿಸತಕ್ಕದ್ದು ಅಥವಾ ದಿನಾಂಕ 01.02.2010 ರ ನಂತರ ನೀಡಿದಲ್ಲಿ 2010-11ನೇ ಸಾಲಿಗೆ ಮಂಜೂರಾತಿಯು ಜಾರಿಗೊಳಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ವಿ. ಶ್ರೀರಾಮರೆಡ್ಡಿ

ಸರ್ಕಾರದ ಅಧೀನ ಕಾರ್ಯದರ್ಶಿ

ಪಿಆರ್ 76/10 ಆರೋಗ್ಯ ಮತ್ತು ಕುಟುಂಬಕಲ್ಯಾಣ ಇಲಾಖೆ.

(ವೈದ್ಯಕೀಯ ಶಿಕ್ಷಣ)

ವಸತಿ ಸಚಿವಾಲಯ

ವಿಷಯ : ಭದ್ರಾವತಿ ನಗರ ಆಶ್ರಯ ಸಮಿತಿಗೆ ಅಧಿಕಾರೇತರ ಸದಸ್ಯರ ನೇಮಕಾತಿ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಆದೇಶ ಸಂ.ವಇ/42/ಹೆಚ್ಎಎಂ/1999, ದಿನಾಂಕ : 10-05-2000.

2. ಸರ್ಕಾರದ ಆದೇಶ ಸಂ.ವಇ/18/ಹೆಚ್ಎಎಸ್/2008, ದಿನಾಂಕ : 16-09-2009.

ಪ್ರಸ್ತಾವನೆ :

ಸರ್ಕಾರವು ನಗರ ಆಶ್ರಯ ಸಮಿತಿಗಳನ್ನು ಮೇಲೆ (1)ರಲ್ಲಿ ಓದಲಾದ ಆದೇಶದನ್ವಯ ಮತ್ತು ಮೇಲೆ (2)ರಲ್ಲಿ ಓದಲಾದ ಆದೇಶವನ್ನು ಮುಂದುವರೆಸುತ್ತಾ, ಭದ್ರಾವತಿ ನಗರ ಆಶ್ರಯ ಸಮಿತಿಗೆ ಅಧಿಕಾರೇತರ ಸದಸ್ಯರನ್ನು ನೇಮಿಸುವ ಬಗ್ಗೆ ಪರಿಶೀಲಿಸಿ, ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಸಂ.ವಇ 21 ಹೆಚ್ಎಎಸ್ 2009, ಬೆಂಗಳೂರು, ದಿನಾಂಕ: 7ನೇ ಜನವರಿ 2010.

ಭದ್ರಾವತಿ ನಗರ ಆಶ್ರಯ ಸಮಿತಿಗೆ ಈ ಕೆಳಕಂಡವರನ್ನು ಅಧಿಕಾರೇತರ ಸದಸ್ಯರನ್ನಾಗಿ ನೇಮಿಸಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಆಶ್ರಯ ಸಮಿತಿಯನ್ನು ಪುನರ್‌ರಚಿಸಲಾಗಿದೆ.

ಕ್ರ.ಸಂ.	ಅಭ್ಯರ್ಥಿಯ ಹೆಸರು	ವರ್ಗ
1.	ಶ್ರೀ ಉಮ್ಮರ್ ಕೋಯಾ ಬಿನ್ ಮಹಮ್ಮದ್ ಕುಟ್ಟಿ, ಸೀಗೆಬಾಗಿ, ಭದ್ರಾವತಿ	ಸಾಮಾನ್ಯ
2.	ಶ್ರೀಮತಿ ಲಕ್ಷ್ಮೀದೇವಿ ಕೋಂ ಆನಂದ, ಸುರುಗೀತೋಪು, ಕಾಗದನಗರ, ಭದ್ರಾವತಿ	ಪರಿಶಿಷ್ಟ ಪಂಗಡ
3.	ಶ್ರೀಮತಿ ರಾಧ ಕೋಂ ಪ್ರೇಮರಾಮ್ ಬಿಷ್ಣೋಯಿ, 11ನೇ ತಿರುವು, ಬಿ.ಹೆಚ್.ರಸ್ತೆ, ಭದ್ರಾವತಿ	ಅಲ್ಪಸಂಖ್ಯಾತರು (ಮಹಿಳೆ)
4.	ಶ್ರೀ ಬಿ.ಜಿ.ಅಪ್ಪಾಜಿ ಬಿನ್ ಗುರುಲಿಂಗಯ್ಯ, ಅರವಿಂದ್ ಇಂಡಸ್ಟ್ರೀಸ್, ಶಂಕರ್ ಟಾಕೀಸ್ ಹತ್ತಿರ, ಬಿ.ಹೆಚ್.ರಸ್ತೆ, ಭದ್ರಾವತಿ	ಹಿಂದುಳಿದ ವರ್ಗ

ಪಿ.ಆರ್. 81 ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ.ಆರ್. ವಲ್ಲೂರ

ಪೀಠಾಧಿಕಾರಿ-2, ವಸತಿ ಇಲಾಖೆ,

ಒಳಾಡಳಿತ ಸಚಿವಾಲಯ

ವಿಷಯ : ಶ್ರೀಮತಿ ಯಶೋದಮ್ಮ, ದ್ವಿ.ದ.ಸ. ರವರ ಪರಿವೀಕ್ಷಣಾ ಅವಧಿಯನ್ನು ವಿಸ್ತರಿಸುವ ಕುರಿತು.

ಓದಲಾಗಿದೆ: ಡಿಜಿ ಮತ್ತು ಐಜಿಪಿ ರವರ ಪತ್ರ ಸಂಖ್ಯೆ ಸಿಬ್ಬಂದಿ-6/73/2008-09, ದಿನಾಂಕ 17-11-2009.

ಪ್ರಸ್ತಾವನೆ :

ಮೇಲೆ ಓದಲಾದ ಪತ್ರದಲ್ಲಿ, ಶ್ರೀಮತಿ ಯಶೋದಮ್ಮ, ದ್ವಿ.ದ.ಸ.ರವರು ಅನುಕಂಪದ ಆಧಾರದ ಮೇಲೆ 2 ವರ್ಷಗಳ ಅವಧಿಯೊಳಗೆ ನಿಗದಿಪಡಿಸಿದ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಬೇಕೆಂಬ ನಿಬಂಧನೆ ಮೇರೆಗೆ ದಿನಾಂಕ 26-10-2005 ರಂದು ನೇಮಕಾತಿ ಹೊಂದಿರುತ್ತಾರೆ. ಸದರಿಯವರು ಕನ್ನಡ ಭಾಷಾ ಪರೀಕ್ಷೆಯಲ್ಲಿ ವಿನಾಯಿತಿಯನ್ನು ಪಡೆದಿರುತ್ತಾರೆ. ಸದರಿಯವರು ಪೊಲೀಸ್ ಮ್ಯಾನ್ಯುಯಲ್ ಪರೀಕ್ಷೆಯಲ್ಲಿ ಅನುತ್ತೀರ್ಣರಾಗಿದ್ದು, ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು, 1977ರ ನಿಯಮ 4(1)(ii)ರ ಅನುಸಾರ ದಿನಾಂಕ 26-10-2007 ರಿಂದ 25-10-2008 ರವರೆಗೆ ಸದರಿಯವರ ಪರಿವೀಕ್ಷಣಾ ಅವಧಿಯನ್ನು ಪೊಲೀಸ್ ಸೂಪರಿಂಟೆಂಡೆಂಟ್ (ಆಡಳಿತ) ಗುಪ್ತವಾರ್ತೆ, ಬೆಂಗಳೂರುರವರು ವಿಸ್ತರಿಸಿರುತ್ತಾರೆ. ಪ್ರಸ್ತುತ ಇವರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ/ನ್ಯಾಯಾಂಗ ನಡವಳಿ/ಚಾಲ್ತಿ ಶಿಕ್ಷೆಗಳಾವುವು ಇರುವುದಿಲ್ಲ ಮತ್ತು ಇವರ ಸೇವೆಯು ತೃಪ್ತಿಕರವಾಗಿರುತ್ತದೆ ಎಂದು ಡಿಜಿ ಮತ್ತು ಐಜಿಪಿ ರವರು ವರದಿ ಮಾಡಿದ್ದು, ಇವರ ಖಾಯಂ ಪೂರ್ವ ಅವಧಿಯನ್ನು ದಿನಾಂಕ 26-10-2008 ರಿಂದ 25-10-2009 ರವರೆಗೆ ವಿಸ್ತರಿಸುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ಒಇ 22 ಪೊಸಿಲಿ 2009, ಬೆಂಗಳೂರು, ದಿನಾಂಕ: 4ನೇ ಜನವರಿ 2010.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಯಶೋದಮ್ಮ, ದ್ವಿತೀಯ ದರ್ಜೆ ಸಹಾಯಕಿ ಇವರ ಖಾಯಂ ಪೂರ್ವ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ಪರಿವೀಕ್ಷಣಾ) ನಿಯಮಗಳು, 1977ರ ನಿಯಮ 4(1)(ಐ)ರನ್ವಯ ದಿನಾಂಕ 26–10–2008 ರಿಂದ 25–10–2009ರ ವರೆಗೆ ವಿಸ್ತರಿಸಿದೆ.

ವಿಸ್ತರಿಸಿದ ಪರಿವೀಕ್ಷಣಾ ಅವಧಿಗೆ ಕ.ನಾ.ಸೇ. (ಪರಿವೀಕ್ಷಣೆ) ನಿಯಮಗಳು 1977ರ ನಿಯಮ 10ರ ಪ್ರಕಾರ ವಾರ್ಷಿಕ ವೇತನ ಬಡ್ತಿಗಳನ್ನು ನೀಡುವಂತಿಲ್ಲ. ಕಾಲ್ಪನಿಕವಾಗಿ ವಾರ್ಷಿಕ ವೇತನ ಬಡ್ತಿಗಳನ್ನು ಬಿಡುಗಡೆ ಮಾಡಿ ವೇತನವನ್ನು ನಿಗದಿಪಡಿಸುವುದು. ಹೀಗೆ ನಿಗದಿಪಡಿಸಿದ ವೇತನದ ಬಾಕಿಯನ್ನು ನೀಡಲು ಅವಕಾಶವಿರುವುದಿಲ್ಲ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್. 82 **(ಟಿ. ಎನ್. ರವಿಪ್ರಕಾಶ್)**

ಸರ್ಕಾರದ ಅಧೀನ ಕಾರ್ಯದರ್ಶಿ, ಒಳಾಡಳಿತ ಇಲಾಖೆ

(ಪೊಲೀಸ್ ಸೇವೆಗಳು)

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ : ಯಾದಗೀರ್ ಜಿಲ್ಲಾ ಸಿವಿಲ್ ಜಡ್ಜ್ (ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯವನ್ನು ಸಿವಿಲ್ ಜಡ್ಜ್ (ಹಿ.ವಿ.) ಮತ್ತು ಸಿ.ಜೆ.ಎಂ. ಯಾದಗೀರ್ ಎಂದು ಮರು ಪದನಾಮಗೊಳಿಸುವ ಬಗ್ಗೆ.

ಓದಲಾಗಿದೆ: 1. ಸರ್ಕಾರಿ ಅಧಿಸೂಚನೆ ಸಂಖ್ಯೆ ಆರ್‌ಡಿ 59 ಬಿಹೆಚ್‌ಯುಡಿಎಪಿಯು 2008, ದಿನಾಂಕ 15–09–2009

2. ಪತ್ರದ ಸಂಖ್ಯೆ ಜಿ.ಓ.ಬಿ. 11, 241/2008, ದಿನಾಂಕ 30–10–2009.

ಪ್ರಸ್ತಾವನೆ :

ಮೇಲೆ (1)ರಲ್ಲಿ ಓದಲಾದ ಸರ್ಕಾರಿ ಅಧಿಸೂಚನೆಯಲ್ಲಿ ಯಾದಗೀರ್ ಜಿಲ್ಲೆಯೆಂದು ಹೊಸ ಜಿಲ್ಲೆಯನ್ನು ಸೃಜಿಸಲಾಗಿದೆ. ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಯಾದಗೀರ್ ಜಿಲ್ಲೆಗೆ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ಹಾಗೂ ಸಿಬ್ಬಂದಿಯನ್ನು ಸೃಜಿಸಲು ಸದರಿ ನ್ಯಾಯಾಲಯಕ್ಕೆ ಪೀಠೋಪಕರಣಗಳು, ಯಂತ್ರೋಪಕರಣಗಳು, ದೂರವಾಣಿ, ಬೆರಳಚ್ಚು ಯಂತ್ರಗಳು, ಫ್ಯಾಕ್ಸ್ ಯಂತ್ರಗಳು, ಲೇಖನ ಸಾಮಗ್ರಿಗಳು ಹಾಗೂ ನ್ಯಾಯಾಧೀಶರಿಗೆ ಕಾರನ್ನು ಖರೀದಿಸಲು ಕೋರಲಾಗಿದೆ. ಈ ನ್ಯಾಯಾಲಯಕ್ಕೆ ಬೇಕಾಗುವ ಲೇಖನ ಸಾಮಗ್ರಿಗಳು, ರಿಜಿಸ್ಟರುಗಳು (ಮೊಹರು) ಹಾಗೂ ನಮೂನೆ ರಿಜಿಸ್ಟರ್‌ಗಳನ್ನು ಸರಬರಾಜು ಮಾಡಲು ನಿರ್ದೇಶಕರು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ಇಲಾಖೆಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಿದೆ. ಮಂಜೂರಾದ ಬೇಲಿಫ್ಸ್ ಮತ್ತು ಪ್ರೊಸಸ್ ಸರ್ವರ್ ಹುದ್ದೆಗಳನ್ನು ಸಿವ್ಹಿಲ್ ಜಡ್ಜ್ (ಹಿ.ವಿ.) ನ್ಯಾಯಾಲಯ, ಯಾದಗೀರ್ ಹುದ್ದೆಗಳನ್ನು ಹೆಚ್ಚುವರಿಯಾಗಿ ಸ್ಥಳಾಂತರಿಸುವಂತೆ ಪ್ರಸ್ತಾಪಿಸಲಾಗಿದ್ದು, ಅದರಂತೆ, ನ್ಯಾಯಾಲಯಕ್ಕೆ ಪಬ್ಲಿಕ್ ಪ್ರಾಸಿಕ್ಯೂಟರ್ ಮತ್ತು ಸರ್ಕಾರಿ ಪ್ಲೀಡರ್ ಹುದ್ದೆಗಳನ್ನು ಮಂಜೂರು ಮಾಡಲು ಕೋರಲಾಗಿದೆ. ಸದರಿ ನ್ಯಾಯಾಲಯದ ಅಧಿಕಾರಿ ಮತ್ತು ಸಿಬ್ಬಂದಿಗಳ ವಾರ್ಷಿಕ ಆವರ್ತ ಮತ್ತು ಅನವರ್ತ ವೆಚ್ಚಗಳಿಗೆ ಮಂಜೂರಾತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಆ ಮೇರೆಗೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಲಾ 219 ಎಲ್‌ಸಿಇ 2009, ಬೆಂಗಳೂರು, ದಿನಾಂಕ: 29ನೇ ಡಿಸೆಂಬರ್ 2009.

ರಾಜ್ಯದಲ್ಲಿ ಯಾದಗೀರ ಜಿಲ್ಲೆಯು ಹೊಸದಾಗಿ ರಚನೆಯಾಗಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

1. ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಅನುಬಂಧ–1 ರಲ್ಲಿ ನಮೂದಿಸಿರುವ ಹುದ್ದೆಗಳೊಂದಿಗೆ ಯಾದಗೀರದಲ್ಲಿ ಪ್ರಾರಂಭಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.
2. ಅಧೀಕ್ಷಾಧಿಕಾರಿಯು (Presiding Officer) ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗೀರ್, ಅಧಿಕಾರವನ್ನು ವಹಿಸಿಕೊಳ್ಳುವ ದಿನಾಂಕದಿಂದ ಜಾರಿಗೆ ಬರುವಂತೆ "ಸಿವಿಲ್ ಜಡ್ಜ್ (ಹಿ.ವಿ.) & ಜೆ.ಎಂ.ಎಫ್.ಸಿ. ಯಾದಗೀರ್" ನ್ಯಾಯಾಲಯವನ್ನು "ಸಿವ್ಹಿಲ್ ಜಡ್ಜ್ (ಹಿ.ವಿ.) & ಸಿ.ಜೆ.ಎಂ. ಯಾದಗೀರ್ ನ್ಯಾಯಾಲಯ" ಎಂದು ಪುನರ್ ನಾಮಕರಣಗೊಳಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.
3. ಯಾದಗೀರ್ ಜಿಲ್ಲಾ ನ್ಯಾಯಾಲಯಕ್ಕೆ ಯಂತ್ರೋಪಕರಣಗಳು, ಪೀಠೋಪಕರಣಗಳು, ದೂರವಾಣಿ, ಬೆರಳಚ್ಚು ಯಂತ್ರಗಳು, ಝೆರಾಕ್ಸ್ ಯಂತ್ರಗಳು, ಫ್ಯಾಕ್ಸ್ ಯಂತ್ರಗಳು, ನ್ಯಾಯಾಧೀಶರ ಅಂಬಾಸಿಡರ್ ಕಾರನ್ನು ಖರೀದಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.
4. ನ್ಯಾಯಾಲಯದ ದಿನನಿತ್ಯದ ಬಳಕೆಗೆ ಅಗತ್ಯವಿರುವ ರಿಜಿಸ್ಟರ್‌ಗಳು, ಮೊಹರು (ಶೀಲು)ಗಳು, ನಮೂನೆಗಳು ಹಾಗೂ ಲೇಖನ ಸಾಮಗ್ರಿಗಳು ಕರ್ನಾಟಕ ರಾಜ್ಯಪತ್ರ ಇವುಗಳನ್ನು ಸರಬರಾಜು ಮಾಡಲು ನಿರ್ದೇಶಕರು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ಇಲಾಖೆ ಇವರಿಗೆ ಸೂಚಿಸಲಾಗಿದೆ.
5. ಸಿವ್ಹಿಲ್ ಜಡ್ಜ್ (ಹಿ.ವಿ.) ನ್ಯಾಯಾಲಯ, ಯಾದಗೀರ್ ಸಿಬ್ಬಂದಿಗೆ ಒಳಪಡುವ ಬೇಲಿಫ್‌ಗಾರರು ಮತ್ತು ಪ್ರೊಸಸ್ ಸರ್ವರ್‌ಗಳನ್ನು ಹೊಸದಾಗಿ ಸ್ಥಾಪಿಸುವ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಯಾದಗೀರ್ ಇಲ್ಲಿಗೆ

ಮಂಜೂರಾಗಿರುವ ಬೇಲಿಫ್ ಮತ್ತು ಪ್ರೊಸಸ್ ಸರ್ವರ್ ಹುದ್ದೆಗಳಿಗೆ ಹೆಚ್ಚುವರಿಯಾಗಿ ಸ್ಥಳಾಂತರಿಸಲು ಸರ್ಕಾರದ ಅನುಮೋದನೆ ನೀಡಲಾಗಿದೆ.

6. ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಯಾದಗೀರ್ ಇಲ್ಲಿಗೆ ಒಂದು ಜಿಲ್ಲಾ ಸರ್ಕಾರಿ ವಕೀಲರ ಹುದ್ದೆ ಮತ್ತು ಒಂದು ಸರ್ಕಾರಿ ಅಭಿಯೋಜಕರ (Public Prosecuter) ಹುದ್ದೆಯನ್ನು ಸೃಜಿಸಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಇದಕ್ಕೆ ವಾರ್ಷಿಕ ತಗಲುವ ಆವರ್ತ ಮತ್ತು ಅನಾವರ್ತ ವೆಚ್ಚವನ್ನು ಲೆಕ್ಕಶೀರ್ಷಿಕೆ ಸಂಖ್ಯೆ "2014–00–105–0–01 (ಸಿಬ್ಬಂದಿ ವೆಚ್ಚಗಳು)" "2014–00–105–0–125" ಅಡಿಯಲ್ಲಿ ಭರಿಸತಕ್ಕದ್ದು.

ದಿನಾಂಕ 19–12–2009ರಂದು ಹೊರಡಿಸಲಾದ ಸಮಸಂಖ್ಯೆ ಸರ್ಕಾರದ ಆದೇಶವನ್ನು ತಕ್ಷಣದಿಂದಲೇ ಜಾರಿಗೆ ಬರುವಂತೆ ಹಿಂದಕ್ಕೆ ಪಡೆಯಲಾಗಿದೆ.

ಇದನ್ನು ಆರ್ಥಿಕ ಇಲಾಖೆಯ ಟಿಪ್ಪಣಿಯ ಸಂಖ್ಯೆ ಆಇ 524 ವೆಚ್ಚ–10/2009, ದಿನಾಂಕ 10–12–2009ರಲ್ಲಿ ನೀಡಲಾದ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 83

(ಇ. ಶಿವಾನಂದ)

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ–1),

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಸರ್ಕಾರಿ ಆದೇಶ ಸಂಖ್ಯೆ: ಲಾ 219 ಎಲ್‌ಸಿಇ 2009, ಬೆಂಗಳೂರು, ದಿನಾಂಕ: 29ನೇ ಡಿಸೆಂಬರ್ 2009.

ಅನುಬಂಧ–01

ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಯಾದಗೀರ್‌ಗೆ ಸೃಜಿಸಲಾದ ಹುದ್ದೆಗಳ ವಿವರ

ಕ್ರ.ಸಂ.	ಹುದ್ದೆಯ ಹೆಸರು	ಹುದ್ದೆಗಳ ಸಂಖ್ಯೆ
1.	ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು	01
2.	ಮುಖ್ಯ ಆಡಳಿತಾಧಿಕಾರಿ	01
3.	ಶಿರಸ್ತೆದಾರರು	03
4.	ತೀರ್ಪು ಬರಹಗಾರರು	01
5.	ಪ್ರಥಮ ದರ್ಜೆ ಸಹಾಯಕರು	06
6.	ದ್ವಿತೀಯ ದರ್ಜೆ ಸಹಾಯಕರು	09
7.	ಬೆರಳಚ್ಚುಗಾರರು	06
8.	ಬೆರಳಚ್ಚುಗಾರರು/ನಕಲು ತಯಾರಕರು	04
9.	ಬೇಲಿಪ್	05
10.	ಅಟೆಂಡರ್	03
11.	ವಾಹನ ಚಾಲಕರು ಜಿಲ್ಲಾ ನ್ಯಾಯಾಲಯ – 01 ಹುದ್ದೆ ಸಿಜೆಎಂ ಕೋರ್ಟ್ – 01 ಹುದ್ದೆ	02
12.	ಪ್ರೊಸಸ್ ಸರ್ವರ್	12
13.	ಪ್ಯೂವನ್	05
	ಒಟ್ಟು	58

(ಇ. ಶಿವಾನಂದ)

ಪಿ.ಆರ್. 83

ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ–1),

ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

FOREST, ECOLOGY AND ENVIRONMENT SECRETARIAT

Sub : Renewal of lease of 0.0037 ha. Of forest land in Sy.No. 144 of Kalghatagi leased for the purpose of burial ground of Christian Community on lease basis.

Read :
1. Letter No. A5 (2) GFL.CR. 13/06-07, Dated 22-08-2006 of Principal Chief Conservator of Forests, Bangalore.
2. State Government letter No. FEE 166 FLL 2006, dated 05-06-2007.

3. Letter No. 4-KRB 370/2007/BAN/1600, dated : 04-01-2008 of Government of India, Ministry of Environment and Forests, Regional Office, Southern Zone, Bangalore.
4. Letter No. A5(2)GFL.CR 01/08-09, Dated 17-07-2009 of Principal Chief Conservator of Forests, Bangalore.
5. State Government letter No. FEE 161 Fll 2009, dated : 30-09-2009.
6. Letter No. 4- KRB 370/2007-BAN/5938, dated : 29-10-2009 of Government of India, Ministry of Environment and Forests, Regional Office, Southern Zone Bangalore.

Preamble:

The Principal Chief Conservator of Forests, Bangalore vide his Letter dated: 22.08.2006 read at (1) above has submitted the proposal to obtain the approval of Government of India under Section 2 of the forest (Conservation) Act, 1980 for diversion of forest land for renewal of lease of 0.00.37 hectares of forest land in Sy.No.144 of Kalghatgi, Dharwad District leased for the purpose of Burial ground of Christian Community in favour of Parish Priest, Holy Rosary Church, Tumarikop for a period of 20 years with effct from 18.05.2001 subect to certain conditions.

Accordingly the proposal was recommended to Government of India vide State Government letter dated 05.06.2007 read at (2) above.

The Government of India, Ministry of Environment and Forests, Regional office,Bangalore vide their letter dated 04.01.2008 read at (3) above has given its approval in Principle (Stage-I) for diversion of 0.0037 ha. Of forest land subject to fulfillment of certain conditions and the same was communicated to the Principal Chief Conservator of Forests, Bangalore for compliance.

The Principal Chief conservator of Forests, Bangalore vide his letter dated 17.07.2009 furnished the compliance report read at (4) above and the same has been sent to Government of India vide State Government letter dated: 30.09.2009 read at (5) above.

Government of India Ministry of Environment and Forests, regional office, south zone , Bangalore vide their letter dated 29.10.2009 read at (6) above has conveyed its approval (Stage-II) under Section 2 of the Forest (Conservation) Act, 1980 for diversion of forest land for renewal of lease of 0.0037 hectares of forest land in Sy.No.144 of Kalghatgi, Dharwad District leased for the purpose of Burial Ground of Christian Community in favour of Parish Priest, Holy Rosary Church, Tumarikop for a period of 20 years with effect from 18.05.2001 subject to certain conditions.

The proposal has been examined in detail and hence the Order.

Government Order No. FEE 161 FLL 2009, Bangalore, dated 01-01-2010.

In the circumstances explained in the preamble above, Government are pleased to accord sanction under Section 2 of the Forest (Conservation) Act, 1980 for diversion of forest land for renewal of lease of 0.0037 hectares of forest land in Sy. No. 144 of Kalghatgi, Dharwad District leased for the purpose of Burial Ground of Christian Community in favour of Priest, Holy Rosary Church, Tumarikop for a period of 20 years with effect from 18.05.2001 subject to the following conditions:-

1. The legal Status of the forest land shall remain unchanged.
2. The land shall be utilized only for the purpose for which it is released.
3. The additional amount of the Net Present Value(NPV) of the diverted forest land if any, due as per the Orders of the Hon'ble Supreme Court dated: 28.03.2008 and 09.05.2008 in IA Nos. 826 in 566 with related IA's in W.P. (Civil) No.202/1995 shall be realized from the user agency and transferred to Ad-hoc CAMPA in account number CA-1582 of Corporation Bank, Block-II, CGO Complex, Phase-I Lodhi Road, New Delhi-110003 under intimation to the Government of India.
4. The total forest area utilised for the project shall not exceed 0.0037 hectares. In case the land is not taken over by the user agency or the same is not used for the stipulated purpose within a period of two years,

then the area shall be taken back by the Forest Department under Section 82 of Karnataka Forest Act 1963.

5. The lease period is for a period of 20 years.
6. The user agency has to pay the lease rent as fixed by the Government at the time of sanction and any subsequent Orders in this regard.
7. Karnataka Forest Act 1963 and Rules 1969 will be applicable for any violation.
8. The user agency has to pay the Net Present Value as per the Government Notification dated: 17.1.2004 (@ Rs. 5.80 to Rs.9.20 lakhs per ha. Depending upon the quantity and density of the land).
9. Any other condition imposed by the Government of India / Government of Karnataka and Principal Chief Conservator of Forests will have to be abided by the lessee.

By Order and in the name of the Governor of Karnataka,

PR. 84

(H.M.MALLIKARJUNA SWAMY)
Under Secretary to Government,
Forest, Ecology and Environment Department.

ಮೂಲಸೌಲಭ್ಯ ಅಭಿವೃದ್ಧಿ ಸಚಿವಾಲಯ

ವಿಷಯ : ದೇವನಹಳ್ಳಿ ಪಟ್ಟಣದ ಸುತ್ತಮುತ್ತಲಿನ ಪ್ರದೇಶವನ್ನು ಜಲಾನಯನ ಆಧಾರದ ಮೇಲೆ ಅಭಿವೃದ್ಧಿಗೊಳಿಸುವ ಮೂಲಕ ಅಂತರ್ಜಲವನ್ನು ಹೆಚ್ಚಿಸಿ ಆ ಪ್ರದೇಶದಲ್ಲಿ ಸುಸ್ಥಿರ ಕೈಗಾರಿಕೆ ಅಭಿವೃದ್ಧಿಗೆ ಸಾಕಷ್ಟು ನೀರು ದೊರಕುವಂತೆ ಮಾಡಲು ಅಗತ್ಯ ಯೋಜನೆ ರೂಪಿಸಲು ಸಮೀಕ್ಷೆಯನ್ನು ಕೈಗೊಳ್ಳಲು ಹಣ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : .

1. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ದಿನಾಂಕ 8.12.2009ರ ಪತ್ರ ಸಂಖ್ಯೆ, ಜಇ/ಜಕೃನಿ(ಭೂಸಾಸಂ)/ಕೃಅ–2/2009–10.
2. ದಿನಾಂಕ 29.10.2009 ರಂದು ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡೆವಳಿ.

ಪ್ರಸ್ತಾವನೆ :

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ ಇವರ ಪತ್ರದಲ್ಲಿ ದೇವನಹಳ್ಳಿ ಪಟ್ಟಣದ ಸುತ್ತಮುತ್ತಲಿನ ಪ್ರದೇಶವನ್ನು ಜಲಾನಯನ ಆಧಾರದ ಮೇಲೆ ಅಭಿವೃದ್ಧಿಗೊಳಿಸುವ ಮೂಲಕ ಅಂತರ್ಜಲವನ್ನು ಹೆಚ್ಚಿಸಿ ಆ ಪ್ರದೇಶದಲ್ಲಿ ಸುಸ್ಥಿರ ಕೈಗಾರಿಕೆ ಅಭಿವೃದ್ಧಿಗೆ ಸಾಕಷ್ಟು ನೀರು ದೊರಕುವಂತೆ ಮಾಡಲು ಅಗತ್ಯ ಯೋಜನೆ ರೂಪಿಸಲು ಸಮೀಕ್ಷೆಯನ್ನು ಕೈಗೊಳ್ಳಲು ಪ್ರಸ್ತಾಪಿಸಿರುತ್ತಾರೆ. ಈ ಸಮೀಕ್ಷೆಗೆ ರೂ. 4.35 ಲಕ್ಷಗಳು ತಗಲುವುದೆಂದು ತಿಳಿಸಿ ಇದರ ಅಂದಾಜನ್ನು ಸಹ ಒದಗಿಸಿ ಸದರಿ ಹಣವನ್ನು ಜಲಾನಯನ ಅಭಿವೃದ್ಧಿ ಅಧಿಕಾರಿ, ಬೆಂಗಳೂರು ಇವರಿಗೆ ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

2. ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 29.10.2009 ರಂದು ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ, ಯೋಜನಾ ವರದಿಯನ್ನು ತಯಾರಿಸಲು ಅಗತ್ಯವಾದ ಮೊತ್ತವನ್ನು BIAAPA ಸಂಗ್ರಹಿಸಿದ ಪುನರುಜ್ಜೀವನ ಸೆಸ್ (Rejuvenation Cess) ಮೂಲಕ ಭರಿಸುವಂತೆ ಸೂಚಿಸಲಾಗಿದೆ. ಅಂತೆಯೇ ಈ ಕೆಳಕಂಡ ಆದೇಶ.

ಸರ್ಕಾರದ ಆದೇಶ ಸಂಖ್ಯೆ, ಮೂಅಇ 119 ರಾಅವಿ 2009, ಬೆಂಗಳೂರು, ದಿನಾಂಕ 01.01.2010.

ಸರ್ಕಾರ ಮೇಲಿನ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ದೇವನಹಳ್ಳಿ ಪಟ್ಟಣದ ಸುತ್ತಮುತ್ತಲಿನ ಪ್ರದೇಶವನ್ನು ಜಲಾನಯನ ಆಧಾರದ ಮೇಲೆ ಅಭಿವೃದ್ಧಿಗೊಳಿಸುವ ಮೂಲಕ ಅಂತರ್ಜಲವನ್ನು ಹೆಚ್ಚಿಸಿ ಆ ಪ್ರದೇಶದಲ್ಲಿ ಸುಸ್ಥಿರ ಕೈಗಾರಿಕೆ ಅಭಿವೃದ್ಧಿಗೆ ಸಾಕಷ್ಟು ನೀರು ದೊರಕುವಂತೆ ಮಾಡಲು ಅಗತ್ಯ ಯೋಜನೆ ರೂಪಿಸಲು ಸಮೀಕ್ಷೆಯನ್ನು ಕೈಗೊಳ್ಳಲು ರೂ. 4.35 ಲಕ್ಷಗಳನ್ನು (ರೂ. ನಾಲ್ಕು ಲಕ್ಷ ಮೂವತ್ತೈದು ಸಾವಿರ) ಮಾತ್ರ ಜಲಾನಯನ ಅಭಿವೃದ್ಧಿ ಅಧಿಕಾರಿ, ಬೆಂಗಳೂರು ಇವರಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಲಾಗಿದೆ.

2. ಈ ಮೊತ್ತವನ್ನು BIAAPA ಸಂಗ್ರಹಿಸಿದ ಪುನರುಜ್ಜೀವನ ಸೆಸ್ (Rejuvenation Cess) ಮೂಲಕ ಹಿಂದಕ್ಕೆ ಪಡೆಯಲಾಗುವುದು.

3. ಲೆಕ್ಕ ಶೀರ್ಷಿಕೆ 3451–00–090–1–06–059– Infrastructure Preliminary Studies – Other Expenditure ಇದರಡಿ 2009–10ನೇ ಸಾಲಿನಲ್ಲಿ ಒದಗಿಸಿರುವ ರೂ.881.00 ಲಕ್ಷಗಳ ಆಯವ್ಯಯದಿಂದ ಭರಿಸತಕ್ಕದ್ದು.

4. ಈ ಮೊತ್ತವನ್ನು ಜಲಾನಯನ ಅಭಿವೃದ್ಧಿ ಅಧಿಕಾರಿ, ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ, ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ತೆಗೆಯುವುದು.

5. ಈ ಆದೇಶವನ್ನು ದಿನಾಂಕ 16.05.2008ರ ಆದೇಶ ಸಂಖ್ಯೆ FD 1 TFP 2008 ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾ ಯೋಜನೆಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

ಪಿ.ಆರ್. 98

(ಕೆ. ಎಸ್. ವೇಣುಗೋಪಾಲ್)

ಸರ್ಕಾರದ ಅಧೀನ ಕಾರ್ಯದರ್ಶಿಯವರ ಪರವಾಗಿ

ಮೂಲಸೌಲಭ್ಯ ಅಭಿವೃದ್ಧಿ ಇಲಾಖೆ

ಇಂಧನ ಸಚಿವಾಲಯ

ವಿಷಯ: ಮೆ: ಮಂಗಳಂ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರ ರದ್ದಾಗಿರುವ 10.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಪೂರ್ವ ಸ್ಥಿತಿಗೆ ತರುವ ಬಗ್ಗೆ.

ಓದಲಾಗಿದೆ:
1) ಸರ್ಕಾರಿ ಆದೇಶ ಸಂ : ಡಿಇ 48 ಎನ್‌ಸಿಇ 2002 ದಿನಾಂಕ 20.06.2002.
2) ಸರ್ಕಾರಿ ಆದೇಶ ಸಂ : ಇಎನ್ 453 ಎನ್‌ಸಿಇ 2008 ದಿನಾಂಕ 8.05.2009.
3) ಸರ್ಕಾರಿ ಪತ್ರ ಸಂ : ಇಎನ್ 324 ಎನ್‌ಸಿಇ 2009 ದಿನಾಂಕ 7.05.2009 ಮತ್ತು 30.07.2009.
4) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ ಕೆಆರ್‌ಇಡಿ/08/ಎಂಇಪಿಎಲ್/2009/1959 ದಿನಾಂಕ 10/16.06.2009, ಸಂಖ್ಯೆ ಕೆಆರ್‌ಇಡಿ/08/ಎಂಇಪಿಎಲ್/2009/2316 ದಿನಾಂಕ 22.7.2009, ಸಂಖ್ಯೆ ಕೆಆರ್‌ಇಡಿ/08/ಎಂಇಪಿಎಲ್/2009/2730 ದಿನಾಂಕ 21/24.08.2009 ಮತ್ತು ಸಂಖ್ಯೆ ಕೆಆರ್‌ಇಡಿ/08/ಎಂಇಪಿಎಲ್/2009/2920 ದಿನಾಂಕ 7.09.2009.
5) ದಿನಾಂಕ 24.11.2009ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇಂಧನ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆ

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಮೆ:: ಮಂಗಳಂ ಎನರ್ಜಿ ಪ್ರೈವೇಟ್ ಲಿಮಿಟೆಡ್ ಕಂಪನಿಗೆ 10.00 ಮೆಗಾ ವ್ಯಾಟ್ ಸಾಮರ್ಥದ ಪವನ ವಿದ್ಯುತ್ ಯೋಜನೆಯನ್ನು ಚಿಕ್ಕಮಗಳೂರು ಜಿಲ್ಲೆಯ ಲಿಂಗದಹಳ್ಳಿ ಗ್ರಾಮದಲ್ಲಿ ಒಡಂಬಡಿಕೆ ಮಾಡಿಕೊಂಡ ದಿನಾಂಕದಿಂದ 3 ವರ್ಷಗಳ ಅವಧಿಯಲ್ಲಿ ಅನುಷ್ಠಾನಗೊಳಿಸಲು ಮಂಜೂರು ಮಾಡಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಆದೇಶದಲ್ಲಿ ಯೋಜನೆ ಹಂಚಿಕೆ ಮಾಡಿ 6 ವರ್ಷಗಳು ಕಳೆದರೂ ಯೋಜನೆಯನ್ನು ಅನುಷ್ಠಾನಗೊಳಿಸದಿರುವುದರಿಂದ ಮೆ:: ಮಂಗಳಂ ಎನರ್ಜಿ ಪ್ರೈವೇಟ್ ಲಿಮಿಟೆಡ್ ಇವರಿಗೆ ಚಿಕ್ಕಮಗಳೂರು ಜಿಲ್ಲೆಯ ಲಿಂಗದಹಳ್ಳಿ ಗ್ರಾಮದಲ್ಲಿ 10.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿರುವ ಆದೇಶ ಮತ್ತು ಈ ಸಂಬಂಧ ಮಾಡಿಕೊಂಡಿರುವ ಒಡಂಬಡಿಕೆಯನ್ನು ರದ್ದು ಪಡಿಸಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ದಿನಾಂಕ : 7.5.2009 ರ ಸರ್ಕಾರಿ ಪತ್ರದಲ್ಲಿ ರದ್ದತಿ ಆದೇಶದ ವಿರುದ್ಧ ಮೆ:: ಮಂಗಳಂ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರು ಸಲ್ಲಿಸಿದ ಪತ್ರ ದಿನಾಂಕ : 27.4.2009 ರ ಪ್ರತಿ ಹಾಗೂ ಅದರ ಅಡಕಗಳನ್ನು ಕ್ರೆಡಲ್‌ಗೆ ಕಳುಹಿಸಿ, ಅಭಿಪ್ರಾಯ/ವರದಿಯನ್ನು ಕಳುಹಿಸಿಕೊಡುವಂತೆ ಹಾಗೂ ದಿನಾಂಕ : 30.7.2009 ರ ಪತ್ರದಲ್ಲಿ ಸದರಿ ಯೋಜನೆಯ ಸ್ಥಳವನ್ನು ಪರಿವೀಕ್ಷಣೆ ಮಾಡಿ ವರದಿ ನೀಡುವಂತೆಯೂ ಕೋರಲಾಗಿತ್ತು.

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ದಿನಾಂಕ : 21/24.8.2009 ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ , ಬೆಂಗಳೂರು ಇವರು ಸದರಿ ಯೋಜನೆಯ ಸ್ಥಳ ಪರಿವೀಕ್ಷಣಾ ವರದಿಯನ್ನು ಕಳುಹಿಸುತ್ತಾ, ಮೆ:: ಮಂಗಳಂ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್‌ರವರು ಗಾಳಿ ಸಮೀಕ್ಷೆ ಕೇಂದ್ರವನ್ನು ಸ್ಥಾಪಿಸಿದ್ದು ಯೋಜನೆಯಲ್ಲಿ ಅನುಷ್ಠಾನಗೊಳಿಸುವ ವಿದ್ಯುತ್ ಜನಕಗಳ ಸ್ಥಳಗಳನ್ನು ಗುರುತಿಸಿದ್ದು ಹಾಗೂ ಮೈಕ್ರೊ ಸೈಟಿಂಗ್ ಸರ್ವೆ ಚಟುವಟಿಕೆಗಳನ್ನು ಮಾಡಿದ್ದು, ಯೋಜನೆಗೆ ಬೇಕಾಗಿರುವ ಭೂ ಪ್ರದೇಶದ ಹಂಚಿಕೆಯ ಸ್ಥಳದ ಸಂಬಂಧ ಅರಣ್ಯ ಇಲಾಖೆಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆಂದು ವರದಿ ಮಾಡಿರುತ್ತಾರೆ.ಅಲ್ಲದೇ ಸದರಿ ಯೋಜನೆಯನ್ನು ಅಭಿವೃದ್ಧಿಪಡಿಸಿ ವಿದ್ಯುತ್ ಉತ್ಪಾದನೆಯಲ್ಲಿ ತೊಡಗುವುದಕ್ಕೆ ಡಿಸೆಂಬರ್ 2010 ರವರೆಗೆ ಯೋಜನೆಯನ್ನು ಪುನಶ್ಚೇತನಗೊಳಿಸುವಂತೆ ಕೋರಿದ್ದಾರೆ.

ಮೇಲೆ ಓದಲಾದ ಕ್ರಮಸಂಖ್ಯೆ (5) ರ ಸಭೆಯಲ್ಲಿ ಈ ಕೆಳಗಿನಂತೆ ನಿರ್ಣಯವಾಗಿರುತ್ತದೆ :

"This is for restoration of the project of 10 MW.
This is in a Forest site. We can restrict the land for 2
acres for a M.W. with road etc., extra to be
determined by the Forest Department. Extension is
granted up to June 2011."

ಸದರಿ ವಿಷಯವನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ ಈ ಕೆಳಕಂಡಂತೆ ಆದೇಶಿಸಲಾಗಿದೆ :–

ಸರ್ಕಾರಿ ಆದೇಶ ಸಂಖ್ಯೆ: ಇಎನ್ 324 ಎನ್‌ಸಿಇ 2009, ಬೆಂಗಳೂರು, ದಿನಾಂಕ: 08.01.2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ : ಇಎನ್ 453 ಎನ್‌ಸಿಇ 2008 ದಿನಾಂಕ: 8.5.2009ರಲ್ಲಿ ಮೆ: ಮಂಗಳಂ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್‌ರವರ ಚಿಕ್ಕಮಗಳೂರು ಜಿಲ್ಲೆಯ ಲಿಂಗದಹಳ್ಳಿ ಗ್ರಾಮದಲ್ಲಿ 10.00 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ರದ್ದತಿ ಆದೇಶವನ್ನು ಹಿಂಪಡೆದು ಯೋಜನೆಯನ್ನು ಪೂರ್ವಸ್ಥಿತಿಗೆ ತರಲಾಗಿದೆ ಹಾಗೂ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಕಾಲಾವಕಾಶವನ್ನು ಜೂನ್ 2011 ರವರೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು ವಿಸ್ತರಿಸಲಾಗಿದೆ.

1. The project land should be restricted for 2 acres for a M.W, with road etc. extra to be determined by the Forest Department.
2. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.
3. ಹಂಚಿಕೆ ಆದೇಶದ ಇತರೆ ನಿಬಂಧನೆಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.99

(ಎಸ್.ಜೆ. ಸಂಪತ್‌ಕುಮಾರ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ

ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವಾಲಯ

ವಿಷಯ: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡಮಿಗೆ ನ್ಯಾನೋ ತಂತ್ರಜ್ಞಾನ ಕಾರ್ಯಕ್ರಮಗಳಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ: 1) ಸರ್ಕಾರಿ ಆದೇಶ ಸಂಖ್ಯೆ : ವಿಯಇ 55 ವಿತ್ರಮ 2009, ದಿನಾಂಕ:16–4–2009
2) ಸರ್ಕಾರಿ ಆದೇಶ ಸಂಖ್ಯೆ : ವಿಯಇ 139 ವಿತ್ರಮ 2007 ದಿನಾಂಕ 12–9–2007
3) ಸರ್ಕಾರಿ ಆದೇಶ ಸಂಖ್ಯೆ : ವಿಯಇ 139 ವಿತ್ರಮ 2007 ದಿನಾಂಕ 27–9–2007
4) ಸರ್ಕಾರಿ ಆದೇಶ ಸಂಖ್ಯೆ : ವಿಯಇ 11 ವಿತ್ರಮ 2009 ದಿನಾಂಕ 27–01–2009

ಪ್ರಸ್ತಾವನೆ :

ಮೇಲೆ ಓದಲಾದ ಕ್ರ.ಸಂ. (1) ರ ಆದೇಶದಲ್ಲಿ ಮಾಹಿತಿ ತಂತ್ರಜ್ಞಾನ,ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವಿಜ್ಞಾನ ಮತ್ತು ತಂತ್ರಜ್ಞಾನ ವಿಭಾಗದಲ್ಲಿ ಚಾಲ್ತಿಯಲ್ಲಿರುವ ಯೋಜನೆಗಳನ್ನು 2009–10ನೇ ಸಾಲಿನಲ್ಲಿ ಮುಂದುವರೆಸಲು ಯೋಜನಾ ಲೆಕ್ಕ ಶೀರ್ಷಿಕೆ 3425–60–200–0–19(101)ರಡಿಯಲ್ಲಿ ನ್ಯಾನೋ ತಂತ್ರಜ್ಞಾನ ಸಮ್ಮೇಳನ–ನ್ಯಾನೋ ಪಾರ್ಕ್ ಸ್ಥಾಪನೆಗಾಗಿ ಒಟ್ಟು ರೂ.200.00 ಲಕ್ಷಗಳ ಅನುದಾನವನ್ನು ಕಲ್ಪಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (2),(3) ಹಾಗೂ (4) ರಲ್ಲಿನ ಸರ್ಕಾರಿ ಆದೇಶಗಳಲ್ಲಿ ಬೆಂಗಳೂರಿನಲ್ಲಿ ನ್ಯಾನೋ ಪಾರ್ಕ್ ಸ್ಥಾಪಿಸಲು ಅವಶ್ಯವಿರುವ ಭೂಸ್ವಾಧೀನ ಹಾಗೂ ತಂತ್ರಜ್ಞಾನ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಅನುವಾಗುವಂತೆ ರೂ.346.00 ಲಕ್ಷಗಳನ್ನು ಸದಸ್ಯ ಕಾರ್ಯದರ್ಶಿ, ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡಮಿ ಇವರಿಗೆ ಬಿಡುಗಡೆ ಮಾಡಲಾಗಿದೆ.

2009–10 ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ 3425ರಡಿ ನ್ಯಾನೋ ತಂತ್ರಜ್ಞಾನಕ್ಕೆ ಬೆಂಬಲಕ್ಕಾಗಿ ರೂ.200.00 ಲಕ್ಷಗಳನ್ನು ಒದಗಿಸಲಾಗಿದೆ. ಅಂತೆಯೇ ಈ ಸಾಲಿನ ಮುಂದುವರೆದ ಯೋಜನೆಗಳ ಸರ್ಕಾರಿ ಆದೇಶದಲ್ಲಿ ಲೆಕ್ಕ ಶೀರ್ಷಿಕೆ 3425–60–200–0–19 (101)ರಡಿ ನ್ಯಾನೋ ತಂತ್ರಜ್ಞಾನಕ್ಕಾಗಿ ರೂ. 200.00 ಲಕ್ಷಗಳನ್ನು ಕಲ್ಪಿಸಲಾಗಿದೆ. ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡಮಿಯ ವತಿಯಿಂದ ನ್ಯಾನೋ ಪಾರ್ಕ್ ಸ್ಥಾಪಿಸಲು ಭೂಸ್ವಾಧೀನ ಒಳಗೊಂಡಂತೆ ಅವಶ್ಯಕ ಕ್ರಮಗಳನ್ನು ಕೈಗೊಳ್ಳುವ ಸಲುವಾಗಿ ಅಕಾಡಮಿಗೆ ಈಗಾಗಲೇ ಬಿಡುಗಡೆ ಮಾಡಿರುವ ಮೊತ್ತಕ್ಕೆ ಪೂರಕವಾಗಿ ಪ್ರಥಮ ಹಂತದಲ್ಲಿ ರೂ.100.00 ಲಕ್ಷಗಳನ್ನು ಬಿಡುಗಡೆ ಮಾಡಲು ತೀರ್ಮಾನಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ವಿಯಇ 8 ವಿತ್ರಮ 2010, ಬೆಂಗಳೂರು, ದಿನಾಂಕ : 05–01–2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ನ್ಯಾನೋ ತಂತ್ರಜ್ಞಾನದ ಬೆಳವಣಿಗೆಗೆ ಅನುವಾಗುವಂತೆ ಬೆಂಗಳೂರಿನಲ್ಲಿ ನ್ಯಾನೋ ಪಾರ್ಕ್ ಸ್ಥಾಪಿಸಲು ಅವಶ್ಯವಿರುವ ಭೂಸ್ವಾಧೀನ ಹಾಗೂ ಇತರ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನಗೊಳಿಸಲು ಅನುವಾಗುವಂತೆ 2009–10ನೇ ಸಾಲಿನಲ್ಲಿ ಮೊದಲನೇ ಹಂತವಾಗಿ ರೂ.100.00 ಲಕ್ಷಗಳನ್ನು (ರೂಪಾಯಿ ಒಂದು ನೂರ ಲಕ್ಷಗಳು ಮಾತ್ರ) ಸದಸ್ಯ ಕಾರ್ಯದರ್ಶಿ , ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡಮಿ, ಬೆಂಗಳೂರು. ಇವರಿಗೆ ಈ ಕೆಳಕಂಡ ನಿಬಂಧನೆ ಮತ್ತು ಷರತ್ತುಗಳಿಗೊಳಪಟ್ಟು ಮಂಜೂರು ಮಾಡಲಾಗಿದೆ.

1) ಈ ಉದ್ದೇಶಿತ ಯೋಜನೆಯ ಖರ್ಚು ವೆಚ್ಚಗಳನ್ನು ಯೋಜನಾ ಲೆಕ್ಕ ಶೀರ್ಷಿಕೆ 3425–60–200–0–19–(101)(ಯೋಜನೆ) ನ್ಯಾನೋ ತಂತ್ರಜ್ಞಾನ ಸಮ್ಮೇಳನ – ನ್ಯಾನೋ ಪಾರ್ಕ್ ಸ್ಥಾಪನೆಯ ಯೋಜನೆಗಳಿಗೆ ಸಹಾಯಾನುದಾನ ಇದರ ಅಡಿಯಲ್ಲಿ ಭರಿಸತಕ್ಕದ್ದು.
2) ಈ ಮೇಲಿನ ಅನುದಾನವನ್ನು ಖರ್ಚು ಮಾಡಿದ ಬಗ್ಗೆ ಸಂಸ್ಥೆಯು ಉಪಯೋಗತಾ ಪ್ರಮಾಣ ಪತ್ರ ಹಾಗೂ ಆಡಿಟ್ ಆದ ಲೆಕ್ಕಪತ್ರಗಳನ್ನು ಸಲ್ಲಿಸತಕ್ಕದ್ದು.
3) ಬಿಡುಗಡೆ ಮಾಡಿದ ಹಣವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಮಾತ್ರ ಉಪಯೋಗಿಸತಕ್ಕದ್ದು ಹಾಗೂ ಈ ಹಣವನ್ನು ಬೇರೆ ಯೋಜನೆಗೆ/ ಕಾರ್ಯಕ್ರಮಗಳಿಗೆ ಸರ್ಕಾರದ ಅನುಮತಿ ಇಲ್ಲದೆ ವರ್ಗಾಯಿಸಬಾರದು.
4) ಉದ್ದೇಶಿತ ಕಾರ್ಯಕ್ರಮಕ್ಕೆ ಖರ್ಚಾಗದ ಬಾಬ್ತು ಅನುದಾನವನ್ನು ಉಳಿಸಿಕೊಂಡು ಅದನ್ನು ಸರ್ಕಾರದ ಗಮನಕ್ಕೆ ತರದೇ ಇದ್ದದ್ದು ಕಂಡು ಬಂದಲ್ಲಿ ಸದರಿ ಮೊತ್ತಕ್ಕೆ ಬ್ಯಾಂಕ್ ನೀಡುವ ಸರಳ ಬಡ್ಡಿಯೊಂದಿಗೆ ಸರ್ಕಾರಕ್ಕೆ ಪಾವತಿಸಿಕೊಳ್ಳಲು ಕ್ರಮಕೈಗೊಳ್ಳಲಾಗುವುದು.
5) ಅನುದಾನವನ್ನು ಬಳಸದೇ ಬ್ಯಾಂಕಿನಲ್ಲಿ ಠೇವಣಿ ಮಾಡಿದ ಪಕ್ಷದಲ್ಲಿ ಅದನ್ನು ಸರ್ಕಾರದ ಗಮನಕ್ಕೆ ತರತಕ್ಕದ್ದು ಮತ್ತು ಅಂತಹ ಠೇವಣಿ ಮೊತ್ತಕ್ಕೆ ದೊರೆಯುವ ಬಡ್ಡಿಯನ್ನು ಹಿಂತೆಗೆದುಕೊಳ್ಳಲು ಕ್ರಮ ತೆಗೆದುಕೊಳ್ಳಲಾಗುವುದು.
6) ಉದ್ದೇಶಿತ ಕಾರ್ಯಕ್ರಮಕ್ಕೆ ಬಿಡುಗಡೆ ಮಾಡಲಾದಂತಹ ಅನುದಾನದ ಲೆಕ್ಕಪತ್ರಗಳನ್ನು ಮಂಜೂರು ಮಾಡುವ ಅಧಿಕಾರಿಯು ಸಮೀಕ್ಷೆಗಾಗಿ ಕೋರಿದ್ದಲ್ಲಿ ತಪ್ಪದೇ ಒದಗಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಆಇ 1 ಟಿಎಫ್‌ಪಿ 2008, ದಿನಾಂಕ 16/05/2008 ರಡಿ ಸರ್ಕಾರದ ಇಲಾಖಾ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಪ್ರದತ್ತವಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.100

(ಕೆ. ಬೋರಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ
ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ.

ಜಲ ಸಂಪನ್ಮೂಲ ಸಚಿವಾಲಯ

ವಿಷಯ : 2009–10 ನೇ ಸಾಲಿನ ಸವಿವರ ಅಂದಾಜಿನಲ್ಲಿ ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆ ಅಡಿ ಅನುಮೋದನೆಯಾಗಿರುವ ಸಣ್ಣ ನೀರಾವರಿ (ಉತ್ತರ) ವಲಯ ಕಾಮಗಾರಿಗಳ ಅಂದಾಜುಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 1. ಪತ್ರ ಸಂಖ್ಯೆ: ಮುಇಂ/ಸನೀ (ಉ) ವಲಯ/ ಬಿಜೆಪಿ/ಎಇ–6/2009–10/ 6495 ದಿನಾಂಕ: 02.11.2009
2. ಪತ್ರ ಸಂಖ್ಯೆ : ಮುಇಂ/ಸನೀ(ಉ) ವಲಯ / ಬಿಜೆಪಿ/ಎಇ–1 / 2009–10 / 7312 ದಿನಾಂಕ: 07.12.2009

ಪ್ರಸ್ತಾವನೆ :

2009–10 ನೇ ಸಾಲಿನ ಆಯವ್ಯಯದ "ಅಪೆಂಡಿಕ್ಸ್–ಇ ನ ಲೆಕ್ಕ ಶೀರ್ಷಿಕೆ 4702–00–101–3–01–422 ವಿಶೇಷ ಘಟಕ ಯೋಜನೆ–ಏತ ನೀರಾವರಿ ಯೋಜನೆಗಳು, ಲೆಕ್ಕ ಶೀರ್ಷಿಕೆ 4702–00–101–01–02–422 ವಿಶೇಷ ಘಟಕ ಯೋಜನೆ ಹೊಸ ಕೆರೆಗಳ ನಿರ್ಮಾಣ, ಲೆಕ್ಕ ಶೀರ್ಷಿಕೆ 4702–00–101–3–01–423 ಗಿರಿಜನ ಉಪಯೋಜನೆ ಏತ ನೀರಾವರಿ ಯೋಜನೆ ಮತ್ತು ಲೆಕ್ಕ ಶೀರ್ಷಿಕೆ 4702–00–101–5–01–423 ಗಿರಿಜನ ಉಪಯೋಜನೆ ಅಣೆಕಟ್ಟು/ಪಿಕಪ್/ಬಾಂದಾರ ನಿರ್ಮಾಣ ಅಡಿ ಅನುಮೋದನೆಯಾಗಿರುವ ಕಾಮಗಾರಿಗಳ ಪೈಕಿ 224.99 ಲಕ್ಷ ರೂ.ಗಳ ಅಂದಾಜು ಮೊತ್ತ ಹೊಂದಿರುವ 5 ಕಾಮಗಾರಿಗಳ (ಕಾಮಗಾರಿವಾರು ವಿವರಗಳನ್ನು ಅನುಬಂಧದಲ್ಲಿ ತಿಳಿಸಲಾಗಿದೆ)

ಅಂದಾಜು ಪಟ್ಟಿಗಳಿಗೆ ಆಡಳಿತಾತ್ಮಕ ಅನುಮೋದನೆ ಕೋರಿ ಮೇಲೆ ಓದಲಾದ ಪತ್ರಗಳಲ್ಲಿ ಸಣ್ಣ ನೀರಾವರಿ ಉತ್ತರ ವಲಯದ ಮುಖ್ಯ ಇಂಜಿನಿಯರ್ ರವರು ಸರ್ಕಾರಕ್ಕೆ ಪ್ರಸಾವನೆ ಸಲ್ಲಿಸಿರುತ್ತಾರೆ.

ಆಡಳಿತಾತ್ಮಕ ಅನುಮೋದನೆಗೆ ಕೋರಿರುವ ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು 2009–10ನೇ ಸಾಲಿಗೆ ಮುಂದುವರೆಸಿರುವ 2007–08ನೇ ಸಾಲಿನ ಸಣ್ಣ ನೀರಾವರಿ ಬೆಳಗಾವಿ ವೃತ್ತದ ದರಪಟ್ಟಿಯ ದರಗಳನ್ನು ಅಳವಡಿಸಿ ತಯಾರಿಸಲಾಗಿದೆ. ಈ ಕಾಮಗಾರಿಗಳು ಆರ್ಥಿಕವಾಗಿ ಹಾಗೂ ತಾಂತ್ರಿಕವಾಗಿ ಶಕ್ಯವಾಗಿದೆ.

ಪ್ರಸ್ತಾಪಿಸಿರುವ ಕಾಮಗಾರಿಗಳ ಅಂದಾಜು ಮೊತ್ತ, ಆಯವ್ಯಯದ ಲೆಕ್ಕ ಶೀರ್ಷಿಕೆ, ಅನುದಾನ, ಕಾಮಗಾರಿಯ ಸ್ವರೂಪ ಹಾಗೂ ಅಂದಾಜಿನಲ್ಲಿ ಅಳವಡಿಸಿರುವ ಕೆಲಸಗಳ ವಿವರ, ಸೃಷ್ಟಿಯಾಗಲಿರುವ ಹೊಸ ಅಚ್ಚುಕಟ್ಟು ಹಾಗೂ ಲಾಭ ವೆಚ್ಚದ ಅನುಪಾತ ವಿವರಗಳನ್ನು ಅನುಬಂಧದಲ್ಲಿ ಕಾಮಗಾರಿವಾರು ನೀಡಲಾಗಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ಸನೀಇ 228 ಮಸಾವಿ 2009, (2), ಬೆಂಗಳೂರು ದಿನಾಂಕ 9ನೇ ಡಿಸೆಂಬರ್–2009

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ವ್ಯಾಪ್ತಿಗೆ ಬರುವ ಅಡಕಗಳಿಸಿರುವ ಅನುಬಂಧದಲ್ಲಿ ತಿಳಿಸಿರುವ ಒಟ್ಟು ರೂ. 224.99 ಲಕ್ಷ (ರೂ. ಎರಡು ನೂರ ಇಪ್ಪತ್ತ ನಾಲ್ಕು ಲಕ್ಷ ತೊಂಬತ್ತೊಂಬತ್ತು ಸಾವಿರ) ಅಂದಾಜು ಮೊತ್ತ ಹೊಂದಿರುವ 5 ಕಾಮಗಾರಿಗಳ ಅಂದಾಜು ಪಟ್ಟಿಗಳಿಗೆ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದೆ.

1. ಕಾಮಗಾರಿಯ ವೆಚ್ಚವು ಯಾವುದೇ ಕಾರಣಕ್ಕೂ ಅನುಮೋದಿಸಿದ ಟೆಂಡರ್ ಮೊತ್ತಕ್ಕಿಂತ ಹೆಚ್ಚಾಗಬಾರದು ಹಾಗೂ ಕಾಮಗಾರಿಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸತಕ್ಕದ್ದು.
2. ಒಂದುವೇಳೆ ಸ್ಥಳ ಪರಿಸ್ಥಿತಿಗೆ ಅನುಗುಣವಾಗಿ ಹೆಚ್ಚಳ ನಿರೀಕ್ಷಿಸಿದಲ್ಲಿ ತಕ್ಷಣವೇ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ಕಾಮಗಾರಿಯನ್ನು ಪೂರ್ಣಗೊಳಿಸತಕ್ಕದ್ದು.
3. ಕಾಮಗಾರಿ ಪ್ರಾರಂಭಿಸುವ ಮುನ್ನ ವಿನ್ಯಾಸ ಬದಲಾವಣೆಯಿಂದಾಗಿ ಅಥವಾ ಬೇರೆ ಕಾರಣದಿಂದ ಅನುಮೋದಿಸಿದ ಅಂದಾಜು ಮೊತ್ತ ಹೆಚ್ಚಾಗುವ ಸಂಭವ ಇದ್ದಲ್ಲಿ ತಕ್ಷಣ ಪರಿಷ್ಕೃತ ಅಂದಾಜಿಗೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆದು ನಂತರ ಕಾಮಗಾರಿಯನ್ನು ಪ್ರಾರಂಭಿಸುವುದು.
4. ಕಾಮಗಾರಿಯ ಅಂದಾಜು ಪಟ್ಟಿಗೆ ಸಂಬಂಧಿಸಿದಂತೆ ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿ/ತಾಂತ್ರಿಕ ಸಮಿತಿಯು ಸಭೆಯಲ್ಲಿ ಮಂಡಿಸಿ ತೀರುವಳಿ ಪಡೆಯತಕ್ಕದ್ದು.
5. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಅನುಸಾರ ಟೆಂಡರ್ ಕರೆದು ತೆಗೆದುಕೊಳ್ಳತಕ್ಕದ್ದು.
6. ಕಾಮಗಾರಿ ಪೂರ್ಣಗೊಂಡ ಕೂಡಲೇ ಪಿ.ಸಿ.ಆರ್ ವರದಿಯನ್ನು ಸಲ್ಲಿಸತಕ್ಕದ್ದು ಹಾಗೂ ಅವಶ್ಯಕತೆ ಇದ್ದಲ್ಲಿ ಪರಿಷ್ಕೃತ ಅಂದಾಜು ತಯಾರಿಸಿ ಟಿ.ಎ.ಸಿ. ಅನುಮೋದನೆ ಪಡೆದು ಸಂಬಂಧಿಸಿದ ಸಕ್ಷಮ ಅಧಿಕಾರಿಗಳಿಗೆ ಅನುಮೋದನೆಗಾಗಿ ಸಲ್ಲಿಸುವುದು.
7. ಕಾಮಗಾರಿಗೆ ಅಗತ್ಯವಿರುವ ಜಮೀನಿನ ಸ್ವಾಧೀನಕ್ಕಾಗಿ ನಿಯಮಾನುಸಾರ ತಕ್ಷಣ ಭೂಸ್ವಾಧೀನ ಪ್ರಕ್ರಿಯೆ ಪ್ರಾರಂಭಿಸಲು ಕ್ರಮ ಕೈಗೊಳ್ಳತಕ್ಕದ್ದು.
8. ಇ.ಐ.ಆರ್.ಎಲ್/ವರ್ಕ್‌ಸ್ಲಿಪ್‌ಗಳನ್ನು ಸಲ್ಲಿಸಬೇಕಾದಲ್ಲಿ ತಕ್ಷಣವೇ ಸಲ್ಲಿಸತಕ್ಕದ್ದು.
9. ತಾಂತ್ರಿಕ ಮಂಜೂರಾತಿಯನ್ನು ನೀಡುವ ಮೊದಲು ಅಂದಾಜನ್ನು ಮತ್ತೊಮ್ಮೆ ವಿವರವಾಗಿ ಪರಿಶೀಲಿಸುವುದು.
10. ನೇರ ಅಚ್ಚುಕಟ್ಟು ಹೊಂದಿರುವ ಯೋಜನೆಗಳಿಗೆ ನೀರು ಬಳಕೆದಾರರ ಸಂಘವನ್ನು ಸೃಜಿಸಬೇಕು ಹಾಗೂ ನಿರ್ವಹಣೆಯನ್ನು ಸದರಿ ಸಂಘಕ್ಕೆ ವಹಿಸತಕ್ಕದ್ದು.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್ ಡಿ 1 ಟಿಎಫ್ ಪಿ 2008, ದಿನಾಂಕ : 16/05/2008ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಲಾದ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಕೆ. ಸುಧಾಕರ ಶೆಟ್ಟಿ

ಪಿ.ಆರ್.2814

ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಅನುಬಂಧ
ಸರ್ಕಾರದ ಆದೇಶ ಸಂಖ್ಯೆ ಸನೀಇ 228 ಮಸಾವಿ 2009(2) ದಿನಾಂಕ 09–12–2009

(ಮೊತ್ತ ಲಕ್ಷ ರೂ.ಗಳಲ್ಲಿ) ಹಾಗೂ (ವಿಸ್ತೀರ್ಣ ಹೆಕ್ಟೇರ್‌ಗಳಲ್ಲಿ)

ಕ್ರಮ ಸಂಖ್ಯೆ	ಕಾಮಗಾರಿ ಹೆಸರು	ಸ್ವೀಕೃತವಾಗಿರುವ ಅಂದಾಜು ಮೊತ್ತ	ಅನುಬಂಧ–ಇ ವಿವರಗಳು		ನದಿ ಕೊಳ್ಳ	ಕಾಮಗಾರಿ ಸ್ವರೂಪ	ಹೊಸ ಅಚ್ಚುಕಟ್ಟು	ಕಾಮಗಾರಿಯ ಸಂಕ್ಷಿಪ್ತ ವಿವರಗಳು
			ಅಂದಾಜು ಮೊತ್ತ	ಅನುದಾನ				
1	2	3	4	5	6	7	8	9
4702–00–101–03–01–422 ವಿಶೇಷ ಘಟಕ ಯೋಜನೆ–ಏತ ನೀರಾವರಿ ಯೋಜನೆಗಳು								
1	ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ತೊದಲಬಾಗಿ ಗ್ರಾಮದ ಹತ್ತಿರ ಏ.ನೀ.ಯೋ ನಿರ್ಮಾಣ	50.00	48.00	19.20	ಕೃಷ್ಣಾ	ಹೊಸ ಕಾಮಗಾರಿ	19.27 ಬೆಳೆ ಕ್ಷೇತ್ರ	ಎರಡು ಹಂತಗಳಲ್ಲಿ ನೀರೆತ್ತಲು ವಿನ್ಯಾಸಿಸಿದ್ದು, 6120 ಮೀ. ಉದ್ದ 140 ಮಿ.ಮಿ. ವ್ಯಾಸದ ಪಿವಿಸಿ ಮಾದರಿಯ ಏರು ಕೊಳವೆ, 10 ಹೆಚ್.ಪಿ. ಸಾಮರ್ಥ್ಯದ ಎರಡು ಪಂಪುಗಳನ್ನು ಮೊದಲನೇ ಹಂತ ದಲ್ಲಿ ಹಾಗೂ 5880 ಮೀ. ಉದ್ದ 140 ಮಿ.ಮಿ. ವ್ಯಾಸದ ಪಿವಿಸಿ ಮಾದರಿಯ ಏರು ಕೊಳವೆ, 10 ಹೆಚ್.ಪಿ. ಸಾಮರ್ಥ್ಯದ ಎರಡು ಪಂಪುಗಳನ್ನು ಎರಡನೇ ಹಂತದಲ್ಲಿ ಯೋಜನೆಯಲ್ಲಿ ಅಳವಡಿಸಿದೆ. ಲಾಭ ವೆಚ್ಚದ ಅನುಪಾತ ಶೇಕಡ 10ರ ಬಡ್ಡಿ ದರದಲ್ಲಿ 1.07
4702–00–101–01–02–422 ವಿಶೇಷ ಘಟಕ ಯೋಜನೆ ಹೊಸ ಕೆರೆಗಳ ನಿರ್ಮಾಣ								
2	ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಓಬಳಾಪುರ ಗ್ರಾಮದ ಹತ್ತಿರ ಇಂಗುಕೆರೆ ನಿರ್ಮಾಣ	40.00	40.00	16.00	ಕೃಷ್ಣಾ	ಹೊಸ ಕಾಮಗಾರಿ	ಪರೋಕ್ಷ ನೀರಾವರಿ	ಏರಿಯ ಉದ್ದ 135 ಮೀ. ಮೇಲ್ಭಾಗದಲ್ಲಿ ಅಗಲ 2.50 ಮಿ. ಗರಿಷ್ಠ ಎತ್ತರ 8.40 ಮೀ. ಶೇಖರಣಾ ಸಾಮರ್ಥ್ಯ–2.67 Mcft ಆಗಿರುತ್ತದೆ.
ಲೆಕ್ಕ ಶೀರ್ಷಿಕೆ 4702–00–101–5–01–423 ಗಿರಿಜನ ಉಪಯೋಜನೆ ಅಣೆಕಟ್ಟು/ಪಿಕಪ್/ಬಾಂದಾರ ನಿರ್ಮಾಣ								
3	ಬೆಳಗಾವಿ ಜಿಲ್ಲೆ ಗೋಕಾಕ ತಾಲ್ಲೂಕಿನ ದಾಸನಹಟ್ಟಿ ಗ್ರಾಮದ ಹತ್ತಿರ ಬ್ಯಾರೇಜ್ ನಿರ್ಮಾಣ	49.99	75.00	30.00	ಕೃಷ್ಣಾ	ಹೊಸ ಕಾಮಗಾರಿ	40	ಹೊಸ ಬಾಂದಾರ ನಿರ್ಮಾಣ ಬ್ಯಾರೇಜಿನ ಉದ್ದ 23.60 ಮೀ. ಎತ್ತರ–3.00 ಮೀ. ಶೇಖರಣಾ ಸಾಮರ್ಥ್ಯ–24.83 Mcft ಶೇ. 10ರ ದರದಲ್ಲಿ ಲಾಭ ವೆಚ್ಚದ ಅನುಪಾತ 3.77 ಆಗಿರುತ್ತದೆ.
ಲೆಕ್ಕ ಶೀರ್ಷಿಕೆ 4702–00–101–3–01–423 ಗಿರಿಜನ ಉಪಯೋಜನೆ ಏತ ನೀರಾವರಿ ಯೋಜನೆ								
4	ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲ್ಲೂಕಿನ ಬಂಡಿಗಣಿ ಗ್ರಾಮದ ಹತ್ತಿರ ಏ.ನಿ.ಯೋ ನಿರ್ಮಾಣ	40.00	40.00	16.00	ಕೃಷ್ಣಾ	ಹೊಸ ಕಾಮಗಾರಿ	14.57	10326 ಮೀ. ಉದ್ದ 160/110/90 ಮಿ.ಮಿ ವ್ಯಾಸದ ಪಿವಿಸಿ ಮಾದರಿಯ ಏರು ಕೊಳವೆ.10 ಹೆಚ್.ಪಿ. ಸಾಮರ್ಥ್ಯದ ನಾಲ್ಕು (3 ಕಾರ್ಯ ನಿರತ ಮತ್ತು 01 ಸ್ಟಾಂಡ್‌ಬೈ) ಪಂಪುಗಳನ್ನು ಯೋಜನೆ ಯಲ್ಲಿ ಅಳ ವಡಿಸಿದೆ ಲಾಭ ವೆಚ್ಚದ ಅನುಪಾತ ಶೇಕಡ 10 ರ ಬಡ್ಡಿ ದರದಲ್ಲಿ 1.48

5	ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಯಡಹಳ್ಳಿ ಸೈಟ್-2 ಹತ್ತಿರ ಏ.ನಿ.ಯೋ ನಿರ್ಮಾಣ	45.00	45.00	18.00	ಕೃಷ್ಣಾ	ಹೊಸ ಕಾಮಗಾರಿ	26.71	6200 ಮೀ. ಉದ್ದ 180 ಮಿ.ಮಿ. ವ್ಯಾಸದ ಪಿವಿಸಿ ಮಾದರಿಯ ಏರು ಕೊಳವೆ, 10 ಹೆಚ್.ಪಿ. ಸಾಮರ್ಥ್ಯದ ಮೂರು ಪಂಪುಗಳನ್ನು ಯೋಜನೆಯಲ್ಲಿ ಅಳವಡಿಸಿದೆ.ಲಾಭ ವೆಚ್ಚ ದ ಅನುಪಾತ ಶೇಕಡ 10ರ ಬಡ್ಡಿ ದರದಲ್ಲಿ 4.55
	ಒಟ್ಟಾರೆ ಒಟ್ಟು	**224.99**	**248.00**	**99.20**				

ಕೆ. ಸುಧಾಕರ ಶೆಟ್ಟಿ

ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ.ಆರ್.2814 ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ

ವಿಷಯ : ಶ್ರೀ. ಎನ್. ಸಿ. ನಾಗರಾಜ ಜಂಟಿ ನಿರ್ದೇಶಕರು. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ. ಇವರನ್ನು ಅಮಾನತ್ತಿನಿಂದ ತೆರವುಗೊಳಿಸಿ ಸೇವೆಗೆ ಮುನರ್ ನೇಮಕ ಮಾಡುವ ಬಗ್ಗೆ.

ಓದಲಾಗಿದೆ:
1. ಅಪರ ಪೋಲೀಸ್ ಮಹಾನಿರ್ದೇಶಕರು. ಕರ್ನಾಟಕ ಲೋಕಾಯುಕ್ತ. ಬೆಂಗಳೂರು. ರವರ ಪತ್ರದ ಸಂಖ್ಯೆ: ಲೋಕ/ಇಎನ್‌ವಿ (ಜಿ). ಎಂ-05/ಸಿಆರ್-02/2009. ಹಾಸನ, ದಿ: 10.02.2009
2. ಸರ್ಕಾರದ ಆದೇಶ ಸಂಖ್ಯೆ: ವಾಕೈ 29 ಕೈಸೇವಿ 09. ಬೆಂಗಳೂರು.ದಿ: 21.03.2009.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ವಾಕೈ29 ಕೈಸೇವಿ 09. ದಿ: 14.05.09
4. ಅಪರ ಪೋಲೀಸ್ ಮಹಾನಿರ್ದೇಶಕರು. ಕರ್ನಾಟಕ ಲೋಕಾಯುಕ್ತ ಬೆಂಗಳೂರು.ರವರ ಪತ್ರ ಸಂಖ್ಯೆ: ಲೋಕ/ಐಎನ್‌ವಿ(ಜಿ). ಎಂ-05/ಸಿಆರ್-02/2009. ಹಾಸನ. ದಿ: 14.02.2009.
5. ಕೈಗಾರಿಕಾಭಿವೃದ್ಧಿ ಆಯುಕ್ತರ ಪತ್ರದ ಸಂಖ್ಯೆ: ಆಡಳಿತ/ಸಿಬ್ಬಂದಿ/ಇ2/02/09-10. ದಿ: 26.10.09.
6. ಸರ್ಕಾರದ ಆದೇಶ ಸಂಖ್ಯೆ: ವಾಕೈ 29 ಕೈಸೇವಿ 09.(ಭಾಗ) ದಿ: 09.11.2009.

ಪ್ರಸ್ತಾವನೆ :

ಮೇಲೆ ಓದಲಾದ (1) ರ ಪತ್ರದಲ್ಲಿ ಅಪರ ಪೋಲೀಸ್ ಮಹಾ ನಿರ್ದೇಶಕರು. ಕರ್ನಾಟಕ ಲೋಕಾಯುಕ್ತ. ಬೆಂಗಳೂರು, ಇವರು ಶ್ರೀ.ಎನ್.ಸಿ. ನಾಗರಾಜ, ಹಿಂದಿನ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ. ಹಾಸನ. ಇವರು ಶ್ರೀ. ಕೆ.ಆರ್. ಜಯಶಂಕರ್. ಬಿನ್ ಕೆ.ಬಿ. ರುದ್ರಪ್ಪ, ಕಲ್ಲು ಶೆಟ್ಟಹಳ್ಳಿ ವಾಸಿ, ಹಳೇಬೀಡು ಹೋಬಳಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ, ರವರಿಂದ ರೂ.5000/- ಗಳ ಲಂಚದ ಹಣಕ್ಕೆ ಒತ್ತಾಯಿಸಿದ್ದರಿಂದ ಫಿರ್ಯಾದಿಯವರಿಗೆ ಲಂಚ ಕೊಡಲು ಇಷ್ಟವಿಲ್ಲದ್ದರಿಂದ ಸದರಿ ಅಧಿಕಾರಿಯ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಲು ಲೋಕಾಯುಕ್ತಕ್ಕೆ ದೂರು ನೀಡಿರುತ್ತಾರೆ.

ಈ ದೂರನ್ನು ಆಧರಿಸಿ, ಪೋಲೀಸ್ ನಿರೀಕ್ಷಕರು. ಕರ್ನಾಟಕ ಲೋಕಾಯುಕ್ತ. ಪೋಲೀಸ್ ಠಾಣೆ. ಹಾಸನ, ರವರು ಸದರಿ ಆರೋಪಿತ ಸರ್ಕಾರಿ ಅಧಿಕಾರಿಯವರ ವಿರುದ್ಧ ಭ್ರಷ್ಟಾಚಾರ ನಿರೋಧಕ ಕಾಯಿದೆ 1988 ಕಲಂ 7 13 (1) (ಡಿ) ರ ಜೊತೆಯಲ್ಲಿ ಓದಲಾದ ಕಲಂ 13(2) ರ ಅಡಿಯಲ್ಲಿ ಮೊಕದ್ದಮೆ ಸಂಖ್ಯೆ: 2/2009 ರ ಪ್ರಕಾರ ಪ್ರಕರಣವನ್ನು ದಾಖಲಿಸಿಕೊಂಡು ತನಿಖೆ ಕೈಗೊಂಡಿರುತ್ತಾರೆ.

ಪಂಚ ಸಾಕ್ಷಿಗಳೊಡನೆ ತನಿಖಾಧಿಕಾರಿ ಮತ್ತು ಅವರ ಸಿಬ್ಬಂದಿ ವರ್ಗದವರು ದಿ: 29.01.2009 ರಂದು ಆರೋಪಿತರ ವಿರುದ್ಧ ಬೀಸಿದ (ಟ್ರ್ಯಾಪ್) ಬಲೆಯು ಯಶಸ್ವಿಯಾಗಿದ್ದು, ಸದರಿ ಆರೋಪಿತ ಸರ್ಕಾರಿ ಅಧಿಕಾರಿಯಾದ ಶ್ರೀ ಎನ್.ಸಿ. ನಾಗರಾಜ. ಹಿಂದಿನ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ, ಇವರು ನೆರಳು ಸಾಕ್ಷಿಯ ಸಮಕ್ಷಮ ಫಿರ್ಯಾದುದಾರರಿಂದ ರೂ.5000/- (ರೂಪಾಯಿ ಐದು ಸಾವಿರ ಮಾತ್ರ)ಗಳ ಲಂಚದ ಹಣವನ್ನು ಒತ್ತಾಯಿಸಿ ಸ್ವೀಕರಿಸಿ ಹಾಸನ. ಜಿಲ್ಲಾ ಲೋಕಾಯುಕ್ತ ಪೋಲೀಸರ ಬಲೆಗೆ ಸಿಕ್ಕಿ ಬಿದ್ದಿರುತ್ತಾರೆ. ಈ ಹಿನ್ನೆಲೆಯಲ್ಲಿ ಆರೋಪಿತ ಅಧಿಕಾರಿಯನ್ನು ಅಮಾನತ್ತಿನಲ್ಲಿಡಲು ಹಾಗೂ ಅವರ ಲೀನ್ (ಸ್ಥಾನ) ನ್ನು ಬೇರೆ ಕಡೆಗೆ ವರ್ಗಾಯಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2)ರ ಆದೇಶದಲ್ಲಿ ಶ್ರೀ ಎನ್.ಸಿ. ನಾಗರಾಜ, ಜಂಟಿ ನಿರ್ದೇಶಕರು ಜಿಲ್ಲಾ ಕೈಗಾರಿಕಾ ಕೇಂದ್ರ ಹಾಸನ. ಇವರು ಫಿರ್ಯಾದುದಾರರಿಂದ ರೂ.5000/- (ರೂಪಾಯಿ ಐದು ಸಾವಿರ ಮಾತ್ರ) ಗಳ ಲಂಚದ ಹಣವನ್ನು ಸ್ವೀಕರಿಸಿರುವುದು ಮೇಲ್ನೋಟಕ್ಕೆ ಸಾಬೀತಾಗಿರುವುದರಿಂದ ಇವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ/ಇಲಾಖಾ ವಿಚಾರಣೆ ಕಾಯ್ದಿರಿಸಿ ಕರ್ನಾಟಕ ನಾಗರೀಕಾ ಸೇವಾ (ವರ್ಗೀಕರಣ,ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ10(2) (ಎ) ರ ಅನ್ವಯ ದಸ್ತಗಿರಿಯಾದ ದಿ: 29.01.09 ರಿಂದಲೇ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದ ವರೆಗೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ : (3) ರಲ್ಲಿ ಶ್ರೀ ಎನ್.ಸಿ. ನಾಗರಾಜ. ಜಂಟಿ ನಿರ್ದೇಶಕರು (ಅಮಾನತ್ತು). ಜಿಲ್ಲಾ ಕೈಗಾರಿಕಾ ಕೇಂದ್ರ. ಹಾಸನ, ಇವರ ಲೀನ್ (ಸ್ಥಾನ)ವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗು ಮುಂದಿನ ಆದೇಶದವರೆಗೆ ಜಂಟಿ ನಿರ್ದೇಶಕರು. ಜಿಲ್ಲಾ ಕೈಗಾರಿಕಾ ಕೇಂದ್ರ. ದಾವಣಗೆರೆ. ಇಲ್ಲಿ ಖಾಲಿಯಿರುವ ಜಂಟಿ ನಿರ್ದೇಶಕರ ಹುದ್ದೆಗೆ ಸ್ಥಳಾಂತರಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (5) ರ ಪತ್ರದಲ್ಲಿ ಶ್ರೀ ಎನ್.ಸಿ. ಚವಾಣ್, ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ. ಚಿತ್ರದುರ್ಗ, ಇವರನ್ನು ಜಂಟಿ ನಿರ್ದೇಶಕರು. ಜಿಲ್ಲಾ ಕೈಗಾರಿಕಾ ಕೇಂದ್ರ. ದಾವಣಗೆರೆಗೆ ವರ್ಗಾವಣೆ ಮಾಡಲಾಗಿದ್ದು, (ಸರ್ಕಾರದ ಅಧಿಸೂಚನೆ ಸಂಖ್ಯೆ: ವಾಕೈ 135 ಕೈಸೇವಿ 09. ದಿ: 15.09.09) ಇವರು ದಿ: 23.09.09 ರಂದು ಪ್ರಭಾರವಹಿಸಿರುತ್ತಾರೆ. ಶ್ರೀ ಎನ್.ಸಿ. ಚವಾಣ್, ಜಂಟಿ ನಿರ್ದೇಶಕರು ಜಿಲ್ಲಾಕೈಗಾರಿಕಾ ಕೇಂದ್ರ. ದಾವಣಗೆರೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವುದರಿಂದ ಶ್ರೀ ಎನ್.ಸಿ. ನಾಗರಾಜ, ರವರ ಜೀವನಾ ಭತ್ಯೆಯನ್ನು ಆ ಹುದ್ದೆಯಲ್ಲಿ ಡ್ರಾ ಮಾಡಲು ಅವಕಾಶವಿರುವುದಿಲ್ಲವೆಂದು ತಿಳಿಸಿ ಇವರ ಲೀನನ್ನು ಸ್ಥಳಾಂತರಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (6)ರ ಆದೇಶದಲ್ಲಿ ಶ್ರೀ. ಎನ್.ಸಿ. ನಾಗರಾಜ. ಹಿಂದಿನ ಜಂಟಿ ನಿರ್ದೇಶಕರು. ಜಿಲ್ಲಾ ಕೈಗಾರಿಕಾ ಕೇಂದ್ರ, ಹಾಸನ, (ಅಮಾನತ್ತು) ಇವರನ್ನು ಹುದ್ದೆಯಿಂದ ತೆಗೆದುಹಾಕುವ (ವಜಾಮಾಡುವ) ಅಧಿಕಾರವುಳ್ಳ ಸಕ್ಷಮ ಪ್ರಾಧಿಕಾರವಾದ ಸರ್ಕಾರವು ಶ್ರೀ. ಎನ್.ಸಿ. ನಾಗರಾಜು. ಹಿಂದಿನ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ. ಹಾಸನ (ಅಮಾನತ್ತು) ಇವರನ್ನು ಲಂಚ ನಿರೋಧ ಕಾಯ್ದೆ ಕಲಂ7. 13(1) (ಡಿ) ರ ಪ್ರಕಾರ ಶಿಕ್ಷಾರ್ಹ ಅಪರಾಧಕ್ಕಾಗಿ ಅಭಿಯೋಗಗೊಳಿಸಲು ಮಂಜೂರಾತಿ ನೀಡಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರ ಪತ್ರದಲ್ಲಿ ಶ್ರೀ. ಎನ್.ಸಿ. ನಾಗರಾಜ. ಹಿಂದಿನ ಜಂಟಿ ನಿರ್ದೇಶಕರು. ಜಿಲ್ಲಾ ಕೈಗಾರಿಕಾ ಕೇಂದ್ರ. ಹಾಸನ ತಾಲ್ಲೂಕ್. ಹಾಸನ. ರವರು ಟ್ರಾಪ್ ಪ್ರಕರಣ ನಡೆದು ಆರು ತಿಂಗಳಾಗುತ್ತಾ ಬಂದಿರುವುದರಿಂದ ಮತ್ತು ಸೇವೆಯ ಅವಧಿಯು ಮುಗಿಯುತ್ತಾ ಬಂದಿರುವುದರಿಂದ ಸೇವೆಗೆ ಪುನರ್ ನೇಮಕ ಮಾಡುವಂತೆ ಕೋರಿರುತ್ತಾರೆ. ಹಾಗೂ ಆಪಾದಿತರನ್ನು ಅಮಾನತ್ತಿನಿಂದ ಬಿಡುಗಡೆ ಮಾಡಿದಾಗ ಬೇರೆ ಸ್ಥಳದಲ್ಲಿ ನಿಯೋಜಿಸಲು ಕೋರಿರುತ್ತಾರೆ. ಹಾಗೂ ಅವರ ಮನವಿಯ ಪತ್ರವನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ : ವಾಕೈ 29 ಕೈಸೇವಿ 09 (ಭಾಗ–2), ಬೆಂಗಳೂರು ದಿನಾಂಕ 22–12–2009

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಪ್ರಕರಣವನ್ನು ಸರ್ಕಾರವು ಪರಿಶೀಲಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಮ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 10(5) (ಸಿ) ರಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಶ್ರೀ. ಎನ್.ಸಿ ನಾಗರಾಜ. ಜಂಟಿ ನಿರ್ದೇಶಕರು. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ. ಇವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ/ಕ್ರಿಮಿನಲ್ ಮೊಕದ್ದಮೆ ಶಿಸ್ತು ಕ್ರಮಗಳನ್ನು ಕಾಯ್ದಿರಿಸಿ ಇವರ ಅಮಾನತ್ತನ್ನು ತಕ್ಷಣದಿಂದ ಜಾರಿಗೆ ಬರುವಂತೆ ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿದೆ.

ಅಮಾನತ್ತನ್ನು ತೆರವುಗೊಳಿಸಿದ ನಂತರ ಶ್ರೀ. ಎನ್.ಸಿ. ನಾಗರಾಜ. ಜಂಟಿ ನಿರ್ದೇಶಕರು. ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ. ಇವರನ್ನು ಜಂಟಿ ನಿರ್ದೇಶಕರು. ಜಿಲ್ಲಾ ಕೈಗಾರಿಕಾ ಕೇಂದ್ರ. ಚಿಕ್ಕಬಳ್ಳಾಪುರ ಇಲ್ಲಿನ ಖಾಲಿ ಹುದ್ದೆಗೆ ಮುಂದಿನ ಆದೇಶದವರೆಗೆ ಸ್ಥಳ ನಿಯುಕ್ತಿಗೊಳಿಸಿ ನೇಮಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ,

ಪಿ.ಆರ್.2891

ಬಿ.ಸಿ. ಪ್ರಕಾಶ್

ಸರ್ಕಾರದ ಅಧೀನ ಕಾರ್ಯದರ್ಶಿ,

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ(ಸೇವೆಗಳು)

COMMERCE & INDUSTRIES SECRETARIAT

Sub : M/s Rajashree Packagers Ltd., Mangalore-Eligibility of the unit for sales tax exemption facility under Agro & Food Processing Policy-Reg.

Read :
1. Govt. Order No. CI 20 SPI 99 dated 13-4-1999 announcing Agro Food Processing Industrial Policy 1999 & package of incentives & concessions.
2. Govt. Order No. CI 20 SPI 99 dated 3-3-2001 withdrawal of Agro Food Processing Policy read in (1) w.e.f. 13-4-1999.
3. Hon'ble High Court Orders on the Writ Petition No. 10855 of 2008 (T-RES) dated 7-1-2009.
4. Proceddings of 92^{nd}, 94^{th} & 97^{th} SLCC meetings held on 3-3-2009, 19-5-2009 & 25-11-2009.

Preamble:

M/s Rajashree Packagers Ltd, is a medium scale, enterprise engaged in manufacture of edible refined oil, textured soya protein and vanaspathi at Sy. No. 5, 6 & 7 of KIADB Indl. Area, Baikampady Mangalore. The project proposal of the unit was approved in the SLSWA meeting held on 7-8-2001.

